ಸಂಪುಟ: 04 ಸಂಚಿಕೆ: 66 ಪುಟಗಳು: 08 ಸೋಮವಾರ 20 ಮೇ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಅರಮನೆಯ ಹಾಳಾದರೆ ಅದು ಪಾಳುಮನೆ ಎನ್ನಿಸಿಕೊಳ್ಳುತ್ತದೆ. ಆದರೆ ದೇವಾಲಯ ಎಷ್ಟು ಹಾಳಾದರೂ ಅದು ದೇವಾಲಯವೆಂದೇ ಎನ್ನಿಸಿಕೊಳ್ಳುತ್ತದೆ ನಿನ್ನ ಬಾಳನ್ನು ದೇವಾಲಯವನ್ನಾಗಿ ಮಾಡಿಕೊ

## ಟಿಎಂಸಿ ಮುಂದಿನ ಪೀಳಿಗೆಯನ್ನು ಅಪಾಯಕ್ಕೆ ದೂಡಿದೆ: ಮೋದಿ

• ಉದಯವಾಹಿನಿ, ಕೋಲ್ಕತ್ತಾ

ಭ್ರಷ್ಟ ಟಿಎಂಸಿ ಪಕ್ಷ ಯುವಕರ ಭವಿಷ್ಯವನ್ನು ಮಾತ್ರವಲ್ಲದೆ ಮುಂದಿನ ಪೀಳಿಗೆಯನ್ನು ಅಪಾಯಕ್ಕೆ ದೂಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ವಾಗ್ದಾಳಿ ನಡೆಸಿದ್ದಾರೆ. ಪಶ್ಚಿಮ ಬಂಗಾಳದ ಬಿಷ್ಣುಪುರದಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಟಿಎಂಸಿ ನಿಮ್ಮ ಮಕ್ಕಳನ್ನು ಬೇರ್ಪಡಿಸಿದ್ದು ಮಾತ್ರವಲ್ಲದೇ ಹಣಕ್ಕಾಗಿ ಹಸಿದಿದೆ. ಇಲ್ಲಿ ಶಿಕ್ಷಕರ ನೇಮಕಾತಿ ಹಗರಣವಿದೆ. ಯುವಕರ ಭವಿಷ್ಯವನ್ನು ಮಾತ್ರವಲ್ಲದೆ ಮುಂದಿನ ಪೀಳಿಗೆಯನ್ನು ಅಪಾಯಕ್ಕೆ ದೂಡಿದೆ ಎಂದು ಕಿಡಿಕಾರಿದರು. ಬಡ ಪೋಷಕರು ತಮ್ಮ ಮನೆ ಮತ್ತು ಭೂಮಿಯನ್ನು ಮಾರಿ, ಟಿಎಂಸಿ ಮಂತ್ರಿಗಳಿಗೆ ಲಂಚ ಕೊಟ್ಟಿದ್ದಾರೆ. ಆದರೆ ಇದರಲ್ಲಿ ಜನಸಾಮಾನ್ಯರ ತಪ್ಪಿಲ್ಲ. ಭ್ರಷ್ಟ ಟಿಎಂಸಿ ನಿಮ್ಮೆಲ್ಲರನ್ನೂ ಮಾರಾಟ ಮಾಡಿದ್ದಾರೆ. ಇದೀಗ ಮೋದಿ ಟಿಎಂಸಿಯವರ ಬಂಗಲೆಗಳು, ಅವರ ಕಾರುಗಳು, ಎಲ್ಲಾವನ್ನೂ ಮಾರಾಟ ಮಾಡಲು ಬಂದಿದ್ದಾರೆ ಎಂದು ಹೇಳಿದರು.

## ತಾಂತ್ರಿಕ ಸಾಕ್ಷ್ಯಾಧಾರ ಕಲೆ ಹಾಕಲು ಮುಂದಾದ ಎಸ್‌ಐಟಿ

• ಉದಯವಾಹಿನಿ, ಬೆಂಗಳೂರು

ಸಂಸದ ಪ್ರಜ್ವಲ್ ರೇವಣ್ಣ ಅವರ ಪೆನ್‌ಡ್ರೈವ್ ಕೇಸ್‌ಗೆ ಸಂಬಂಧಿಸಿದಂತೆ ಎಸ್‌ಐಟಿ ಅಧಿಕಾರಿಗಳು ಇದೀಗ ತಾಂತ್ರಿಕ ಸಾಕ್ಷ್ಯಾಧಾರಗಳನ್ನು ಕಲೆ ಹಾಕಲು ಮುಂದಾಗಿದೆ. ಪ್ರಜ್ವಲ್ ರೇವಣ್ಣ ಅವರ ಪೆನ್ ಡ್ರೈವ್ ಪ್ರಕರಣದ ಬಗ್ಗೆ ತನಿಖೆ ನಡೆಸುತ್ತಿರುವ ಎಸ್‌ಐಟಿ ತಂಡ ಆರೋಪಿಳ ಮನೆ ಹಾಗೂ ಕಚೇರಿಗಳ ಮೇಲೆ ದಾಳಿ ನಡೆಸಿ ಸುಮಾರು 10 ಕ್ಕೂ ಹೆಚ್ಚು ಮೊಬೈಲ್ ಫೋನ್‌ಗಳನ್ನು ವಶಪಡಿಸಿಕೊಂಡು ಪರಿಶೀಲನೆ ನಡೆಸಿದೆ. ಅರದಲ್ಲಿ 3 ಮೊಬೈಲ್‌ಗಳನ್ನು ಹೆಚ್ಚಿನ ತನಿಖೆಗಾಗಿ ಎಫ್‌ಎಸ್‌ಎಲ್ ಗೆ ರವಾನಿಸಲು ಸಿದ್ಧತೆ ನಡೆಸಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ತನಿಖಾ ಸಂಸ್ಥೆ ಪೆನ್ ಡ್ರೈವ್ ಅನ್ನು ಹಂಚಿದವರನ್ನು ಬಂಧಿಸಲು ಮುಂದಾಗಿದೆ. ಈವರೆಗೂ ಮೂವರನ್ನು ಬಂಧಿಸಿದ್ದು, ಉಳಿದ ಆರೋಪಿಗಳ ಬಂಧನಕ್ಕೆ ಬಲೆ ಬೀಸಿದೆ.

## ನೇಹಾ, ಅಂಜಲಿ ಕೊಲೆ ಪ್ರಕರಣ : ಪೊಲೀಸ್ ಅಧಿಕಾರಿಗಳಿಗೆ ಕ್ಲಾಸ್

• ಉದಯವಾಹಿನಿ, ಹುಬ್ಬಳ್ಳಿ

ಒಂದೇ ತಿಂಗಳಿನಲ್ಲಿ ಹುಬ್ಬಳ್ಳಿಯಲ್ಲಿ ಎರಡು ಯುವತಿಯರ ಭೀಕರ ಕೊಲೆ ನಡೆದಿವೆ. ಈ ಒಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು ರಾಜ್ಯ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಎಡಿಜಿಪಿ ಆರ್ ಹಿತೇಂದ್ರ ಅವರು ಹುಬ್ಬಳ್ಳಿ ನಗರಕ್ಕೆ ಭೇಟಿ ನೀಡಿ ಪೊಲೀಸ್ ಅಧಿಕಾರಿಗಳಿಗೆ ಸರಿಯಾದ ರೀತಿ ಕ್ಲಾಸ್ ತೆಗೆದುಕೊಂಡಿರುವ ಘಟನೆ ನಡೆಯಿತು. ಹೌದು ಕಾನೂನು ಮತ್ತು ಸುವ್ಯವಸ್ಥೆಯ ವಿಭಾಗದ ಎಡಿಜಿಪಿ ಹಿತೇಂದ್ರ ಗೌಪ್ಯ ಸಭೆ ನಡೆಸುತ್ತಿದ್ದಾರೆ. ಹುಬ್ಬಳ್ಳಿ ಧಾರವಾಡ ನಗರ ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಈ ಒಂದು ಸಭೆ ನಡೆಯುತ್ತಿದೆ. ಈ ವೇಳೆ ಕೊಲೆ ಪ್ರಕರಣ ಸೇರಿದಂತೆ ಅಕ್ರಮ ಚಟುವಟಿಕೆಗಳ ಸಂಬಂಧ ಸರಿಯಾಗಿ ಕ್ಲಾಸ್ ತೆಗೆದುಕೊಳ್ಳುತ್ತಿದ್ದಾರೆ. ನೇಹಾ ಹಿರೇಮಠ್ ಹಾಗೂ ಅಂಜಲಿ ಅಂಬಿಗೇರ ಕೇಸಿನ ಪಿಂಟು ಪಿನ್ ಮಾಹಿತಿಯನ್ನು ಕೇಳಿದ್ದಾರೆ. ಸಭೆಯಲ್ಲಿ ಅವಳಿ ನಗರದ ಕ್ರೈಂ ಕುರಿತು ಎಡಿಜಿಪಿ ಹಿತೇಂದ್ರ ಅವರು ಮಾಹಿತಿ ಪಡೆಯುತ್ತಿದ್ದಾರೆ. ಅವಳಿ ನಗರದಲ್ಲಿ ಇಲಾಖೆ ಕೈಗೊಂಡ ಕ್ರಮಗಳ ಸಂಬಂಧ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

## ಪ್ರಜ್ವಲ್ ಖಾಸಗಿ ವಿಡಿಯೋ ವಿಚಾರಕ್ಕೂ ನನಗೂ ಸಂಬಂಧವಿಲ್ಲ

• ಉದಯವಾಹಿನಿ, ಬೆಂಗಳೂರು

ಪ್ರಜ್ವಲ್ ಖಾಸಗಿ ವಿಡಿಯೋ ವಿಚಾರಕ್ಕೂ ನನಗೂ ಸಂಬಂಧವಿಲ್ಲ ಎಂದು ಎಲ್‌ಆರ್ ಶಿರಾಮೇಗೌಡ ಹೇಳಿದ್ದಾರೆ. ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರದ್ದು ಎನ್ನಲಾಗಿರುವ ಪೆನ್‌ಡ್ರೈವ್ ವಿಚಾರಕ್ಕೂ ನನಗೂ ಸಂಬಂಧವಿಲ್ಲ. ಯಾವುದೋ ವಿಚಾರದಲ್ಲಿ ನನ್ನ ಹೆಸರು ಹೇಳಿದ್ದಾರೆ. ಪ್ರಕರಣದ ತನಿಖೆಗೆ ಎಸ್‌ಐಟಿ ರಚನೆ ಮಾಡಲಾಗಿದೆ. ಪ್ರಕರಣದ ತನಿಖೆ ಬೇರೆ ಬೇರೆ ದಿಕ್ಕು ಪಡೆಯುತ್ತಿದೆ. ಪ್ರಕರಣ ಎಲ್ಲೆಲ್ಲೋ ಹೋಗುತ್ತಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಬಿಜೆಪಿ ಮುಖಂಡ, ವಕೀಲ ದೇವರಾಜೇಗೌಡ ತಮ್ಮ ಬಳಿ ಕರೆದುಕೊಂಡು ಬನ್ನಿ ಎಂದು ಹೇಳಿರಲಿಲ್ಲ ಎಂದು ಮಾಜಿ ಸಂಸದ ಎಲ್.ಆರ್.ಶಿವರಾಮೇಗೌಡ ಹೇಳಿದರು. ದೇವರಾಜೇಗೌಡ ಜೊತೆ ವ್ಯವಹರಿಸುವಾಗ ಎಚ್ಚರ. ಆತ ನಾಲಾಯಕ್ ವ್ಯಕ್ತಿ, ಒಬ್ಬ ಫ್ರಾಡ್. ಪೆನ್‌ಡ್ರೈವ್ ವ್ಯಾಪಾರಕ್ಕಿಟ್ಟವನೇ ಈ ದೇವರಾಜೇಗೌಡ. ನನಗೂ ಈ ದೇವರಾಜೇಗೌಡಗೂ ಸಂಬಂಧ ಇಲ್ಲ. ಪ್ರಾಮಾಣಿಕವಾಗಿ ಈ ವಿಚಾರದಲ್ಲಿ ತನಿಖೆಯಾಗಲಿ ಎಂದರು. ಪೆನ್‌ಡ್ರೈವ್ ಹೊರಗಿಟ್ಟಿದ್ದು ದೇವರಾಜೇಗೌಡ ಮತ್ತು ಕಾರ್ತಿಕ್. ಹೀಗಾಗಿ ಈ ಇಬ್ಬರನ್ನೂ ವಿಚಾರಣೆ ನಡೆಸಬೇಕು ಎಂದರು.

ಮಾಜಿ ಸಿಎಂ, ಬಿಎಸ್‌ಪಿ ಪ್ರಭಾವಿ ನಾಯಕಿ ಮಾಯಾವತಿ ಕೂಡ ಕೆಲವು ಪ್ರದೇಶಗಳಲ್ಲಿ ಪ್ರಭಾವ ಹೊಂದಿದ್ದು , ಎಷ್ಟು ಸ್ಥಾನ ಗೆಲ್ಲುತ್ತಾರೆ ಎಂಬುದು ಈಗ ದೊಡ್ಡ ಪ್ರಶ್ನೆಯಾಗಿ ಉಳಿದಿದೆ. ಇಂಡಿಯಾ ಒಕ್ಕೂಟ ಸೀಟು ಹಂಚಿಕೆ ಮಾಡಿಕೊಂಡಿದ್ದು , ಪ್ರಬಲ ಪೈಪೋಟಿ ನೀಡುತ್ತಿದೆ. ಪ್ರಮುಖವಾಗಿ ಈಗ ರಕ್ಷಣಾ ಸಚಿವ ರಾಜನಾಥ್‌ಸಿಂಗ್ ಅವರು ನಾಲ್ಕನೆ ಬಾರಿಗೆ ಲಖನೌ ಸೆಂಟ್ರಲ್ ಕ್ಷೇತ್ರದಿಂದ ಕಣಕ್ಕಿಳಿದಿದ್ದು , ಇವರಿಗೆ ಹಾಲಿ ಶಾಸಕ ರವಿದಾಸ್ ಮೆಹೋತ್ರ ಸವಾಲೊಡ್ಡಿದ್ದಾರೆ. ಕೈಸರ್‌ಗಂಜ್ ಲೋಕಸಭಾ ಕ್ಷೇತ್ರ ಪ್ರತಿನಿಧಿಸುತ್ತಿದ್ದ , ಭಾರೀ ವಿವಾದ ಸೃಷ್ಟಿಯಾಗಿದ್ದ ಭಾರತದ ಕುಸ್ತಿ ಫೆಡರೇಷನ್ ಮಾಜಿ ಅಧ್ಯಕ್ಷ ಬ್ರಿಜ್‌ಭೂಷಣ್‌ಶರಣ್‌ಸಿಂಗ್ ಅವರಿಗೆ ಬಿಜೆಪಿ ಟಿಕೆಟ್ ನೀಡಿಲ್ಲ, ಆದರೆ, ಅವರ ಪುತ್ರ ಕರಣ್‌ಭೂಷಣ್ ಸಿಂಗ್ ಅವರನ್ನು ಬಿಜೆಪಿ ಅಭ್ಯರ್ಥಿಯಾಗಿ ಕಣಕ್ಕಿಳಿಸಲಾಗಿದೆ. ಬಿಜೆಪಿ ಹಿರಿಯ ನಾಯಕ ಕೀರ್ತಿವರ್ಧನ್ ಸಿಂಗ್ ಗೋಂಡಾ ಕ್ಷೇತ್ರದಲ್ಲಿ ಐದನೆ ಬಾರಿ ಕಣಕ್ಕಿಳಿದಿದ್ದು , ಎಸ್‌ಪಿಯ ಶ್ರೇಯಾವರ್ಮ ಅವರ ಪ್ರತಿಸ್ಪರ್ಧಿಯಾಗಿದ್ದಾರೆ. ಇನ್ನು ಕೌಶಾಂಬಿ ಕ್ಷೇತ್ರದಲ್ಲಿ ಹ್ಯಾಟ್ರಿಕ್ ಗೆಲುವಿನ ಹುಮಸ್ಸಿನಲ್ಲಿರುವ ವಿನೋದ್‌ಕುಮಾರ್ ಸೋಂಖರ್ ಅವರಿಗೆ ಎಸ್‌ಪಿಯ ಪುಷ್ಪೇಂದ್ರ ಸರೋಜ್ ಸವಾಲೊಡ್ಡಿದ್ದಾರೆ. ಒಟ್ಟಾರೆ ಉತ್ತರ ಪ್ರದೇಶದಲ್ಲಿ ನಡೆಯುತ್ತಿರುವ 14 ಕ್ಷೇತ್ರಗಳು ಭಾರೀ ಜಿದ್ದಾಜಿದ್ದಿನಿಂದ ಕೂಡಿದ್ದು , ಗೆಲುವಿಗಾಗಿ ನಡೆಸಿದ ಕಾರ್ಯತಂತ್ರಗಳು ಮುಗಿದಿದ್ದು , ಇಂದು ಮತದಾನದಲ್ಲಿ ಯಾರ ಕಡೆ ಜನರು ಒಲವು ತೋರುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ.

# ಐದನೇ ಹಂತ ಇಂದೇ ಮತ

## ಇಂದು 8 ರಾಜ್ಯಗಳ 49 ಕ್ಷೇತ್ರಗಳಲ್ಲಿ 5ನೇ ಹಂತದ ಮತದಾನ, ಭಾರೀ ಜಿದ್ದಾಜಿದ್ದಿನ ಹೋರಾಟ



• ಉದಯವಾಹಿನಿ, ನವದೆಹಲಿ:

ಮಹತ್ವದ 5ನೆ ಹಂತದ ಲೋಕಸಭೆ ಚುನಾವಣೆ ಇಂದು ನಡೆಯಲಿದ್ದು, ಭಾರಿ ಕುತೂಹಲ ಕೆರಳಿಸಿದೆ. ಘಟಾನುಘಟಿಗಳು ಸ್ಪರ್ಧಿಸಿರುವ ಹೈವೋಲ್ಟೇಜ್ ಕ್ಷೇತ್ರಗಳು ಇದರಲ್ಲಿ ಬರಲಿದ್ದು, ಈಗಾಗಲೇ ಮತದಾನಕ್ಕೆ ಕ್ಷಣಗಣನೆ ಆರಂಭಗೊಂಡಿದೆ. ಐದನೆ ಹಂತದಲ್ಲಿ ಒಟ್ಟು ಎಂಟು ರಾಜ್ಯಗಳ 49 ಕ್ಷೇತ್ರಗಳಿಗೆ ಚುನಾವಣೆ ನಡೆಯುತ್ತಿದ್ದು, ಇದರಲ್ಲಿ ಉತ್ತರಪ್ರದೇಶದ 14, ಮಹಾರಾಷ್ಟ್ರದ 13, ಪಶ್ಚಿಮ ಬಂಗಾಳದ 7, ಬಿಹಾರ, ಒಡಿಶಾದ 5, ಜಾರ್ಖಂಡ್‌ನ 3 ಜಮ್ಮುಕಾಶ್ಮೀರದ ಒಂದು ಕ್ಷೇತ್ರದಲ್ಲಿ ಮತದಾನ ನಡೆಯಲಿದೆ. ಒಟ್ಟು 695 ಅಭ್ಯರ್ಥಿಗಳು ಕಣದಲ್ಲಿದ್ದು, ಕುತೂಹಲ ಕೆರಳಿಸಿರುವ ಉತ್ತರಪ್ರದೇಶದ ರಾಯ್‌ಬರೇಲಿಯಲ್ಲಿ ರಾಹುಲ್‌ಗಾಂಧಿ, ಅಮೇಥಿಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಇರಾನಿ, ಲಖನೌನಿಂದ ರಕ್ಷಣಾ ಸಚಿವ ರಾಜನಾಥ್‌ಸಿಂಗ್ ಸ್ಪರ್ಧಿಸಲಿದ್ದು, ಪಶ್ಚಿಮ ಬಂಗಾಳದ ಅರಣ್ಯ ಪ್ರದೇಶ ವ್ಯಾಪ್ತಿಯ ಜಂಗಲ್ ಮಹಲ್ ಪ್ರದೇಶದ ಕ್ಷೇತ್ರಗಳಲ್ಲಿ ಕಟ್ಟೆಚ್ಚರವಹಿಸಲಾಗಿದೆ. ಉತ್ತರಪ್ರದೇಶದಲ್ಲಿ ಲಖನೌ, ಮೋಹನ್‌ಲಾಲ್ ಗಂಜ್, ರಾಯ್ ಬರೇಲಿ, ಅಮೇಥಿ, ಜಲೌನ್, ಝೂನ್ಸಿ, ಹಮೀರ್‌ಪುರ್, ಬಂದಾ, ಫತೇಪುರ್, ಕೌಶಾಂಬಿ, ಬಾರಾಬಂಕಿ, ಫೈಜಾಬಾದ್, ಕೈಸರ್‌ಗಂಜ್ ಮತ್ತು ಗೋಂಡಾ ಕ್ಷೇತ್ರಗಳಲ್ಲಿ ಚುನಾವಣೆ ನಡೆಯುತ್ತಿದೆ.ವಸತಿ ಮತ್ತು ನಗರ ವ್ಯವಹಾರಗಳ ರಾಜ್ಯ ಸಚಿವ ಕೌಶಾಲ್ ಕಿಶೋರ್ ಅವರು ಮೋಹನ್‌ಲಾಲ್ ಗಂಜ್‌ನಿಂದ ಸ್ಪರ್ಧಿಸುತ್ತಿದ್ದರೆ, ಗ್ರಾಹಕ ವ್ಯವಹಾರಗಳ ರಾಜ್ಯ ಸಚಿವೆ ಸಾಧ್ವಿ ನಿರಂಜನ್ ಜ್ಯೋತಿ ಫತೇಪುರ್ ಕ್ಷೇತ್ರದಿಂದ ಮರು ಆಯ್ಕೆಗೆ ಕಣದಲ್ಲಿದ್ದಾರೆ. ಇಲ್ಲಿ 2.68 ಕೋಟಿ ಮತದಾರರಿದ್ದು, ಇಂದು ಈ ಘಟಾನುಘಟಿಗಳ ಭವಿಷ್ಯ ನಿರ್ಧರಿಸಲಿದ್ದಾರೆ. ಕಳೆದ ಬಾರಿ ಬಿಜೆಪಿ ಉತ್ತರಪ್ರದೇಶದಲ್ಲಿ ಬಹುತೇಕ ಕ್ಷೇತ್ರಗಳನ್ನು ಗೆದ್ದು ಬೀಗಿತ್ತು. ಅದೇ ಹುಮಸ್ಸಿನಲ್ಲಿ ಈಗ ಮುನ್ನುಗ್ಗುತ್ತಿದ್ದು, ಈಗ ದೋಸ್ತಿಗಳಾಗಿರುವ ಎಸ್‌ಪಿ ಅಖಿಲೇಶ್ ಯಾದವ್ ಮತ್ತು ಕಾಂಗ್ರೆಸ್‌ನ ರಾಹುಲ್ ಗಾಂಧಿ ಭಾರಿ ಸವಾಲೊಡ್ಡಿದ್ದಾರೆ.

**ಮತದಾನದಲ್ಲಿ ಯಾರ ಕಡೆ ಜನರು ಒಲವು**

**ನ್ಯಾಯಸಮತ ಚುನಾವಣೆಗೆ ಈಗಾಗಲೇ ಭಾರಿ ಸಿದ್ಧತೆ**

**ಎಂಟು ರಾಜ್ಯಗಳ 49 ಕ್ಷೇತ್ರಗಳಿಗೆ ಚುನಾವಣೆ**



### ರಾಮಪುರ ಕ್ಷೇತ್ರ

ಇವಿಎಂ ಕುರಿತ ವಿಡಿಯೊಗಳ ರಕ್ಷಣೆ ಭರವಸೆ ನೀಡಿದ ಚುನಾವಣಾ ಆಯೋಗ: ಉತ್ತರಪ್ರದೇಶದ ರಾಮಪುರ ಲೋಕಸಭಾ ಕ್ಷೇತ್ರದ ವಿದ್ಯುನ್ಮಾನ ಮತಯಂತ್ರಗಳಿಗೆ ಸಂಬಂಧಿಸಿದ ವಿಡಿಯೊ ತುಣುಕುಗಳನ್ನು ನಿಯಮಗಳ ಅನುಸಾರ ಕಾಯ್ದಿಡಲಾಗುವುದು ಎಂದು ಚುನಾವಣಾ ಆಯೋಗವು ದೆಹಲಿ ಹೈಕೋರ್ಟ್‌ಗೆ ಹೇಳಿದೆ. ಕ್ಷೇತ್ರದ ಅಭ್ಯರ್ಥಿ, ವಕೀಲ ಮೆಹಮೂದ್ ಪ್ರಾಚಾ ಅವರು ಈ ಕುರಿತಂತೆ ಸಲ್ಲಿಸಿದ್ದ ಅರ್ಜಿಗೆ ಪ್ರತಿಕ್ರಿಯಿಸಿ, ಆಯೋಗ ಈ ಮಾತು ಹೇಳಿದೆ. ಆಯೋಗವನ್ನು ಪ್ರತಿನಿಧಿಸಿದ್ದ ವಕೀಲ ಸಿದ್ದಾಂತ್ ಕುಮಾರ್ ಅವರು, ಯಾವುದೇ ಸಂದರ್ಭದಲ್ಲಿ ವಿಡಿಯೊ ಅಥವಾ ಸಿ.ಸಿ.ಟಿ.ವಿ ದೃಶ್ಯಾವಳಿಗಳ ರಕ್ಷಣೆಗೆ ಚುನಾವಣಾ ಆಯೋಗವು ಬದ್ಧರಾಗಿರಲಿದೆ ಎಂದು ತಿಳಿಸಿದರು. ಆಯೋಗದ ಹೇಳಿಕೆಯನ್ನು ದಾಖಲಿಸಿಕೊಂಡ ನ್ಯಾಯಮೂರ್ತಿ ಸಚಿನ್ ದತ್ತಾ ಅವರು, 'ಅರ್ಜಿದಾರರು ಮತ್ತಾವುದೇ ಬೇಡಿಕೆ ಮಂಡಿಸುವಂತಿಲ್ಲ. ಆಯೋಗದ ಹೇಳಿಕೆ ಪರಿಗಣಿಸಿ ಈ ಅರ್ಜಿ ವಿಲೇವಾರಿ ಮಾಡಲಾಗಿದೆ' ಎಂದು ತಿಳಿಸಿದರು.

### ಬಹಿರಂಗ ಪ್ರಚಾರ ಅಂತ್ಯ

ಬಿಜೆಪಿ ಮತ್ತು 'ಇಂಡಿಯಾ' ಒಕ್ಕೂಟದ ಅಬ್ಬರದ ಘೋಷಣೆ, ವಾಗ್ದಾಳಿಗಳ ನಡುವೆಯೇ 5ನೇ ಹಂತದ ಮತದಾನದ ಬಹಿರಂಗ ಪ್ರಚಾರ ಶನಿವಾರ ಅಂತ್ಯಗೊಂಡಿದೆ. ಈ ಹಂತದಲ್ಲಿ ಸೋಮವಾರ ಎಂಟು ರಾಜ್ಯಗಳ ಮತ್ತು ಕೇಂದ್ರಾಡಳಿತ ಪ್ರದೇಶಗಳ 49 ಕ್ಷೇತ್ರಗಳ ಚುನಾವಣೆ ನಡೆಯಲಿದೆ.

### ನ್ಯಾಯಸಮತ ಚುನಾವಣೆಗೆ ಭಾರಿ ಸಿದ್ಧತೆ

ಇನ್ನು ಭಾರಿ ಹಿಂಸಾಚಾರ ಪೀಡಿತ ಪಶ್ಚಿಮ ಬಂಗಾಳದ ಬಂಗಾವ್, ಬರಾಕ್‌ಪುರ, ಹೌರಾ, ಉಲುಬೇರಿಯಾ, ಶ್ರೀರಾಮಪುರ್, ಪೋಗ್ಲೆ ಸೇರಿದಂತೆ ಏಳು ಲೋಕಸಭಾ ಕ್ಷೇತ್ರಗಳಲ್ಲಿ ಚುನಾವಣೆ ನಡೆಯುತ್ತಿದ್ದು, ಇವು ಭಾರೀ ಸೂಕ್ಷ್ಮ ಪ್ರದೇಶಗಳಾಗಿದ್ದು, ಸಶಸ್ತ್ರ ಪಡೆಗಳನ್ನು ನಿಯೋಜಿಸಲಾಗಿದೆ. ಮಹಾರಾಷ್ಟ್ರದ 13 ಕ್ಷೇತ್ರಗಳಲ್ಲಿ ಚುನಾವಣೆ ನಡೆಯುತ್ತಿದ್ದು, ಇದರಲ್ಲಿ ಮುಂಬೈ ಉತ್ತರ, ಮುಂಬೈ ದಕ್ಷಿಣ, ಮುಂಬೈ ಸೆಂಟ್ರಲ್, ಥಾಣೆ, ನಾಸಿಕ್, ಕಲ್ಯಾಣ್ ಕ್ಷೇತ್ರಗಳಿಗೆ ಬಿಜೆಪಿ ಹಾಗೂ ಶಿಂಧೆ , ಶಿವಸೇನೆ ಮತ್ತು ಎನ್‌ಸಿಪಿ ಜತೆಯಾಗಿ ಕಾಂಗ್ರೆಸ್‌ನ ಘಟಬಂಧನ್ ಅನ್ನು ಎದುರಿಸುತ್ತಿದೆ. ಇಲ್ಲೂ ಕೂಡ ಭಾರೀ ಜಿದ್ದಾಜಿದ್ದಿನ ಹೋರಾಟ ನಿರೀಕ್ಷಿಸಲಾಗಿದೆ. ಇನ್ನು ಜಾರ್ಖಂಡ್‌ನ ಮೂರು ಕ್ಷೇತ್ರಗಳು ನಕ್ಸಲ್ ಬಾಧಿತ ಪ್ರದೇಶ ವ್ಯಾಪ್ತಿಗೆ ಬರುತ್ತಿದ್ದು, ಕಟ್ಟೆಚ್ಚರ ಘೋಷಿಸಲಾಗಿದೆ. ಬಿಹಾರದಲ್ಲಿ ಐದು ಕ್ಷೇತ್ರಗಳಲ್ಲಿ ಚುನಾವಣೆ ನಡೆಯುತ್ತಿದ್ದು, ಇಲ್ಲಿ ಬಿಜೆಪಿ, ಜೆಡಿಯು ಮೈತ್ರಿಕೂಟ ಕಾಂಗ್ರೆಸ್ ಹಾಗೂ ಆರ್‌ಜೆಡಿಯನ್ನು ಎದುರಿಸುತ್ತಿದೆ. ಜಮು-ಕಾಶೀರದ ಬಾರಾಮುಲ್ಲಾದಲ್ಲೂ ಚುನಾವಣೆ ನಡೆಯುತ್ತಿದ್ದು, ಉಗ್ರರ ಚಟುವಟಿಕೆ ಹತ್ತಿಕ್ಕಲು ಈಗಾಗಲೇ ಸೇನಾಪಡೆಗಳು ಹದ್ದಿನ ಕಣ್ಣಿಟ್ಟಿವೆ. ಮುಕ್ತ,ನ್ಯಾಯಸಮತ ಚುನಾವಣೆಗೆ ಈಗಾಗಲೇ ಭಾರಿ ಸಿದ್ಧತೆ ಮಾಡಿಕೊಳ್ಳಲಾಗಿದ್ದು, ಒಟ್ಟಾರೆ ಇಂದು ನಡೆಯಲಿರುವ ಐದನೆ ಹಂತದ ಚುನಾವಣೆ ಅತ್ಯಂತ ಮಹತ್ವ ಪಡೆದುಕೊಂಡಿದೆ.

### ಚುನಾವಣಾ ಕಣದಲ್ಲಿ ಘಟಾನುಘಟಿಗಳು

ಐದನೇ ಹಂತದಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ (ರಾಯ್‌ಬರೇಲಿ), ಬಿಜೆಪಿಯ ಸ್ಮೃತಿ ಇರಾನಿ (ಅಮೇಠಿ), ಕೇಂದ್ರ ಸಚಿವರಾದ ರಾಜನಾಥ ಸಿಂಗ್ (ಲಖನೌ), ಪೀಯೂಷ್ ಗೋಯಲ್ (ಮುಂಬೈ ಉತ್ತರ), ಒಮರ್ ಅಬ್ದುಲ್ಲಾ (ಬಾರಾಮುಲ್ಲಾ) ಮತ್ತು ಆರ್‌ಜೆಡಿಯ ರೋಹಿಣಿ ಆಚಾರ್ಯ ಅವರಂತಹ ಪ್ರತಿಷ್ಠಿತರ ಕ್ಷೇತ್ರಗಳಲ್ಲಿ ಮತದಾನವು ನಡೆಯಲಿದೆ. 2019ರ ಲೋಕಸಭಾ ಚುನಾವಣೆಯಲ್ಲಿ ಈ 49 ಕ್ಷೇತ್ರಗಳ ಪೈಕಿ 32ರಲ್ಲಿ ಬಿಜೆಪಿ ಗೆದ್ದಿತ್ತು. ಕಾಂಗ್ರೆಸ್ ರಾಯ್‌ಬರೇಲಿಯಲ್ಲಿ ಮಾತ್ರ ಗೆಲುವು ಸಾಧಿಸಿತ್ತು. 'ಇಂಡಿಯಾ' ಕೂಟವು ಕೇವಲ 6 ಕ್ಷೇತ್ರಗಳಲ್ಲಿ ಗೆದ್ದಿತ್ತು. ಬಿಜೆಡಿ ಎರಡು ಹಾಗೂ ಎನ್‌ಡಿಎ 41 ಕ್ಷೇತ್ರಗಳಲ್ಲಿ ಜಯ ಸಾಧಿಸಿತ್ತು. ಈ ಬಾರಿ, ಬಿಜೆಪಿ 40 ಕ್ಷೇತ್ರಗಳಲ್ಲಿ ಸ್ಪರ್ಧಿಸಿದ್ದರೆ, ಕಾಂಗ್ರೆಸ್ ಕೇವಲ 18 ಕ್ಷೇತ್ರಗಳಲ್ಲಿ ಅಖಾಡಕ್ಕಿಳಿದಿದೆ. ಉತ್ತರ ಪ್ರದೇಶ, ಜಮ್ಮು ಮತ್ತು ಕಾಶ್ಮೀರ, ಜಾರ್ಖಂಡ್, ಪಶ್ಚಿಮ ಬಂಗಾಳ ಮತ್ತು ಬಿಹಾರದ ಉಳಿದ ಕ್ಷೇತ್ರಗಳನ್ನು 'ಇಂಡಿಯಾ' ಕೂಟದ ತನ್ನ ಮಿತ್ರಪಕ್ಷಗಳಿಗೆ ಬಿಟ್ಟುಕೊಟ್ಟಿದೆ.

## ರಾಜ್ಯದಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗಿಲ್ಲ

• ಉದಯವಾಹಿನಿ, ತುಮಕೂರು

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹತೋಟಿಯಲ್ಲಿದೆ. ಬಿಜೆಪಿಯವರನ್ನು ಕೇಳಿಕೊಂಡು ಕಾನೂನು ಪಾಲನೆ ಮಾಡುತ್ತಿಲ್ಲ. ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ (ಎನ್‌ಸಿಆರ್‌ಬಿ)ಯ ನಾಲ್ಕು ತಿಂಗಳ ಹಳೆಯ ವರದಿಯನ್ನು ಆಧರಿಸಿ ಪರಿಸ್ಥಿತಿಯನ್ನು ಅಂದಾಜಿಸಲು ಸಾಧ್ಯವಿಲ್ಲ ಎಂದು ಗೃಹ ಸಚಿವ ಡಾ.ಜಿ ಪರಮೇಶ್ವರ ಹೇಳಿದ್ದಾರೆ.

ರಾಜ್ಯದಲ್ಲಿ ಅಪರಾಧ ಪ್ರಕರಣಗಳ ಪ್ರಮಾಣ ಹೆಚ್ಚಾಗಿದೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, ಎನ್‌ಸಿಆರ್‌ಬಿ ಬಿಡುಗಡೆ ಮಾಡಿರುವ ವರದಿ ನನ್ನ ಗಮನಕ್ಕೆ ಬಂದಿದ್ದು, ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು. ಆದರೆ, ಘಟನೆಗಳ ಕಾರಣಗಳು ಒಂದರಿಂದ ಇನ್ನೊಂದಕ್ಕೆ ಭಿನ್ನವಾಗಿರುವುದರಿಂದ ನಾಲ್ಕು ತಿಂಗಳ ವರದಿಯನ್ನು ಆಧರಿಸಿ ವಿಶ್ಲೇಷಣೆ ಮಾಡಲು ಸಾಧ್ಯವಾಗುವುದಿಲ್ಲ ಎಂದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ನಿಯಂತ್ರಣದಲ್ಲಿದೆ ಮತ್ತು ನಾವು ಬಿಜೆಪಿಯಿಂದ ಪಾಠ ಕಲಿಯಬೇಕಾಗಿಲ್ಲ. ಬಿಜೆಪಿಯವರು ಕಾನೂನು ಸುವ್ಯವಸ್ಥೆ ಹಾಳು ಮಾಡಲು ಎಷ್ಟೇ ಪ್ರಯತ್ನಿಸಿದರೂ ಜನರ ಸುರಕ್ಷತೆಗಾಗಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲು ನಾವು ಸಿದ್ಧರಿದ್ದೇವೆ ಎಂದರು.


ಬಿಜೆಪಿಯವರ ಆಡಳಿತದಲ್ಲಿ ಎಷ್ಟು ಕೊಲೆಗಳು ನಡೆದಿದ್ದವು. ನಮ್ಮ ಸರ್ಕಾರದ ಅವಧಿಯಲ್ಲಿ ಎಷ್ಟು ನಡೆದಿವೆ ಎಂಬ ಅಂಕಿಅಂಶಗಳನ್ನು ಬಿಡುಗಡೆ ಶೀಘ್ರದಲ್ಲೇ ಮಾಡಲಾಗುವುದು. ಆಗ ಯಾರ ಅವಧಿಯಲ್ಲಿ ಹೆಚ್ಚು ಕೊಲೆಗಳು ನಡೆದಿದ್ದವು ಎಂಬುದು ಜನರಿಗೆ ಗೊತ್ತಾಗುತ್ತದೆ ಎಂದು ತಿಳಿಸಿದರು.



## ಕಾಂಗ್ರೆಸ್ ಬಂದಮೇಲೆ 490 ಕೊಲೆ 600 ರೈತರ ಆತ್ಮಹತ್ಯೆ

• ಉದಯವಾಹಿನಿ, ಹುಬ್ಬಳ್ಳಿ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ರಾಜ್ಯಾದ್ಯಂತ ಬರೋಬ್ಬರಿ 490 ಕೊಲೆಗಳು ನಡೆದಿವೆ. ಜೊತೆಗೆ, 600ಕ್ಕೂ ಅಧಿಕ ರೈತರ ಆತ್ಮಹತ್ಯೆಗಳಾಗಿವೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಮಾಹಿತಿ ನೀಡಿದರು ಹುಬ್ಬಳ್ಳಿಯಲ್ಲಿ ಕೆಲವು ದಿನಗಳ ಹಿಂದೆ ಭೀಕರವಾಗಿ ಕೊಲೆಯಾದ ಅಂಜಲಿ ಮನೆಗೆ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ರಾಜ್ಯ ಸರ್ಕಾರಕ್ಕೆ ಗಂಭೀರತೆ ಇಲ್ಲ.



ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಮೇಲೆ 490 ಕೊಲೆ ಹಾಗೂ 600 ರೈತರ ಆತ್ಮಹತ್ಯೆಗಳಾಗಿವೆ. ಇದನ್ನ ಪ್ರಶ್ನೆ ಮಾಡಿದರೆ, ಈ ಹಿಂದೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಎಷ್ಟು ಪ್ರಕರಣಗಳಾಗಿವೆ ಅಂತಾ ಹುಡುಕಲು ಅಧಿಕಾರಿಗಳನ್ನು ನೇಮಿಸುತ್ತಾರೆ ಎಂದರು.

ರಾಜ್ಯದಲ್ಲಿ ಅನೇಕ ಬಡಜನರು ತಮ್ಮ ಮಕ್ಕಳನ್ನ ಕಾಲೇಜಿಗೆ ಶಾಲೆಗೆ ಕಳುಹಿಸಲು ಭಯಪಡುತ್ತಿದ್ದಾರೆ. ಗಂಭೀರ ಘಟನೆ ನಡೆದಾಗ ಯಾರೋ ಒಬ್ಬ ಅಧಿಕಾರಿಯನ್ನು ಸಸ್ಪೆಂಡ್ ಮಾಡಿ ಕೈತೊಳೆದುಕೊಳ್ಳಬಾರದು. ಇಂತಹ ಘಟನೆಗಳಿಂದ ಜನರು ಭಯಗೊಂಡದ್ದಾರೆ. ಜನರೇ ಬಂದು ಹೋರಾಟ ಮಾಡುವ ಪರಿಸ್ಥಿತಿಯನ್ನ ಸರ್ಕಾರ ತಂದುಕೊಳ್ಳಬಾರದು. ಇವರೆಲ್ಲರೂ ಅಧಿಕಾರಿಗಳ ವರ್ಗಾವಣೆಗೆ ಸಿಕ್ಕಾಪಟ್ಟೆ ಹಣ ತೆಗೆದುಕೊಳ್ತಾರೆ. ಗಾಂಜಾ ಅಫೀಮು ಚಟುವಟಿಕೆಗಳಿಗೆ ಕಡಿವಾಣ ಹಾಕಲು ಆಗ್ತಿಲ್ಲ. ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ.

ಈ ಸರ್ಕಾರದಲ್ಲಿ ಹತ್ಯೆ ಹಾಗೂ ಆತ್ಮಹತ್ಯೆ ಪ್ರಕರಣಗಳೇ ಹೆಚ್ಚಾಗುತ್ತಿದ್ದು, ಅಭಿವೃದ್ಧಿಯು ಸಮಾಧಿಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಗೃಹ ಇಲಾಖೆಯನ್ನು ಬೇರೆ ಯಾರೋ ಹೈಜಾಕ್ ಮಾಡಿದ್ದಾರೆ

● ಸರ್ಕಾರವೇ ಅಪರಾಧಿ ಸ್ಥಾನದಲ್ಲಿದೆ ● ಸಿಬಿಐ ತನಿಖೆಯಾದರೆ ಸರ್ಕಾರದವರು ಒಳಗೆ ಹೋಗುತ್ತಾರೆ ● ಆರ್.ಅಶೋಕ್ ಹೊಸ ಬಾಂಬ್

• ಉದಯವಾಹಿನಿ, ಬೆಂಗಳೂರು

ಗೃಹ ಇಲಾಖೆಯು ಡಾ.ಜಿ.ಪರಮೇಶ್ವರ್ ಅವರ ಕೈಯಲ್ಲಿಲ್ಲ. ಇದನ್ನು ಬೇರೆ ಯಾರೋ ಹೈಜಾಕ್ ಮಾಡಿ ನಡೆಸುತ್ತಿದ್ದಾರೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕೊಲೆ, ಕಳ್ಳತನ, ದರೋಡೆ ಹೆಚ್ಚಾಗಿದೆ.

ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರೌಡಿಗಳಿಗೆ, ಕೊಲೆಗಡುಕರಿಗೆ ಹಬ್ಬ. ಈ ಹಬ್ಬಕ್ಕೆ ಕಾಂಗ್ರೆಸ್ಸೇ ನೇರ ಕಾರಣ. ಇತ್ತೀಚೆಗೆ ಹತ್ಯೆಯಾದ ಅಂಜಲಿ ಕುಟುಂಬದವರು ಕೊಲೆಗಾರರನ್ನು ಗಲ್ಲಿಗೇರಿಸಬೇಕು ಎಂದು ಹೇಳಿದ್ದಾರೆ. ಆದರೆ ರಾಜ್ಯ ಸರ್ಕಾರವೇ ಅಪರಾಧಿ ಸ್ಥಾನದಲ್ಲಿದ್ದು, ಸರ್ಕಾರವನ್ನೇ ಗಲ್ಲಿಗೇರಿಸಬೇಕು. ಮಳೆ ಸುರಿಯುವುದಕ್ಕಿಂತ ಹೆಚ್ಚಾಗಿ ಕೊಲೆಗಳು ನಡೆಯುತ್ತಿವೆ ಎಂದರು. ದೇವರಾಜೇಗೌಡ ಸ್ವತಃ ಹೇಳಿಕೆ ನೀಡಿ, ಡಿ.ಕೆ.ಶಿವಕುಮಾರ್ ಅವರ ಧ್ವನಿಮುದ್ರಣ ಬಿಡುಗಡೆ ಮಾಡಿದ್ದಾರೆ. ನಿಜ ಇರುವುದಕ್ಕೆ ದಾಖಲೆ ಬಿಡುಗಡೆ ಮಾಡಿದ್ದು, ಅದಕ್ಕಾಗಿ ಅವರ ಬಂಧನವಾಗಿದೆ. ಲೋಕಸಭೆ ಚುನಾವಣೆಯ ಸಮಯದಲ್ಲಿ ಎಚ್ಚರವಾಗಿರಬೇಕೆಂದು ಹೀಗೆ ಮಾಡಿದ್ದಾರೆ.

**ಸತ್ಯ ಮುಚ್ಚಿ ಹಾಕುವ ಕೆಲಸ**

ಮಾಧ್ಯಮಗಳಲ್ಲಿ ಪ್ರಸಾರವಾಗುವುದನ್ನೂ ತಡೆಯುವ ಉದ್ದೇಶ ಡಿ.ಕೆ.ಶಿವಕುಮಾರ್ ಅವರಿಗಿದೆ ಎಂದರು. ಸುರ್ಜೇವಾಲ, ಡಿ.ಕೆ.ಶಿವಕುಮಾರ್,ಸಿಎಂ ಸಿದ್ದರಾಮಯ್ಯ ಸೇರಿ ಮಾಸ್ಟರ್ ಪ್ಲಾನ್ ಮಾಡಿದ್ದಾರೆ. ಸಿಎಂ ಸಿದ್ದರಾಮಯ್ಯ ಈಗಾಗಲೇ ದಲಿತ ನಾಯಕರನ್ನು ಮುಗಿಸಿದ್ದಾರೆ. ಇದೇ ರೀತಿ ಒಕ್ಕಲಿಗರನ್ನು ಮುಗಿಸಲು ಯೋಜನೆ ರೂಪಿಸಿದ್ದಾರೆ. ಪ್ರಜ್ವಲ್ ರೇವಣ್ಣ ಪ್ರಕರಣವನ್ನು ಸಿಬಿಐಗೆ ವಹಿಸಬೇಕಿದೆ. ಆದರೆ ಸಿಬಿಐ ಬಳಿ ಹೋದರೆ ಸರ್ಕಾರದಲ್ಲಿ ಇರುವವರೇ ಕಂಬಿ ಎಣಿಸಬೇಕಾಗುತ್ತದೆ. ಇಡೀ ಗೃಹ ಇಲಾಖೆಯರನ್ನು ಬೇರೆ ಯಾರೋ ಹೈಜಾಕ್ ಮಾಡಿ ನಡೆಸುತ್ತಿದ್ದಾರೆ.

> ಮಾಜಿ ಪ್ರಧಾನಿ ದೇವೇಗೌಡರನ್ನು ಭೇಟಿಯಾಗಿ ಜನ್ಮದಿನದ ಶುಭಾಶಯ ತಿಳಿಸಿದ್ದೇನೆ. ಇದೇ ವೇಳೆ ರಾಜ್ಯ ರಾಜಕೀಯದ ಕುರಿತಾಗಿ ಕೆಲವು ಮಾತನಾಡಿದ್ದಾರೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದು ವರ್ಷವಾದರೂ ಅಭಿವೃದ್ಧಿ ಕಾರ್ಯಗಳು ನಡೆದಿಲ್ಲವೆಂದು ಬೇಸರ ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು.
>
> **-ಆರ್.ಅಶೋಕ್, ವಿಪಕ್ಷ ನಾಯಕ**



ಮಾಜಿ ಸಚಿವ ರೇವಣ್ಣ ಅವರನ್ನು ಬಂಧಿಸಿದಂತೆ ಚಾಲಕನನ್ನು ಬಂಧಿಸಿಲ್ಲ. ಪೊಲೀಸರು ಕಾಂಗ್ರೆಸ್ ನಾಯಕರು ಹೇಳಿದಂತೆ ಕೇಳುತ್ತಾರೆ ಎಂದರು.

### ಈ ರಾಜ್ಯ ಸರ್ಕಾರವನ್ನೇ ಗಲ್ಲಿಗೇರಿಸಬೇಕು

ದಿನೇ ದಿನೇ ಕರ್ನಾಟಕ ಕ್ರೈಂ ರಾಜ್ಯವಾಗುತ್ತಿದೆ. ಗೃಹ ಸಚಿವರ ಆಣತಿಯಂತೆ ಏನೂ ನಡೆಯುತ್ತಿಲ್ಲ. ರಾಜ್ಯ ಕಾಂಗ್ರೆಸ್ ಸರ್ಕಾರವನ್ನೇ ಗಲ್ಲಿಗೇರಿಸಬೇಕು ಎಂಬುದಾಗಿ ವಿಪಕ್ಷ ನಾಯಕ ಆರ್.ಅಶೋಕ್ ವಾದ್ದಾಳಿ ನಡೆಸಿದ್ದಾರೆ. ಹುಬ್ಬಳ್ಳಿ ನೇಹಾ ಹಿರೇಮಠ್ ಹತ್ಯೆ ಮಾಸೋ ಮುನ್ನವೇ ಮತ್ತೊಂದು ಹತ್ಯೆ ಆಗಿದೆ. ಕಾಂಗ್ರೆಸ್ ಬಂದ್ರೆ ಕೊಲೆಗಡುಕರಿಗೆ ಹಬ್ಬ. ಈ ರಾಜ್ಯ ಸರ್ಕಾರವನ್ನೇ ಗಲ್ಲಿಗೇರಿಸಬೇಕು ಎಂದರು. ಭಯೋತ್ಪಾದಕರು, ಕೊಲೆಗಡುಕರಿಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಕುಮ್ಮಕ್ಕು ನೀಡುತ್ತಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂಬುದಾಗಿ ರಾಜ್ಯ ಸರ್ಕಾರ ವಿರುದ್ಧ ವಿಪಕ್ಷ ನಾಯಕ ಆರ್.ಅಶೋಕ್ ವಾಗ್ದಾಳಿ ನಡೆಸಿದರು.

ಪ್ರಜ್ವಲ್ ರೇವಣ್ಣ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳಲಿ. ಆದರೆ ವೀಡಿಯೋ ಹಂಚಿದವರ ವಿರುದ್ಧ ಕ್ರಮ ವಹಿಸಿಲ್ಲ. ಹೀಗೆ ಕಾಂಗ್ರೆಸ್ ಕಣ್ಣಾಮುಚ್ಚಾಲೆ ಆಟವಾಡುತ್ತಿದೆ. ಪ್ರಕರಣವನ್ನು ಮುಚ್ಚಿಹಾಕಲು ಎಸ್‌ಐಟಿ ಸಿದ್ಧತೆ ಮಾಡುತ್ತಿದೆ ಎಂದರು.

ಹಾಸನ ಸಂಸದ ಪ್ರಜ್ವಲ್ ರೇವಣ್ಣ ವಿರುದ್ಧ ಅಶ್ಲೀಲ ವಿಡಿಯೋ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನಲ್ಲಿ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ವಿಪಕ್ಷ ನಾಯಕ ಆರ್ ಅಶೋಕ್ ಪ್ರಕರಣದ ಕುರಿತಂತೆ ಸಿಬಿಐ ತನಿಖೆ ಆದರೆ ಸರ್ಕಾರದವರು ಒಳಗೆ ಹೋಗುತ್ತಾರೆ ಎಂದು ಹೊಸ ಬಾಂಬ್ ಸಿಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ತಪ್ಪು ಮಾಡಿದವರ ವಿರುದ್ಧ ಕ್ರಮ ಕೈಗೊಳ್ಳಿ ಆದರೆ ಪೆನ್ ಡ್ರೈವ್ ಹಂಚಿದ ಅವರ ಬಗ್ಗೆಯೂ ತನಿಖೆಯಾಗಲಿ. ನ್ಯಾಯಾಂಗ ತನಿಖೆ ಆದರೆ ಮಾತ್ರ ಸತ್ಯ ಹೊರಬರುತ್ತದೆ ಇಲ್ಲದಿದ್ದರೆ ಸತ್ಯ ಮುಚ್ಚಿಹಾಕುವ ಕೆಲಸ ಆಗುತ್ತದೆ ಎಂದರು. ಬೆಂಕಿ ಇಲ್ಲದೆ ಹೊಗೆ ಆಡಲ್ಲ. ಮೋದಿಗೆ ಕೆಟ್ಟ ಹೆಸರು ತರಲು ಮಾಡಿರುವ ಪ್ಲಾನ್ ಆಗಿದೆ. ಒಕ್ಕಲಿಗರನ್ನು ಮುಗಿಸಲು ಕಾಂಗ್ರೆಸ್ ಪಕ್ಷ ಹೊರಟಿದೆ. ದೇವರಾಜೇಗೌಡ ಹೇಳಿರುವುದು ನೂರಕ್ಕೆ ನೂರು ಸತ್ಯ. ಪೆನ್ ಡ್ರೈವ್ ಕೇಸ್ ತನಿಖೆಗೆ ಸಿಬಿಐಗೆ ವಹಿಸಬೇಕು ಎಂದು ಒತ್ತಾಯಿಸಿದರು.

ಗೃಹ ಸಚಿವರ ಅನತಿಯಂತೆ ಏನೋ ನಡೆಯುತ್ತಿಲ್ಲ. ಹುಬ್ಬಳ್ಳಿಯಲ್ಲಿ ನೇಹ ಹತ್ಯೆ ಮಾಸುವ ಮುನ್ನವೇ ಮತ್ತೊಂದು ಕೊಲೆ ನಡೆದಿದೆ.ಕಾಂಗ್ರೆಸ್ ಬಂದರೆ ಕೊಲೆಗಡುಕರಿಗೆ ಹಬ್ಬ. ಈ ರಾಜ್ಯ ಸರ್ಕಾರವನ್ನೇ ಗಲ್ಲಿಗೇರಿಸಬೇಕು. ಭಯೋತ್ಪಾದಕರು ಕೊಲೆಗಡುಕರಿಗೆ ಸರ್ಕಾರ ಕುಮ್ಮಕ್ಕು ನೀಡುತ್ತಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

**ಈ ದಿನದ ದರ** ಪೆಟ್ರೋಲ್: 99.84 ₹/L ಡೀಸೆಲ್ : 85.93 ₹/L ಬಂಗಾರ: ₹7,462/Gram(24ct) ₹6,840/Gram(22ct) ಬೆಳ್ಳಿ: ₹92.50/Gram



## ಸಿದ್ದಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಗುಣ ಗರ್ಭಾತ್ಮಕವಾದ ಮಹತ್ತು

ನಿಜಗುಣರ ಪರಮಾರ್ಥ ಗೀತೆಯ ಮಾತು. ಜಗದ ಸೃಷ್ಟಿಯ ಮೂಲ ಪ್ರಕೃತಿ. ಅದು ಮೂರು ಗುಣಗಳ ಸಾಮ್ಯಾವಸ್ಥೆ. ಈ ಪ್ರಕೃತಿ ಸೃಷ್ಟಿಗೆ ಸನ್ನದ್ಧವಾದ ಒಂದು ಹದ ಸ್ಥಿತಿಯೇ ಮಹತ್ತು. ಬೀಜ ಪ್ರಕೃತಿಯಾದರೆ ಭೂಮಿಯಲ್ಲಿ ಬಿತ್ತನೆಗೊಂಡ ಮೊಳಕೆಯೊಡೆಯಲು ಸಿದ್ಧವಾದ ಹಸಿ ಉಬ್ಬಿದ ಬೀಜದಂತೆ ಮಹತ್ತು. ಬಳಿಕ ಈ ಮಹತ್ತಿನಿಂದ ಹೊರಹೊಮ್ಮಿದ್ದೇ ರಾಜಸ ಸಾತ್ತ್ವಿಕ ತಾಮಸವಾದ ಘೋರ ಶಾಂತ ಮೌಢ್ಯ ಎಂಬ ಮೂರು ವೃತ್ತಿಗಳು. ಇವು ತೋರಿ ಮೂರು ಗುಣಗಳಾದವು. ಈ ಮೂರು ಗುಣಗಳಿಂದ, ಸತ್ತ್ವ ಗುಣದಿಂದ ವೈಕಾರಿಕ ಅಹಂಕಾರ, ರಜೋಗುಣದಿಂದ ತೈಜಸ ಅಹಂಕಾರ, ತಮೋಗುಣದಿಂದ ಭೂತಾದಿ ಅಹಂಕಾರ ಉಂಟಾದವು. ಹೀಗೆ ಇವು ತೋರಿ ಮೂಲ ಮಹತ್ತನ್ನು ಮರೆಮಾಡಿದವು.

## ಮೇ 23 ರಂದು ಕರ್ನಾಟಕದ ಈ ಜಿಲ್ಲೆಗಳಲ್ಲಿ ಮಳೆ, ಯೆಲ್ಲೋ ಅಲರ್ಟ್ ಘೋಷಣೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಗಮನಾರ್ಹ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡದಲ್ಲಿ ಭಾರಿ ಮಳೆ, ಗುಡುಗು ಸಹಿತ ಮಳೆಯಾಗಲಿದೆ. ಇದು ಚಿಕ್ಕಮಗಳೂರು, ಶಿವಮೊಗ್ಗ, ಕೊಡಗು ಜಿಲ್ಲೆಗಳ ಮೇಲೂ ಪರಿಣಾಮ ಬೀರುವ ನಿರೀಕ್ಷೆಯಿದೆ, ಭಾರಿ ಗಾಳಿ, ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎನ್ನಲಾಗಿದೆ. ಉತ್ತರ ಕರ್ನಾಟಕ ಜಿಲ್ಲೆಗಳಾದ ಬಾಗಲಕೋಟೆ, ಬೆಳಗಾವಿ, ಬೀದರ್, ಗದಗ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿಯಲ್ಲಿ ಲಘು ಮಳೆಯಾಗುವ ನಿರೀಕ್ಷೆಯಿದೆ. ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ, ತುಮಕೂರು ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಗುಡುಗು ಸಹಿತ ಸಾಧಾರಣ ಮಳೆಯಾಗುವ ಮುನ್ಸೂಚನೆ ನೀಡಲಾಗಿದೆ.

## ಮಾಜಿ ಸಂಸದ ಎಲ್.ಆರ್ ಶಿವರಾಮೇಗೌಡ ಹೊಸ ಬಾಂಬ್

• ಉದಯವಾಹಿನಿ, ಬೆಂಗಳೂರು

ಪೆನ್ ಡ್ರೈವ್ ವ್ಯಾಪಾರಕ್ಕಿಟ್ಟಿದ್ದೇ ದೇವರಾಜೇಗೌಡ, ನನಗೂ ಪೆನ್ ಡ್ರೈವ್ ಪ್ರಕರಣಕ್ಕೂ ಯಾವುದೇ ಸಂಬಂಧ ಇಲ್ಲ ಎಂದು ಮಾಜಿ ಸಂಸದ ಎಲ್. ಆರ್. ಶಿವರಾಮೇಗೌಡ ಸ್ಫೋಟಕ ಹೇಳಿಕೆ ನೀಡಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪೆನ್ ಡ್ರೈವ್ ಅನ್ನು ಮೊದಲು ವ್ಯಾಪಾರಕ್ಕಿಟ್ಟಿದ್ದೇ ದೇವರಾಜೇಗೌಡ, ಡಿ.ಕೆ.ಶಿವಕುಮಾರ್ ಅವರಿಗಾಗಲಿ, ನನಗಾಗಲಿ ಯಾವುದೇ ಸಂಬಂಧ ಇಲ್ಲ. ನನಗೆ ಮೊದಲು ದೇವರಾಜೇಗೌಡ ಫೋನ್ ಮಾಡಿದ್ದ. ಫೋನ್ ಮಾಡಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿಸುವಂತೆ ಕೇಳಿದ್ದ. ನಾನು ಆಗಲಿ ಎಂದು ಫೋನ್ ನಲ್ಲಿ ಹೇಳಿದ್ದ ಎಂದರು. ಈ ಮಾತನ್ನೇ ಇಟ್ಟುಕೊಂಡು ದೇವರಾಜೇಗೌಡ ಸುಳ್ಳು ಹೇಳುತ್ತಿದ್ದಾನೆ. ಏಪ್ರಿಲ್ 29ರಂದು ಬೆಂಗಳೂರಿನ ಎಂ.ಜಿ ರಸ್ತೆಯ ಬೌರಿಂಗ್ ಕ್ಲಬ್‌ನಲ್ಲಿ ಭೇಟಿ ಮಾಡಿದ್ದೆ ಎಂದು ಹೇಳಿದ್ದಾರೆ.

## ಎಡಿಆರ್ ಸಂಸ್ಥಾಪಕ ತ್ರಿಲೋಚನ್ ಶಾಸ್ತ್ರಿ

• ಉದಯವಾಹಿನಿ, ಬೆಂಗಳೂರು

ಅತಿ ಹೆಚ್ಚುದ್ವೇಷ ಭಾಷಣಗಳನ್ನು ಹೊಂದಿರುವ ದೇಶ ಎಂಬ ಹೆಗ್ಗಳಿಕೆಗೆ ಭಾರತ ಪಾತ್ರವಾಗಿದೆ ಎಂದು ಅಸೋಸಿಯೇಶನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಸಂಸ್ಥಾಪಕ ಮತ್ತು ಅಧ್ಯಕ್ಷ ತ್ರಿಲೋಚನ್ ಶಾಸ್ತ್ರಿ ಅವರು ಹೇಳಿದರು. ನಡೆದ ಪಿಕೆ ಡೇ ಸ್ಮಾರಕ ಉಪನ್ಯಾಸದಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ಸ್ವತಂತ್ರ ಸಂಸ್ಥೆಗಳಿಗೆ ಬೆದರಿಕೆ ವಿಷಯದ ಕುರಿತು ಮಾತನಾಡಿದ ಅವರು, ದೇಶದಲ್ಲಿ ರಾಜಕೀಯವು ಬೇರೂರಿದ್ದು, ಯಾರೂ ಇತರರ ದೃಷ್ಟಿಕೋನಗಳನ್ನು ಅರ್ಥಮಾಡಿಕೊಳ್ಳುವುದಿಲ್ಲ. ಇದು ಆಗಾಗ್ಗೆ ಸಂಘರ್ಷಗಳಿಗೆ ಕಾರಣವಾಗುತ್ತಿದೆ. ನಾವು ಪ್ರಜಾಪ್ರಭುತ್ವವಾಗಿ ವಿಕಸನಗೊಂಡಿಲ್ಲ ಎಂದು ಹೇಳಿದರು. ಭಾರತೀಯ ಚುನಾವಣಾ ಆಯೋಗವು (ಇಸಿಐ) ಸ್ವತಂತ್ರ ಸಂಸ್ಥೆಯಾಗಿದ್ದು, ದ್ವೇಷದ ಭಾಷಣ ಮತ್ತು ಇತರ ಹಲವಾರು ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯ ವಿರುದ್ಧ ಕ್ರಮ ಕೈಗೊಳ್ಳುವಂತೆ ನಾಗರಿಕ ಸಮಾಜ ಗುಂಪುಗಳು ಮತ್ತು ಇತರೆ ಸಾಮಾನ್ಯ ವ್ಯಕ್ತಿಗಳಿಂದ 20,000 ಕ್ಕೂ ಹೆಚ್ಚು ದೂರುಗಳು ಆಯೋಗಕ್ಕೆ ಸಲ್ಲಿಕೆಯಾಗಿವೆ. ಆದಾಗ್ಯೂ, ಯಾವುದೇ ಕ್ರಮಗಳಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

## 20 ಲಕ್ಷ ಕೋಟಿ ಸಾಲಮನ್ನಾ ಬೊಕ್ಕಸ ಬರಿದಾಗಲಿಲ್ಲವೇ: ಕಾಂಗ್ರೆಸ್ ವಾಗ್ದಾಳಿ!

• ಉದಯವಾಹಿನಿ, ಬೆಂಗಳೂರು

ಮಹಿಳೆಯರಿಗೆ ಕಾಂಗ್ರೆಸ್ ನೀಡುವ ಉಚಿತ ಬಸ್ ಪ್ರಯಾಣದ ಯೋಜನೆಗಳಿಂದ ಪ್ರಗತಿಗೆ ಮಾರಕವಾಗಿದ್ದು, ಚುನಾವಣೆಯಲ್ಲಿ ಗೆಲ್ಲಲ್ಲು ಇಂಥಹ ಯೋಜನೆಗಳಿಂದ ಬೊಕ್ಕಸಕ್ಕೆ ಕನ್ನ ಹಾಕುವ ಹುನ್ನಾರ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಟೀಕಿಸಿದ್ದರು. ಸಂಬಂಧ ತಿರುಗೇಟು ನೀಡಿರುವ ಕಾಂಗ್ರೆಸ್, ಶ್ರೀಮಂತ ಉದ್ಯಮಿಗಳ 20 ಲಕ್ಷ ಕೋಟಿ ರೂಪಾಯಿ ಸಾಲವನ್ನು ರೈಟಾಫ್ ಮಾಡಿದರೆ ದೇಶದ ಪ್ರಗತಿಗೆ ಮಾರಕ ಆಗಲಿಲ್ಲವೇ ಎಂದು ಟ್ವೀಟ್ ಮೂಲಕ ಪ್ರಶ್ನಿಸಿದೆ. ಶ್ರೀಮಂತ ಉದ್ಯಮಿಗಳ ಕಾರ್ಪೊರೇಟ್ ತೆರಿಗೆ ಕಡಿತಗೊಳಿಸಿ ದೇಶದ ಬೊಕ್ಕಸಕ್ಕೆ ವಾರ್ಷಿಕ 1.5 ಲಕ್ಷ ಕೋಟಿ ರೂಪಾಯಿ ನಷ್ಟವಾಗುತ್ತಿದೆ. ಮಾಲ್ಡೀವ್ಸ್, ಅಫಘಾನಿಸ್ತಾನ್, ಭೂತಾನ್ ಸೇರಿದಂತೆ ವಿದೇಶಗಳಿಗೆ ಸಾವಿರಾರು ಕೋಟಿ ಹಣ ನೀಡಲಾಗುತ್ತಿದೆ. ಪ್ರಧಾನಿ ಓಡಾಟಕ್ಕೆ 8 ಸಾವಿರ ಕೋಟಿ ಕೊಟ್ಟು ವಿಮಾನ ಖರೀದಿಸಲಾಗಿದೆಸಿದರೆ ಪ್ರಗತಿಗೆ ಮಾರಕವಲ್ಲವೇ ಎಂದು ಕಾಂಗ್ರೆಸ್?? ಕೇಳಿದೆ. ಅಂದಾಜು 5000 ಕೋಟಿ ವೆಚ್ಚದ ಉಚಿತ ಪ್ರಯಾಣದ ಯೋಜನೆಯ ಬಗ್ಗೆ ಇಷ್ಟು ಅಸಹನೆ ಹೊಂದಿರುವ ಮೋದಿಯವರ ಜನವಿರೋಧಿ ನಿಲುವು ಜನತೆಗೆ ಅರ್ಥವಾಗಿದೆ ಎಂದು 'ಕೈ' ಪಾಳಯ ಕುಟುಕಿದೆ.

## ಕಾಂಗ್ರೆಸ್ ಸರ್ಕಾರದ ವರ್ಷಾಚರಣೆ – ಬಿಜೆಪಿಯಿಂದ ಭಾರೀ ಪ್ರತಿಭಟನೆ!

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದು ಒಂದು ವರ್ಷವಾಗುತ್ತಿರುವ ಬೆನ್ನಲ್ಲೇ ರಾಜ್ಯಾದ್ಯಂತ ಬಿಜೆಪಿ ಪ್ರತಿಭಟನೆಗೆ ಕರೆ ಕೊಟ್ಟಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು (ಮೇ 20) ಒಂದು ವರ್ಷವಾಗುತ್ತಿದೆ.ಈ ಒಂದು ವರ್ಷದಲ್ಲಿ ರಾಜ್ಯ ಸರ್ಕಾರದ ವೈಫಲ್ಯಗಳನ್ನು ಮುಂದಿಟ್ಟು ಬಿಜೆಪಿ ಪ್ರತಿಭಟನೆಗೆ ತೀರ್ಮಾನಿಸಿದೆ. ಒಂದು ವರ್ಷದಲ್ಲಿ ಸರ್ಕಾರ ಲೋಪ – ದೋಷಗಳು, ವೈಫಲ್ಯಗಳನ್ನು ಮುಂದಿಟ್ಟುಕೊಂಡು ರಾಜ್ಯಾದ್ಯಂತ ಪ್ರತಿಭಟನೆ ಮಾಡಲು ರಾಜ್ಯ ಬಿಜೆಪಿ, ಎಲ್ಲಾ ಬಿಜೆಪಿ ಘಟಕಗಳಿಗೆ ಸೂಚನೆ ನೀಡಿದೆ. ಮತ್ತೊಂದೆಡೆ ವಿಪಕ್ಷದ ಹಿರಿಯ ನಾಯಕರು ಸಹ ಸುದ್ದಿಗೋಷ್ಠಿ ನಡೆಸಿ ಸಮಾಜ ಕಲ್ಯಾಣ, ಆಹಾರ, ಕೃಷಿ ಮತ್ತು ಗೃಹ ಇಲಾಖೆ ಸೇರಿದಂತೆ ಹಲವು ಇಲಾಖೆಗಳ ವೈಫಲ್ಯಗಳ ಕುರಿತು ಜನರ ಮುಂದಿಡಲು ತೀರ್ಮಾನಿಸಿದ್ದಾರೆ. ಅಲ್ಲದೇ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿರುವ ಕುರಿತು ರಾಜ್ಯಪಾಲರಿಗೆ ದೂರು ನಿರ್ಧರಿಸಿದೆ. ಇನ್ನೊಂದೆಡೆ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು (ಮೇ 20) ಒಂದು ವರ್ಷವಾಗುತ್ತಿದೆ.

# ಪೆನ್‌ಡ್ರೈವ್ ಪ್ರಕರಣದಲ್ಲಿ ಕಾಂಗ್ರೆಸ್ಸಿಗರ ಕೈವಾಡವಿಲ್ಲ

■ ದೇವರಾಜೇಗೌಡರನ್ನು ತಾವು ನೋಡಿರಲೇ ಇರಲಿಲ್ಲ ■ ಸಚಿವ ಎಲ್.ಆರ್.ಶಿವರಾಮೇಗೌಡ ಹೇಳಿಕೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬಿಜೆಪಿ ಮುಖಂಡ ದೇವರಾಜೇಗೌಡ ಅಶ್ಲೀಲ ವಿಡಿಯೋಗಳ ಪೆನ್‌ಡ್ರೈವ್‌ಗಳನ್ನು ವ್ಯಾಪಾರಕ್ಕಿಟ್ಟಿದ್ದಾರೆ. ಇಡೀ ಪ್ರಕರಣದಲ್ಲಿ ನನ್ನದಾಗಲೀ, ಡಿ.ಕೆ.ಶಿವಕುಮಾರ್ ಅವರದಾಗಲೀ ಅಥವಾ ಸಚಿವರ ಕೈವಾಡ ಇಲ್ಲ ಎಂದು ಮಾಜಿ ಸಚಿವ ಎಲ್.ಆರ್. ಶಿವರಾಮೇಗೌಡ ತಿಳಿಸಿದರು.

ನಗರದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇವರಾಜೇಗೌಡರನ್ನು ತಾವು ನೋಡಿರಲೇ ಇಲ್ಲ, ಅವರ ಸಂಪರ್ಕವೂ ಇರಲಿಲ್ಲ, ಪೆನ್‌ಡ್ರೈವ್ ಪ್ರಕರಣ ಹೊರಬಂದ ಬಳಿಕ ಅವರನ್ನು ನಾನು ಟಿವಿಯಲ್ಲಿ ನೋಡಿದ್ದು. ಅನಂತರ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿಸುವಂತೆ ನನ್ನನ್ನು ಕೇಳಿದರು.

**ಪೆನ್‌ಡ್ರೈವ್ ಪ್ರಕರಣದ ತನಿಖೆ**

ಹಾಗಾಗಿ ದೂರವಾಣಿಯಲ್ಲಿ ಮಾತನಾಡಿಸಿದ್ದೆ. ಅದೇ ಮಹಾಪರಾಧವಾಗಿದೆ. ದೇವರಾಜೇಗೌಡ ಮೋಸಗಾರ. ಆತನ ಜೊತೆ ಮಾತನಾಡುವಾಗ ಜನ ಎಚ್ಚರಿಕೆಯಿಂದಿರಬೇಕು. ಆತನ ಇಡೀ ದೇಹದಲ್ಲಿ ಇನ್ನೊಬ್ಬರು ಮಾತನಾಡುವುದನ್ನು ರೆಕಾರ್ಡ್ ಮಾಡಿಕೊಳ್ಳುವ ವ್ಯವಸ್ಥೆ ಇಟ್ಟುಕೊಂಡಿರುತ್ತಾನೆ ಎಂದು ಹೇಳಿದರು. 100 ಕೋಟಿ ಆಫರ್ ನೀಡಲಾಗಿತ್ತು. ಸಂಪುಟ ದರ್ಜೆಯ ಸ್ಥಾನಮಾನ ನೀಡುವ ಭರವಸೆ ನೀಡಿದ್ದರು ಎಂದೆಲ್ಲಾ ಹೇಳಿಕೆ ನೀಡುತ್ತಿರುವ ದೇವರಾಜೇಗೌಡ, ಆರಂಭದಲ್ಲೇ ಇವುಗಳ ಬಗ್ಗೆ ಏಕೆ ಮಾತನಾಡಲಿಲ್ಲ? ಡಿ.ಕೆ.ಶಿವಕುಮಾರ್ ರವರ ಜೊತೆಗಿನ ಮಾತುಕತೆಯನ್ನು ಪೂರ್ಣ ಪ್ರಮಾಣದಲ್ಲಿ ಬಹಿರಂಗ ಮಾಡದೇ ತನಗೆ ಬೇಕಾದಷ್ಟನ್ನು ಮಾತ್ರ ಹೊರಗೆ ಬಿಟ್ಟು ರಾಜಕೀಯ ಲಾಭ ಪಡೆಯುವ ಯತ್ನ ನಡೆಸುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಸಂಪುಟದ ಸಚಿವರಾಗಲೀ, ಡಿ.ಕೆ.ಶಿವಕುಮಾರ್ ರವರ ಪಾತ್ರವಾಗಲೀ ಪೆನ್‌ಡ್ರೈವ್ ಪ್ರಕರಣದಲ್ಲಿಲ್ಲ. ನನ್ನ ಹೆಸರನ್ನು ಅನಗತ್ಯವಾಗಿ ಇನ್ನು ಮುಂದೆ ಈ ಪ್ರಕರಣದಲ್ಲಿ ಬಳಸಬೇಡಿ. ಈ ಇಳಿವಯಸ್ಸಿನಲ್ಲಿ ದೇವೇಗೌಡರಿಗೆ ಈ ಪ್ರಕರಣದಿಂದಾದ ನೋವಿನ ಬಗ್ಗೆ ನನಗೆ ವಿಶಾದವಿದೆ. ಆ ಕಾರಣಕ್ಕಾಗಿಯೇ ನಿನ್ನೆ ಅವರ ಹುಟ್ಟುಹಬ್ಬವಿದ್ದಿದ್ದರಿಂದ ನಾನು ಪತ್ರಿಕಾಗೋಷ್ಠಿ ನಡೆಸದೆ ಇಂದು ಮಾತನಾಡುತ್ತಿದ್ದೇನೆ ಎಂದು ಹೇಳಿದರು. ಪೆನ್‌ಡ್ರೈವ್ ಪ್ರಕರಣದ ತನಿಖೆ ದಿಕ್ಕು ತಪ್ಪಿಸಲು ಕಾಣದ ಕೈಗಳು ಕೆಲಸ ಮಾಡುತ್ತಿವೆ. ದೇವರಾಜೇಗೌಡ ತಾವು ಸಿಕ್ಕಿಹಾಕಿಕೊಳ್ಳುತ್ತೇನೆ ಎಂಬ ಆತಂಕದಲ್ಲಿ ಬೇರೆ ಬೇರೆ ರೀತಿಯ ಆರೋಪ ಮಾಡುತ್ತಿದ್ದಾನೆ. ಅಮಿತ್ ಶಾ, ನರೇಂದ್ರ ಮೋದಿ ಗೊತ್ತು ಎಂದು ಸುಳ್ಳು ಹೇಳುತ್ತಿದ್ದಾನೆ ಎಂದರು. ತಾವು ಬಿಜೆಪಿಗೆ ರಾಜೀನಾಮೆ ನೀಡುವುದಾಗಿ ಎಲ್.ಆರ್.ಶಿವರಾಮೇಗೌಡರು ಈ ಸಂದರ್ಭದಲ್ಲಿ ಸ್ಪಷ್ಟಪಡಿಸಿದರು.

> **ಇತ್ತೀಚೆಗೆ ಬಸವರಾಜ ಬೊಮ್ಮಾಯಿ ಪಕ್ಷಕ್ಕೆ ಸೇರಿಸಿಕೊಂಡರು. ಹಳೆ ಮೈಸೂರು ಭಾಗದಲ್ಲಿ ಬಿಜೆಪಿ ಕಟ್ಟುವುದು ಕಷ್ಟದ ಕೆಲಸ ಎಂದು ನಾನು ಅವರಿಗೆ ಹೇಳಿದ್ದೆ. ಆದರೂ ಅವರು ಕೇಳಲಿಲ್ಲ. ವಿಧಾನಸಭಾ ಚುನಾವಣೆಯಲ್ಲಿ ಸರ್ಕಾರವೂ ಹೋಯಿತು, ಅವರ ನಾಯಕತ್ವದ ಪ್ರಭಾವವೂ ತಗ್ಗಿತ್ತು ಎಂದು ವಿವರಿಸಿದರು.**

> **ಹಳೆ ಮೈಸೂರು ಭಾಗದಲ್ಲಿ ಜೆಡಿಎಸ್, ಕಾಂಗ್ರೆಸ್ ಪಕ್ಷಗಳು ಪ್ರಬಲವಾಗಿವೆ. ಮಂಡ್ಯ ಜಿಲ್ಲೆಯಲ್ಲಿ ಬಿಜೆಪಿ 10 ರಿಂದ 40 ಸಾವಿರದವರೆಗೂ ಮತ ಪಡೆದು ಇತ್ತೀಚೆಗೆ ಚೇತರಿಕೆ ಕಾಣುತ್ತಿತ್ತು. ಆದರೆ ಜೆಡಿಎಸ್ ಮೈತ್ರಿಯಿಂದಾಗಿ ಮತ್ತಷ್ಟು ದುರ್ಬಲವಾಗಿದೆ. ಲೋಕಸಭಾ ಚುನಾವಣೆಯಲ್ಲಿ ಮಂಡ್ಯದಲ್ಲಿ ಮೈತ್ರಿ ಅಭ್ಯರ್ಥಿ ಕುಮಾರಸ್ವಾಮಿ 2 ಲಕ್ಷ ಅಂತರದಿಂದ ಗೆಲ್ಲುವ ಸಾಧ್ಯತೆಯಿದೆ ಎಂದು ಹೇಳಿದರು.**

ಮೂಲತಃ ನಾನು ಕಾಂಗ್ರೆಸಿಗ. ಎರಡು ಬಾರಿ ಪಕ್ಷೇತರ ಶಾಸಕನಾಗಿ ಆಯ್ಕೆಯಾಗಿದ್ದೆ. ಎರಡು ಬಾರಿ ಬಿಜೆಪಿ ಪಕ್ಷ ಸೇರಿ ಕೆಲಸ ಮಾಡಿದ್ದೇನೆ. ಒಮ್ಮೆ ಯಡಿಯೂರಪ್ಪ ಅವರು ಪಕ್ಷಕ್ಕೆ ಸೇರಿಸಿಕೊಂಡು ಎಂಪಿ ಟಿಕೆಟ್ ನೀಡಿದ್ದರು. ತಾವು ಬಿಜೆಪಿಗೆ ರಾಜೀನಾಮೆ ನೀಡಿದ್ದು ವಿಜಯೇಂದ್ರ ಅವರಿಗೆ ಪತ್ರ ಕಳುಹಿಸಿದ್ದೇನೆ. ಅವರಿಂದ ಯಾವ ಪ್ರತಿಕ್ರಿಯೆಯೂ ಬಂದಿಲ್ಲ. ಮುಂದಿನ ದಿನಗಳಲ್ಲಿ ರಾಜಕೀಯವಾಗಿ ಸೂಕ್ತ ನಿರ್ಧಾರ ತೆಗೆದುಕೊಳ್ಳುತ್ತೇನೆ ಎಂದರು.

## ಭಜನ – ಪ್ರವಚನ – ಸಂಕೀರ್ತನ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು



ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ಹಾಗೂ ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಪ್ರಕಾಶನಗರ, ಬೆಂಗಳೂರು ಇವುಗಳ ಸಂಯುಕ್ತಾಶ್ರಯದಲ್ಲಿ ಮೇ 21 ರಿಂದ 24ರ ವರೆಗೆ ಧಾರ್ಮಿಕ/ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಿದ್ದು, ಅವುಗಳ ವಿವರಗಳು ಈ ರೀತಿ ಇವೆ

ಮೇ 21, ಮಂಗಳವಾರ : ಮಲ್ಲೇಶ್ವರದ ಸ್ತುತಿ ವಾಹಿನಿ ಸಂಘದ ಸದಸ್ಯರಿಂದ ಭಜನೆ, ಶ್ರೀ ಕಲ್ಯಾ ಶ್ರೀಕಾಂತಾಚಾರ್ಯರಿಂದಲಕ್ಷ್ಮೀ ಶೋಭಾನೆ ಧಾರ್ಮಿಕ ಪ್ರವಚನ. (ಸಂಜೆ 6 ರಿಂದ 8) ಮೇ 22, ಬುಧವಾರ ವಿಜಯನಗರದ ಶ್ರೀಕಾಂತ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, ಶ್ರೀ ಕಲ್ಯಾ ಶ್ರೀಕಾಂತಾಚಾರ್ಯರಿಂದ ಲಕ್ಷ್ಮೀ ಶೋಭಾನೆ ಧಾರ್ಮಿಕ ಪ್ರವಚನ. (ಸಂಜೆ 6 ರಿಂದ 8).

ಮೇ 23, ಗುರುವಾರ : ಹರಿನಾಮ ಸಂಕೀರ್ತನೆ. ಗಾಯನ : ಶ್ರೀಮತಿ ಭಾವನಾ ಮೂರ್ತಿ, ಕೀ-ಬೋರ್ಡ್ : ಶ್ರೀ ಟಿ. ಎಸ್. ರಮೇಶ್, ತಬಲಾ : ಶ್ರೀ ಶ್ರೀನಿವಾಸ್ ಅನಂತ ರಾಮಯ್ಯ (ಸಂಜೆ 7 ರಿಂದ 8-30)

ಮೇ 24, ಶುಕ್ರವಾರ : ವಿದ್ಯಾರಣ್ಯಪುರದ ಶ್ರೀ ವಿಜಯ ವಿಠ್ಠಲ ಭಜನಾ ಮಂಡಳಿಯ ಸದಸ್ಯರಿಂದ ಭಜನೆ, ಶ್ರೀ ಕಲ್ಯಾ ಶ್ರೀಕಾಂತಾಚಾರ್ಯರಿಂದ ಲಕ್ಷ್ಮೀ ಶೋಭಾನೆ ಧಾರ್ಮಿಕ ಪ್ರವಚನ. ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 10ನೇ ಮುಖ್ಯರಸ್ತೆ, 6ನೇ ಅಡ್ಡರಸ್ತೆ, ಪ್ರಕಾಶನಗರ, ಬೆಂಗಳೂರು-560021. ಈ ಮೇಲ್ಕಂಡ ಎಲ್ಲಾ ಕಾರ್ಯಕ್ರಮಗಳಲ್ಲಿ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಟಿ ಟಿ ಡಿ ಮತ್ತು ಹೆಚ್.ಡಿ.ಪಿ.ಪಿ. ಸಂಚಾಲಕರಾದ ಡಾ|| ಪಿ. ಭುಜಂಗರಾವ್ ಅವರು ವಿನಂತಿಸಿದ್ದಾರೆ.

## ಡೆಂಗಿ ಮುಕ್ತ ತಾಲ್ಲೂಕಿಗೆ ಪಣ: ಶಿವಕುಮಾರ್

• ಉದಯವಾಹಿನಿ,ಹೊಸಕೋಟೆ



ಉದಯವಾಹಿನಿ ಚಿತ್ರ

ಡೆಂಗಿ ನಿಯಂತ್ರಣಕ್ಕೆ ಆರೋಗ್ಯ ಇಲಾಖೆ ಹಲವು ಕಟ್ಟುನಿಟ್ಟಿನ ಕ್ರಮ ಕೈಗೊಂಡಿದೆ. ಅದರಂತೆ ಜನಸಾಮಾನ್ಯರು ಆರೋಗ್ಯ ಇಲಾಖೆ ಕಾಲಕಾಲಕ್ಕೆ ನೀಡುವ ಸೂಚನೆಯನ್ನು ತಪ್ಪದೆ ಪಾಲಿಸಿದರೆ ತಾಲ್ಲೂಕನ್ನು ಡೆಂಗಿ ಮುಕ್ತಗೊಳಿಸಬಹುದು ಎಂದು ತಾಲ್ಲೂಕು ಆರೋಗ್ಯ ನಿರೀಕ್ಷಣಾಧಿಕಾರಿ ಶಿವಕುಮಾರ್ ತಿಳಿಸಿದರು.

**ಹಲವು ಕಟ್ಟುನಿಟ್ಟಿನ ಕ್ರಮ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ಹಾಗೂ ನಗರಸಭೆ ಸಹಯೋಗದಲ್ಲಿ ನಗರಸಭೆ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಡೆಂಗಿ ದಿನಾಚರಣೆ ಪ್ರಯುಕ್ತ ಡೆಂಗಿ, ಚಿಕೂನ್‌ಗುನ್ಯ ಬಗ್ಗೆ ಜಾಗೃತಿ ಜಾಥಾದಲ್ಲಿ ಅವರು ಮಾತನಾಡಿದರು.

ಹಗಲು ಹೊತ್ತಿನಲ್ಲಿ ವಿಶ್ರಾಂತಿ ಪಡೆಯುವವರು ಅದರಲ್ಲೂ ವೃದ್ಧರು, ಗರ್ಭಿಣಿಯರು ಹಾಗೂ ಮಕ್ಕಳು ಸೊಳ್ಳೆ ಪರದೆ ಬಳಸಬೇಕು. ಸೊಳ್ಳೆ ಕಚ್ಚದಂತೆ ಮೈ ತುಂಬ ಬಟ್ಟೆ ಧರಿಸಿ ಸೊಳ್ಳೆ ಪರದೆ ಸೊಳ್ಳೆಬತ್ತಿ ಮುಲಾಮು ಉಪಯೋಗಿಸಬೇಕು ಎಂದರು. ಸರ್ಕಾರಿ ಮತ್ತು ಖಾಸಗಿ ಕಚೇರಿಗೆ ಒಳ ಮತ್ತು ಹೊರಾಂಗಣದಲ್ಲಿ ಈಡಿಸ್ ಈಜಿಪ್ಟ್ ಸೊಳ್ಳೆ ಉತ್ಪತ್ತಿ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು. ಈಡಿಸ್ ಸೊಳ್ಳೆ ಉತ್ಪತ್ತಿ ತಡೆಗೆ ಮನೆಯಲ್ಲಿನ ನೀರಿನ ತೊಟ್ಟಿ, ಬ್ಯಾರೆಲ್‌ಗಳಲ್ಲಿ ನೀರನ್ನು ವಾರಕ್ಕೊಮ್ಮೆ ಖಾಲಿ ಮಾಡಿ ಸ್ವಚ್ಛಗೊಳಿಸಬೇಕು. ಫ್ರಿಡ್ಜ್ ಹಿಂಭಾಗ, ಹೂಕೊಂಡ ಮತ್ತು ಹೂಕುಂಡದ ಕೆಳಗಿನ ತಟ್ಟೆಗಳಲ್ಲಿ ಶೇಖರಣೆಯಾಗುವ ನೀರನ್ನು ನಿಯಮಿತವಾಗಿ ಖಾಲಿ ಮಾಡಬೇಕು. ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ಎಚ್ಚರವಹಿಸಬೇಕು. ಘನತ್ಯಾಜ್ಯವನ್ನು ವಿಲೇವಾರಿ ಮಾಡಬೇಕು. ಪರಿಸರವನ್ನು ಸ್ವಚ್ಛವಾಗಿರಬೇಕು ಎಂದು ಸಲಹೆ ನೀಡಿದರು.

## ಬಸವ ಬಿಲ್ವ ಭಕ್ತರ ಬಳಗ: ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಹೊಂಬೇಗೌಡನಗರ ಬಾಲಕರ ಪ್ರೌಢಶಾಲೆ ಸಭಾಂಗಣದಲ್ಲಿ ಬಸವ ಬಿಲ್ವ ಭಕ್ತರ ಬಳಗದ ವತಿಯಿಂದ ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿ ಅಚರಣೆ. ಚಿಕ್ಕಮಗಳೂರು, ಬಸವ ಕೇಂದ್ರದ ಶ್ರೀ ಶ್ರೀ ಶ್ರೀ ಶಿವಯೋಗಿ ಪ್ರಭುಗಳು, ಶಾಸಕರಾದ ಉದಯ್ ಗರುಡಾಚಾರ್, ಶ್ರೀಮತಿ ಮೇದಿನಿ ಗರುಡಾಚಾರ್ ರವರು, ವೀರಶೈವ ಅಭಿ ವೃದ್ಧಿ ನಿಗಮದ ಮಾಜಿ ಅಧ್ಯಕ್ಷರಾದ ಬಿ.ಎಸ್‌ಪರಮ ಶಿವಯ್ಯ, ದಕ್ಷಿಣ ಜಿಲ್ಲಾ ಬಿಜೆಪಿ ಉಪಾಧ್ಯಕ್ಷರಾದ ಶ್ರೀಮತಿ ಭಾಗ್ಯವತಿ ಅಮರೇಶ್, ಮಾಹಿತಿ ಹಕ್ಕು ಅಧ್ಯಯನ ಸಂಸ್ಥೆಯ ಟ್ರಸ್ಟಿ ಅಮರೇಶ್(ಅಂಬರೀಶ್) ರವರು, ಬಸವ ಬಿಲ್ವ ಬಳಗದ ಅಧ್ಯಕ್ಷರಾದ ಎಚ್. ಚಂದ್ರಶೇಖರ್, ಗೌರವಾಧ್ಯಕ್ಷರಾದ ಬಿ.ಸಿ.ಸದಾಶಿವಯ್ಯ, ಕಾರ್ಯದರ್ಶಿ ಸುಭಾಷ್ ಚಂದ್ರ,ಕ್ರಾಂತಿಯೋಗಿ ಬಸವೇಶ್ವರರ ಬಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ದೀಪ ಬೆಳಗಿಸಿ ಜಯಂತಿ ಅಚರಣೆಗೆ ಚಾಲನೆ ನೀಡಿದರು. ಅಫಾನಿಸ್ತಾನ್ ನಿಂದ ಮರುಳು ಶಂಕರದೇವ, ಕಾಶ್ಮಿರದಿಂದ ಮೋಡಿಗೆ ಮಾರಯ್ಯ, ತಮಿಳುನಾಡಿನಿಂದ ಮಾದರ ಚನ್ನಯ್ಯ, ಶರಣರು, ಕೇರಳ ದೂಪದ ಗೋಗಯ್ಯ, ಶರಣರು ಅನುಭವ ಮಂಟಪಕ್ಕೆ ಬಂದು ಕನ್ನಡ ಭಾಷೆ ಕಲಿತು, ಕನ್ನಡದಲ್ಲಿ ವಚನ ಬರೆಯುತ್ತಾರೆ.

**ದೀಪ ಬೆಳಗಿಸಿ ಜಯಂತಿ ಅಚರಣೆಗೆ ಚಾಲನೆ**

> **ಶ್ರೀ ಶ್ರೀ ಶ್ರೀ ಶಿವಯೋಗಿ ಪ್ರಭುಗಳು ಮಾತನಾಡಿ ಮಹಿಳೆಯರನ್ನ ಸಮಾಜ ಕಡೆಗಣಿಸಿ ನೋಡುತ್ತಿತ್ತು ಆದರೆ ವಿಶ್ವದಲ್ಲಿ ಮೊಟ್ಟ ಮೊದಲ ಬಾರಿಗೆ ಮಹಿಳೆಯರಿಗೆ ಸಮಾನತೆ, ಧಾರ್ಮಿಕ ಹಕ್ಕು ಹಾಗೂ ಸ್ವಾತಂತ್ರ್ಯ ನೀಡಿದ್ದು ಕಾಯಕಯೋಗಿ ಬಸವೇಶ್ವರರು. ಬಸವಾದಿ ಶರಣರ ತತ್ವ, ಸಿದ್ಧಾಂತ ಆಳವಡಿಸಿಕೊಂಡರೆ ಅದೇ ಅನುಭವ ಮಂಟಪವಾಗುತ್ತದೆ.ಬಸವಾದಿ ಶರಣರು ನಾಡಿನ ನೆಲದ ಕನ್ನಡ ಭಾಷೆಯನ್ನ ದೇವ ಭಾಷೆಯಾಗಿ ಮಾಡಿ ಕನ್ನಡದಲ್ಲಿ ವಚನಗಳನ್ನು ರಚಿಸಿದರು.**

ಕನ್ನಡ ಭಾಷೆಯನ್ನು ವಿಶ್ವಕ್ಕೆ ಪರಿಚಯಿಸಲು ಶ್ರೀಮಂತಗೊಳಿಸಿದವರು ಬಸವೇಶ್ವರರು.

ಶೋಷಿತರು, ಮಹಿಳೆಯರನ್ನ ಸಮಾಜದ ಮುಖ್ಯ ವಾಹಿನಿ ತರಲು ಜಗತ್ತನ್ನ ಉದ್ದರಿಸಲು ಬಂದ ಮಹಾನ್ ಶಕ್ತಿ ಅಣ್ಣ ಬಸವಣ್ಣನವರು. ವೇದ ಓದಿದರೆ ದೊಡ್ಡವರಲ್ಲ ಸತ್ಯ ಶುದ್ದವಾಗಿ ಕಾಯಕ ಮಾಡುವವರು ಸಹ ದೊಡ್ಡವರು ಎಂದು ಸಂದೇಶ ಸಾರಿದರು ಎಂದು ಹೇಳಿದರು. ಸಾಹಿತ್ಯ, ಸಂಗೀತ ಮತ್ತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕ, ಸಾಧಕಿಯರಿಗೆ ಗೌರವಿಸಿ, ಸನ್ಮಾನಿಸಲಾಯಿತು. ವಚನಜ್ಯೋತಿ ಬಳಗದ ವತಿಯಿಂದ ವಚನಗಳ ಗಾಯನ ಕಾರ್ಯಕ್ರಮ ಆಯೋಜಿಸಲಾಗಿತ್ತು.

## ಬಿಜೆಪಿ ಪ್ರತಿಭಟನೆ, ರಾಜ್ಯಪಾಲರಿಗೆ ದೂರು

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ


ಲೋಕಸಭೆ ಚುನಾವಣೆ-2024 ಅಂತಿಮ ಘಟ್ಟಕ್ಕೆ ತಲುಪುತ್ತಿರುವ ಹೊತ್ತಿನಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಒಂದು ವರ್ಷ ವಾಗುತ್ತಿದೆ. ಒಂದೆಡೆ ನಾಳೆ ಮೇ 20ರಂದು ರಾಜ್ಯ ಸರ್ಕಾರ ಒಂದು ವರ್ಷದ ಸಂಭ್ರಮದಲ್ಲಿದ್ದರೆ ವಿರೋಧ ಪಕ್ಷ ಬಿಜೆಪಿ ರಾಜ್ಯ ಸರ್ಕಾರದ ವಿರುದ್ಧ ಚಾರ್ಜ್‌ಶೀಟ್ ರೆಡಿ ಮಾಡಿದ್ದು ರಾಜ್ಯಪಾಲರಿಗೆ ದೂರು ನೀಡಲು ಮುಂ ದಾಗಿದೆ.

**ರಾಜ್ಯಾದ್ಯಂತ ಪ್ರತಿಭಟನೆ:** ರಾಜ್ಯ ಸರ್ಕಾರದ ವಿರುದ್ಧ ಈಗಾಗಲೇ ಮುಗಿ ಬೀಳುತ್ತಿರುವ ಬಿಜೆಪಿಗರು ಕಾನೂನು ಸುವ್ಯವಸ್ಥೆ ಬಗ್ಗೆಯೂ ಟೀಕೆ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಇತ್ತೀಚೆಗೆ ಸರಣಿ ಕೊಲೆ, ಅತ್ಯಾಚಾರ, ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿವೆ. ಜನತೆಯ ಬದುಕಿಗೆ ಭದ್ರತೆ ಇಲ್ಲದಾಗಿದೆ. ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ, ಅಭಿವೃದ್ಧಿ ಕೆಲಸಗಳು ಆಗುತ್ತಿಲ್ಲ ಎಂದು ಬಿಜೆಪಿ ಆರೋಪಿಸಿದ್ದು ನಾಳೆ ರಾಜ್ಯಾದ್ಯಂತ ಪ್ರತಿಭಟನೆಗೆ ಮುಂದಾಗಿದೆ. ರಾಜ್ಯದಲ್ಲಿ ಎಂದೂ ಕಂಡರಿಯದ ಭೀಕರ ಬರಗಾಲ ಬಂದಿದೆ. ಆದರೆ, ಬರ ನಿರ್ವಹಣೆಯಲ್ಲಿ ವಿಫಲವಾಗಿದೆ. ರೈತರಿಗೆ ಪರಿಹಾರವನ್ನು ನೀಡಿಲ್ಲ, ರೈತರ ಬದುಕು ದುಸ್ತರವಾಗಿದೆ. ಕೇಂದ್ರ ಸರ್ಕಾರ ನೀಡಿದ ಬರ ಪರಿಹಾರದ ಹಣವೂ ರೈತರಿಗೆ ತಲುಪುತ್ತಿಲ್ಲ. ಅದನ್ನು ಬ್ಯಾಂಕ್‌ಗಳು ಸಾಲಕ್ಕೆ ಬಳಸಿಕೊಳ್ಳುತ್ತಿವೆ. ಇನ್ನು ಸರ್ಕಾರವು 1 ವರ್ಷದಲ್ಲಿ ಹೊಸ ಕಾಮಗಾರಿಗಳಿಗೆ ಗುದ್ದಲಿ ಪೂಜೆಯನ್ನೂ ಮಾಡಿಲ್ಲ, ಇಷ್ಟಲ್ಲದೆ ಶಾಸಕರ ಪರಿಸ್ಥಿತಿ ಇನ್ನೂ ಕಷ್ಟಕರವಾಗಿದೆ. ಶಾಸಕರಿಗೆ ಅನುದಾನ ಕೊಡಲು ಹಣವಿಲ್ಲ. ಅನುದಾನ ಕೊಡುತ್ತೇವೆ, ಕೊಡುತ್ತೇವೆ ಎಂದೇ ದಿನ ದೂಡುತ್ತಿದೆ ಎಂದು ಸ್ವಪಕ್ಷೀಯ ಶಾಸಕರೇ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂಬುದನ್ನು ಜನರ ಮುಂದಿಡಲು ಬಿಜೆಪಿ ಮುಂದಾಗಿದೆ.

> **ರಾಜ್ಯ ಸರ್ಕಾರದ ಮೇಲೆ ಮಾಡಲಾಗುವ ಎಲ್ಲಾ ಆರೋಪಗಳ ಪಟ್ಟಿಯನ್ನು ಒಂದು ಪುಸ್ತಕ ರೂಪದಲ್ಲಿ ತರಲು ಬಿಜೆಪಿ ಸಿದ್ಧತೆ ನಡೆಸಿದೆ ಎನ್ನಲಾಗಿದ್ದು, ಇದನ್ನು ದೊಡ್ಡ ಮಟ್ಟದಲ್ಲಿ ಅಭಿಯಾನವನ್ನಾಗಿ ಕೈಗೊಳ್ಳಲು ಚಿಂತಿಸಿದೆ ಎಂದು ಮೂಲಗಳು ತಿಳಿಸಿವೆ. ರಾಜ್ಯಪಾಲರ ಬಳಿಗೆ ನಿಯೋಗ ಈ ಎಲ್ಲಾ ವಿಚಾರಗಳನ್ನು ಮುಂದಿಟ್ಟುಕೊಂಡು ರಾಜ್ಯ ಸರ್ಕಾರ ವಿರುದ್ಧ ಬಿಜೆಪಿ ನಿಯೋಗ ರಾಜ್ಯಪಾಲರಿಗೆ ದೂರು ಸಲ್ಲಿಸಲು ಮುಂದಾಗಿದೆ.**

## ಗುಡುಗು ಸಹಿತ ಭಾರೀ ಮಳೆ ಆರ್ಭಟ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬೆಂಗಳೂರಿನಲ್ಲಿ ಭಾನುವಾರ ಮಧ್ಯಾಹ್ನದಿಂದಲೇ ಗುಡುಗು, ಮಿಂಚೂ ಸಹಿತ ಏಕಾಏಕಿ ಧಾಕಾರಾರ ಮಳೆ ಆರಂಭವಾಗಿದೆ. ನೋಡ ನೋಡುತ್ತಿದ್ದಂತೆ ಮಳೆ ಅಬ್ಬರಿಸಲು ಶುರುವಿಟ್ಟುಕೊಂಡಿತು. ನಗರಾದ್ಯಂತ ವ್ಯಾಪಕ ಮಳೆ ಆಗುತ್ತಿದೆ.ಬೆಳಗ್ಗೆಯಿಂದಲೇ ಮಬ್ಬು ವಾತಾವರಣ ಕಂಡಿದ್ದ ಬೆಂಗಳೂರಿನ ಜನರಿಗೆ ಮಧ್ಯಾಹ್ನ 1 ಗಂಟೆ ಹೊತ್ತಿಗೆ ಮಳೆ ಅಬ್ಬರ ಶುರುವಾಯಿತು.

ಕೋರಮಂಗಲ, ಡೈರಿ, ವೃತ್ತ, ಬೆಳ್ಳಂದೂರು, ಇಂದಿರಾನಗರ, ವಿಜಯನಗರ, ಮೆಜೆಸ್ಟಿಕ್, ವಿದ್ಯಾರಣ್ಯಪುರ, ಹೆಬ್ಬಾಳ, ಆರ್ ಆರ್ ನಗರ, ಯಶವಂತಪುರ, ಚಾಮರಾಜಪೇಟೆ, ಜೆಪಿ ನಗರ, ಜಯನಗರ ಸೇರಿದಂತೆ ಇನ್ನೂ ಅನೇಕ ಕಡೆಗಳಲ್ಲಿ ಧಾರಾಕಾರ ಮಳೆ ಆಯಿತು. ದಿಢೀರ್ ಬಂದ ಮಳೆಗೆ ಬೈಕುಗಳ ಸಂಚಾರಕ್ಕೆ ಬ್ರೇಕ್ ಬಿತ್ತು. ಮಳೆಯಿಂದ ತಪ್ಪಿಸಿಕೊಳ್ಳಲು ದ್ವಿಚಕ್ರ ವಾಹನ ಸವಾರರು, ಮೆಟ್ರೋ ಪಿಲ್ಲರ್ ಕೆಳಗೆ, ಅಂಗಡಿ ಮುಂಗಟ್ಟುಗಳ ಬಳಿ ಓಡಿದರು. ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗಿತು. ಕೆ.ಆರ್‌ವೃತ್ತ, ಕಾವೇರಿ ಥಿಯೇಟರ್, ಓಕಳಿಪುರಂ ಬ್ರಿಡ್ಜ್, ಶಿವಾನಂದ ವೃತ್ತದಲ್ಲಿನ ರೈಲ್ವೆ ಬ್ರಿಡ್ಜ್ ಕೆಳಗೆ ರಸ್ತೆ ಮೇಲೆಲ್ಲ ನೀರು ಕಂಡು ಬಂತು. ನಗರದಲ್ಲಿ ಅನೇಕ ಕಡೆಗಳಲ್ಲಿ ಮುಖ್ಯ ರಸ್ತೆಗಳೇ ಜಲಾವೃತವಾದವು. ಒಂದು ಕಡೆ ಮಳೆ ಬರುತ್ತಿದ್ದಂತೆ ಮತ್ತೊಂದು ಕಡೆ ಸಾಮಾಜಿಕ ಜಾಲತಾಣಗಳಲ್ಲಿ ಮಳೆ ಬಗ್ಗೆ ಎಂದಿನಂತೆ ಟ್ರೆಂಡಿಂಗ್ ಸೃಷ್ಟಿ ಆಯಿತು.

#BengaluruRain ಹಾಕಿ ತಮ್ಮ ಮನೆ, ಏರಿಯಾಗಳಲ್ಲಿ ಧೋ ಎಂದು ಸುರಿದ ಮಳೆ ಕುರಿತು ವಿಡಿಯೋ ಫೋಟೋಗಳನ್ನು ಹಂಚಿಕೊಂಡಿದ್ದಾರೆ.

> **ಮಧ್ಯಾಹ್ನ ಬಂದ ಮಳೆಗೆ ಹೆಬ್ಬಾಳ ಫ್ಲೈಓವರ್ ನಿಂದ ನಗರದ ಕಡೆಗೆ ಮತ್ತು ಫ್ಲೈಓವರ್ ಡೌನ್‌ರಾಂಪ್ ದೇವನಹಳ್ಳಿ ವಿಮಾನ ನಿಲ್ದಾಣದ ಕಡೆಗೆ ವಾಟರ್‌ಲಾಗಿಂಗ್ ಸಮಸ್ಯೆ ಉಂಟಾಗಿದೆ. ದೇವಿನಗರ ಕೆಳಸೇತುವೆ, ವೀರಣ್ಣಪಾಳ್ಯ ಸೇರಿದಂತೆ ರಸ್ತೆ ಮೇಲೆ ನೀರು ನಿಂತ ಮಾರ್ಗದಲ್ಲಿ ನೋಡಿ ಕೊಂಡು ಸಂಚರಿಸುವಂತೆ ನೆಟ್ಟಿಗರು, ಸಂಚಾರ ಪೊಲೀಸರು ಮನವಿ ಮಾಡಿಕೊಂಡಿದ್ದಾರೆ.**

# ಗರ್ಭಿಣಿ ಹೆಂಡತಿಗಾಗಿ ಫುಡ್ ಆರ್ಡರ್ ಮಾಡಿದ್ದ ಪತಿಗೆ ಶಾಕ್

■ ನಿರ್ಲಕ್ಷ್ಯದ ಘಟನೆಗಳು ಇತ್ತೀಚೆಗೆ ಹೆಚ್ಚಾಗಿ ವರದಿ ಆಗುತ್ತಿವೆ ■ ಪತ್ನಿ ಗರ್ಭಿಣಿಗೆ ಝೊಮಾಟೊದಲ್ಲಿ ಪನೀರ್ ಥಾಲಿ ಆರ್ಡರ್

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಪುಣೆಯಂತಹ ದೊಡ್ಡ ನಗರಗಳಲ್ಲಿ ಊಟಕ್ಕಾಗಿ ಆನ್‌ಲೈನ್ ನಲ್ಲಿ ಊಟ, ತಿಂಡಿ ಆರ್ಡರ್ ಮಾಡುವುದು ಸಾಮಾನ್ಯ ಸಂಗತಿಯಾಗಿದೆ. ಇಂತಹ ಸಾಮಾನ್ಯ ಸಂಗತಿಗಳಲ್ಲಿ ಕೆಲವೊಮ್ಮೆ ಅಚ್ಚರಿ ವಿಷಯಗಳು, ನಿರ್ಲಕ್ಷ್ಯದ ಘಟನೆಗಳು ಇತ್ತೀಚೆಗೆ ಹೆಚ್ಚಾಗಿ ವರದಿ ಆಗುತ್ತಿವೆ.

ಸಾಮಾಜಿಕ ಜಾಲತಾಣ ಟ್ವಿಟ್ಟರ್ ಬಳಕೆದಾರರಾದ ಶೋಭಿತ್ ಸಿದ್ಧಾರ್ಥ್ ಎಂಬುವವರು, ಝೊಮಾಟೊ ಆರ್ಡರ್‌ನಿಂದ ಆದ ತೊಂದರೆ ಕುರಿತು ಪೋಸ್ಟ್ ಮಾಡಿ ವಿವರಿಸಿದ್ದಾರೆ. ಪತ್ನಿ ಗರ್ಭಿಣಿಗೆ ಝೊಮಾಟೊದಲ್ಲಿ ಪನೀರ್ ಥಾಲಿ ಆರ್ಡರ್ ಮಾಡಿದ್ದ ಅವರು, ಸ್ವೀಕರಿಸಿದ್ದೇ ಬೇರೆ. ಸೂಕ್ತ ಸಮಯದಲ್ಲಿ ಊಟ ಮಾಡಲಾರದೆ ಆದ ಸಮಸ್ಯೆಯನ್ನು ಅವರು ತಿಳಿಸಿದ್ದಾರೆ.

ನನ್ನ ಗರ್ಭಿಣಿ ಹೆಂಡತಿಗಾಗಿ ನಾನು ಸಸ್ಯಾಹಾರಿ ಥಾಲಿ (ಪನೀರ್ ಥಾಲಿ) ಊಟವನ್ನು ಆರ್ಡರ್ ಮಾಡಿದ್ದೆ. ಸಸ್ಯಹಾರ ಆರ್ಡರ್ ಮಾಡಿದ ಬಳಿಕ, ಮಾಂಸಹಾರವನ್ನು ಸ್ವೀಕರಿಸುವುದು ಹೇಗೆ. ಈ ರೀತಿ ಅನೇಕರಿಗೆ ಇತ್ತೀಚೆಗೆ ಆಗುತ್ತಿದೆ. ದಯಮಾಡಿ ಇಂತಹ ತಪ್ಪುಗಳನ್ನು ಮಾಡದಂತೆ, ಸಸ್ಯಹಾರಿಗಳಿಗೆ ಮಾಂಸಹಾರ ವಿತರಣೆ ಆಗದಂತೆ ನೋಡಿಕೊಳ್ಳಿ ಎಂದು ಅವರು ಮಾಹಿತಿ ಹಂಚಿಕೊಂಡಿದ್ದಾರೆ.

**ಸಸ್ಯಹಾರಿಗಳಿಗೆ ಮಾಂಸಹಾರ ವಿತರಣೆ**

ಇದಕ್ಕೆ ಝೊಮಾಟೋ ಪ್ರತಿಕ್ರಿಯೆ ನೀಡಿದೆ. ನಾನು ಮತ್ತು ನನ್ನ ಹೆಂಡತಿಗೆಂದು ಝೊಮಾಟೋದಲ್ಲಿ ಎರಡು ಊಟ ಆರ್ಡರ್ ಮಾಡಿದ್ದೆವು. ಒಂದು ಚಿಕನ್ ಮತ್ತು ಒಂದು ಪನೀರ್ ಆರ್ಡರ್ ಮಾಡಿದ್ದೆವು.

ಮಗುವಿನ ನಿರೀಕ್ಷೆಯಲ್ಲಿರುವುದರಿಂದ ವೈದ್ಯರ ಸಲಹೆ ಮೇರೆಗೆ ಪತ್ನಿಗೆ ಮಾಂಸಾಹಾರ ಕೊಡುವುದು ನಿಲ್ಲಿಸಿದ್ದೇವೆ. ಹೀಗಾಗಿ ನನಗೆ ಚಿಕನ್ ಆಕೆಗೆ ಪನೀರ್ ಆರ್ಡರ್ ಮಾಡಿದ್ದೇ.

ಆದರೆ ಆರ್ಡರ್ ಮಾಡಿದ್ದನ್ನು ಕಳುಹಿಸುವ ಬದಲಾಗಿ ಎರಡು ಮಾಂಸಾಹಾರ ಥಾಲಿಗಳನ್ನೇ ಕಳಹಿಸಲಾಗಿದೆ. ಇದನ್ನು ತಿಂದರೆ ಮೊದಲ ತ್ರೈಮಾಸಿಕದಲ್ಲಿರುವ ಪತ್ನಿಗೆ ಆರೋಗ್ಯದ ಮೇಲೆ ಪರಿಣಾಮ ಬೀರಬಹುದು ಎಂದು ಅವರು ಕಳವಳ ವ್ಯಕ್ತಪಡಿಸಿದರು. ಶೋಭಿತ್ ಅವರು ಮೇ 18 ರಂದು ಘಟನೆ ಬಗ್ಗೆ ಫೋಟೋಗಳನ್ನು ಹಂಚಿಕೊಂಡಿದ್ದಾರೆ. ಇದಕ್ಕೆ ಪ್ರತಿಕ್ರಿಯೆ ನೀಡಿದ ಎರಡು ಊಟಗಳನ್ನು ಒಂದೆ ತೆರನಾಗಿ ನೀಡಲಾಗಿದೆ. ಇದರಿಂದ ನಿಮಗೆ ಆದ ನೋವಿಗೆ ನಮ್ಮ ವಿಷಾಧಿವಿದೆ. ಈ ಬಗ್ಗೆ ನಾವು ಅರ್ಥಮಾಡಿಕೊಳ್ಳುತ್ತೇವೆ.

ನಾನು ಸಸ್ಯಾಹಾರಿ, ಆದರೆ ನನಗೆ ಮಾಂಸಾಹಾರ ಕಳಹಿಸಲಾಗಿದೆ. ನಾನು ಧಾರ್ಮಿಕ ವ್ಯಕ್ತಿಯಾಗಿರುವುದರಿಂದ, ಇದು ನನ್ನ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿದೆ ಎಂದು ಅವರು ಟ್ವೀಟ್ ಮಾಡಿ ಅಸಮಾಧಾನ ವ್ಯಕ್ತಪಡಿಸಿದ್ದರು.

> **ಕಳೆದ ಒಂದು ವಾರದ ಹಿಂದಷ್ಟೇ ಪುಣೆಯ ವ್ಯಕ್ತಿಯೊಬ್ಬರು ಇದೇ ಝೊಮಾಟೊ ಮೂಲಕ ಪನೀರ್ ಬಿರಿಯಾನಿ ಆರ್ಡರ್ ಮಾಡಿದ್ದರು. ಅವರ ವೆಜ್ ಊಟದಲ್ಲಿ ನಾನ್ ವೆಜ್ ಬಂದಿತ್ತು. ಪನಿರ್ ಬಿರಿಯಾನಿಯಲ್ಲಿ ಅವರಿಗೆ ಚಿಕನ್ ಪೀಸ್ ಸಿಕ್ಕಿತ್ತು. ಪುಣೆಯ ಪಿಕೆ ಬಿರಿಯಾನಿ ಹೌಸ್‌ನಿಂದ ಪನೀರ್ ಬಿರಿಯಾನಿ ಆರ್ಡರ್ ಮಾಡಿದ್ದರು. ಆದರೆ ಅವರು ಆರ್ಡರ್ ಮಾಡಿದ್ದೇ ಬೇರೆ, ಅವರಿಗೆ ಸಿಕ್ಕಿದ್ದೆ ಬೇರೆ ಆಗಿತ್ತು.**

> **ಗ್ರಾಹಕರ ಆಹಾರದ ಆದ್ಯತೆಗಳನ್ನು ನಾವು ಪರಿಗಣಿಸುತ್ತೇವೆ. ನಿಮ್ಮ ಆಹಾರವನ್ನು, ಆಹಾರದ ಆಯ್ಕೆಯನ್ನು ಅಗೌರವಿಸಬೇಕೆಂಬುದು ಎಂದಿಗೂ ನಮ್ಮ ಉದ್ದೇಶವಾಗಿಲ್ಲ. ಇದನ್ನು ಪರಿಶೀಲಿಸಲು ನಮಗೆ ಸ್ವಲ್ಪ ಸಮಯವನ್ನು ನೀಡಿ ಮತ್ತು ನಾವು ಕರೆ ಅಥವಾ ಇಮೇಲ್ ಮೂಲಕ ನಿಮ್ಮನ್ನು ಸಂಪರ್ಕಿಸುತ್ತೇವೆ ಎಂದು ತಿಳಿಸಿದೆ.**

ಉದಯ ವಾಹಿನಿ
ಪ್ರಾದೇಶಿಕ
ಸೋಮವಾರ 20 ಮೇ 2024
03

# ಹಲಸು ಸೀಸನ್ ಶುರು, ಮಾರಾಟ ಜೋರು

● ಮಳೆ ಕೊರತೆಯ ಕಾರಣಕ್ಕೆ ಉಂಟಾದ ಬರಗಾಲವು ಈ ಬಾರಿ ಹಲಸಿನ ಋತು ಆರಂಭವನ್ನು ಕೊಂಚ ಮುಂದೂಡಿದೆ

• ಉದಯವಾಹಿನಿ ಚಾಮರಾಜನಗರ

ಜಿಲ್ಲೆಯಲ್ಲಿ ಹಲಸಿನ ಸೀಸನ್ ಆರಂಭವಾಗಿದೆ. ಕಳೆದ ವರ್ಷ ಮಳೆ ಕೊರತೆಯ ಕಾರಣಕ್ಕೆ ಉಂಟಾದ ಬರಗಾಲವು ಈ ಬಾರಿ ಹಲಸಿನ ಋತು ಆರಂಭವನ್ನು ಕೊಂಚ ಮುಂದೂಡಿದೆ. ಅಲ್ಲದೆ, ಇಳುವರಿ ಕಡಿಮೆಯಾಗುವಂತೆ ಮಾಡಿದೆ.

ಹಿಂದಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ಉತ್ತಮ ಮಳೆಯಾದ ಪರಿಣಾಮ ಫಸಲು ಹೆಚ್ಚಾಗಿತ್ತು. ಈ ವರ್ಷ ಕಡಿಮೆ ಇದೆ. ಗಿಡಗಳಲ್ಲಿ ಗೊಂಚಲು ಗೊಂಚಲಾಗಿ ಹಲಸು ಕಂಡು ಬರುತ್ತಿಲ್ಲ' ಎಂದು ಹೇಳುತ್ತಾರೆ ರೈತರು.

**ಮಳೆಯಾದ ಪರಿಣಾಮ ಫಸಲು ಹೆಚ್ಚು**

**ಮಾರಾಟ ಜೋರು:** ಮಳೆ ಆರಂಭ ವಾಗುತ್ತಿದ್ದಂತೆಯೇ ಮರಗಳಲ್ಲಿ ಬಿಟ್ಟಿದ್ದ ಹಲಸಿನ ಕಾಯಿಗಳು ಹಣ್ಣಾಗುವುದಕ್ಕೆ ಆರಂಭವಾಗಿದೆ. ಚಾಮರಾಜನಗರದ ದೊಡ್ಡರಾಯಪೇಟೆ ಕ್ರಾಸ್, ಚಂದಕವಾಡಿ, ಬಿಳಿಗಿರಿರಂಗನಬೆಟ್ಟ ಸೇರಿದಂತೆ ವಿವಿಧ ಕಡೆಗಳಲ್ಲಿ ಎರಡು ವಾರಗಳ ಹಿಂದಿನಿಂದಲೇ ಹಲಸಿನ ಹಣ್ಣಿನ ಮಾರಾಟ ಆರಂಭವಾಗಿತ್ತು. ಆದರೆ, ಹೆಚ್ಚಿನ ಪ್ರಮಾಣದಲ್ಲಿ ಹಣ್ಣುಗಳು ಬರುತ್ತಿರಲಿಲ್ಲ. ಕೆಲವು ದಿನಗಳಿಂದ ಹೆಚ್ಚೆಚ್ಚು ಹಣ್ಣುಗಳು ಲಭ್ಯವಾಗುತ್ತಿದ್ದು, ಮಾರಾಟ ಬಿರುಸುಗೊಂಡಿದೆ. ಚಾಮರಾಜನಗರ ತಾಲ್ಲೂಕಿನ ಆಲೂರು, ಕೂಡ್ಲೂರು ಭಾಗ, ಚಂದಕವಾಡಿ ಭಾಗದಲ್ಲಿ ಬೆಳೆಯುವ ಹಲಸಿನ ಹಣ್ಣುಗಳು ಹೆಚ್ಚು ರುಚಿಯಾಗಿರುತ್ತವೆ. ಹಾಗಾಗಿ, ಇವಕ್ಕೆ ಬೇಡಿಕೆ ಹೆಚ್ಚು. ಸಂತೇಮರಹಳ್ಳಿ ಕಡೆಗೆ ಹೋಗುವ ಹೆದ್ದಾರಿಯಲ್ಲಿ ದೊಡ್ಡ ರಾಯಪೇಟೆ ಕ್ರಾಸ್ ಬಳಿ ಹಲಸಿನ ಹಣ್ಣು ಮಾರಾಟ ಮಾಡುವವರು ಕಾಣಸಿಗುತ್ತಾರೆ. ಬಿಳಿಗಿರಿರಂಗನಬೆಟ್ಟಕ್ಕೆ ಹೋಗುವ ರಸ್ತೆಯಲ್ಲಿ ಚಂದಕವಾಡಿ ಬಳಿಯಲ್ಲೂ ಹಲಸಿನ ಹಣ್ಣು ಮಾರಾಟ ಮಾಡುವುದನ್ನೇ ಕಾಯಕ ಮಾಡಿಕೊಂಡವರನ್ನು ಕಾಣಬಹುದು. ಪ್ರವಾಸಿ ತಾಣಗಳಲ್ಲಿ, ಪ್ರವಾಸಿ ತಾಣಗಳನ್ನು ಸಂಪರ್ಕಿಸುವ ರಸ್ತೆಗಳ ಬದಿ ವ್ಯಾಪಾರಿಗಳು ಹಲಸಿನ ಕಾಯಿ, ಹಣ್ಣುಗಳನ್ನು ರಾಶಿ ಹಾಕಿ ಮಾರಾಟ ಮಾಡುತ್ತಾರೆ.

ಸಾಮಾನ್ಯವಾಗಿ ಹಣ್ಣುಗಳನ್ನು ಮಾರಾಟ ಮಾಡುವ ಇವರು, ಹಲಸಿನಕಾಯಿ ಸೀಸನ್ ಆರಂಭವಾಗುತ್ತಲೇ, ಹಲಸಿನ ಮಾರಾಟ ಆರಂಭಿಸುತ್ತಾರೆ. ಸೀಸನ್ ಆರಂಭದಲ್ಲಿ ಬೆಲೆ ಕೊಂಚ ದುಬಾರಿ ಇರುತ್ತದೆ. ಮಳೆ ಶುರುವಾಗಿ ಆವಕ ಹೆಚ್ಚಾಗುತ್ತಿದ್ದಂತೆಯೇ ಬೆಲೆ ಕಡಿಮೆಯಾಗುತ್ತದೆ.

ಎರಡು ವಾರಗಳ ಹಿಂದೆ ಕೆಲವು ಕಡೆಗಳಲ್ಲಿ ಒಂದು ತೊಳೆಗೆ 4ರವರೆಗೂ ಹೇಳುತ್ತಿದ್ದರು. ಬಿಳಿಗಿರಿರಂಗನಬೆಟ್ಟದಲ್ಲಿ ಈಗಲೂ ಅಷ್ಟೇ ಇದೆ. ಉಳಿದ ಕಡೆಗಳಲ್ಲಿ ಸದ್ಯ, ತೊಳೆಗೆ 2 ಇದೆ. ಕೆಲವು ವ್ಯಾಪಾರಿಗಳು ಹಣ್ಣಿನಿಂದ ತೊಳೆ ಬಿಡಿಸಿ ಮಾರಾಟ ಮಾಡಿದರೆ, ಇನ್ನೂ ಕೆಲವರು, 10–12 ತೊಳೆಗಳಿರುವ ಹಣ್ಣಿನ ತುಂಡನ್ನೇ ಕೊಡುತ್ತಿದ್ದಾರೆ. ಇಂತಹ ಒಂದು ತುಂಡಿಗೆ 20ರವರೆಗೆ ಇದೆ. ಇಡೀ ಹಲಸಿನ ಹಣ್ಣಿಗೆ ಗಾತ್ರಕ್ಕೆ ಅನುಸಾರವಾಗಿ ಬೆಲೆ ಹೇಳುತ್ತಿದ್ದಾರೆ.

15 ವರ್ಷಗಳಿಂದ ಮಾರಾಟ ಮಾಡುತ್ತಿದ್ದೇನೆ. ಆಲೂರು ಸೇರಿದಂತೆ ಎಲ್ಲಿ ಹಲಸಿನಕಾಯಿ ಲಭ್ಯ ಇದೆಯೋ ಅಲ್ಲಿಂದ ಖರೀದಿ ಮಾಡುತ್ತೇನೆ. ಕೆಲವು ಕಡೆಗಳಲ್ಲಿ ನಾವೇ ಮರಗಳನ್ನು ಗುತ್ತಿಗೆಗೆ ಪಡೆದಿದ್ದೇನೆ. ಒಮ್ಮೆ ಹಲಸು ಸಿಗಲು ಆರಂಭಿಸಿದರೆ ಐದರಿಂದ ಆರು ತಿಂಗಳ ಕಾಲ ಸಿಗುತ್ತದೆ. ಈ ಬಾರಿ ಇಳುವರಿ ಸ್ವಲ್ಪ ಕಡಿಮೆಯಂತೆ ಕಾಣುತ್ತಿದೆ' ಎಂದು ಅವರು ವಿವರಿಸಿದರು.


ಉದಯವಾಹಿನಿ ಚಿತ್ರ

> ಈಗಷ್ಟೇ ಹಣ್ಣುಗಳು ಬರುವುದಕ್ಕೆ ಆರಂಭವಾಗಿದೆ. ಮಳೆ ಸುರಿಯಲು ಆರಂಭವಾದರೆ, ಹಣ್ಣಿನ ರುಚಿ ಇನ್ನಷ್ಟು ಹೆಚ್ಚುತ್ತದೆ. ನಮ್ಮಲ್ಲಿ 50ರಿಂದ ಹಿಡಿದು 300 ವರೆಗಿನ ಹಲಸಿನ ಕಾಯಿ, ಹಣ್ಣುಗಳು ಲಭ್ಯವಿವೆ -ಮಹದೇವಯ್ಯ, ಕಾಡಹಳ್ಳಿ

**ಹಲಸಿನ ಬಗ್ಗೆ ಜನರಲ್ಲಿ ಜಾಗೃತಿ**

ದಕ್ಷಿಣ ಕನ್ನಡ ಮಲೆನಾಡು ಕೇರಳ ಭಾಗದಲ್ಲಿ ಹಲಸು ಮೇಳಗಳನ್ನು ನಡೆಸಲಾಗುತ್ತದೆ. ಹಲಸಿನಿಂದ ಮಾಡಬಹುದಾದ ವಿವಿಧ ಉತ್ಪನ್ನಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಜಿಲ್ಲೆಯಲ್ಲಿ ಅಂತಹ ಪ್ರಯತ್ನಗಳು ನಡೆದಿಲ್ಲ. ಆದರೆ ಹಲಸಿನ ಬಗ್ಗೆ ಜನರಲ್ಲಿ ಜಾಗೃತಿ ಮೂಡುತ್ತಿದೆ. ಹಲಸಿನಿಂದಲೂ ಆದಾಯ ಗಳಿಸಬಹುದು ಎಂಬುದನ್ನು ಕಂಡುಕೊಂಡಿದ್ದಾರೆ.

> ಬಹುತೇಕ ಗ್ರಾಮೀಣ ಪ್ರದೇಶದಲ್ಲಿ ಮಳೆ ಕೊರತೆಯಿಂದ ಹಲಸಿನ ವೃಕ್ಷಗಳಲ್ಲಿ ಇಳುವರಿ ಕಡಿಮೆಯಾಗಿದೆ. ಗುಣಮಟ್ಟದ ಕಾಯಿಗಳ ಕೊರತೆ ಇದೆ. ಹಾಗಾಗಿ ಬೆಲೆ ಹೇಳಿಕೊಳ್ಳುವಷ್ಟಿಲ್ಲ. ಸ್ಥಳೀಯ ಹಣ್ಣುಗಳು ಗ್ರಾಮೀಣ ಮಟ್ಟದಲ್ಲೇ ಮಾರಾಟವಾಗುತ್ತದೆ. ದೊಡ್ಡ ಕಾಯಿಗಳು ಕಾಣುತ್ತಿಲ್ಲ. ಪ್ರತಿ ಕಾಯಿಗೆ 30 ರಿಂದ 50ರ ಬೆಲೆಯಲ್ಲಿ ವ್ಯಾಪಾರಿಗಳು ಖರೀದಿಸುತ್ತಿದ್ದಾರೆ -ಚಾಮುಂಡಿ ನಾಯಕ್ ಗೂಳಿಪುರ ಗ್ರಾಮದ ಬೆಳೆಗಾರ

## ಸರ್ಕಾರದ ಉದ್ಯೋಗವೇ ಮುಖ್ಯವೆಂಬ ಧೋರಣೆ ಬಿಡಿ: ಕೈವಾರ ಅಮರ್‌ನಾಥ್ ಗುಪ್ತ


• ಉದಯವಾಹಿನಿ, ಶಿಡ್ಲಘಟ್ಟ

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಶೈಕ್ಷಣಿಕವಾಗಿ ಮುಂದುವರೆದಲ್ಲಿ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ, ಪ್ರತಿಯೊಂದಕ್ಕೂ ಸರ್ಕಾರದ ಉದ್ಯೋಗವೇ ಮುಖ್ಯವೆಂಬ ದೋರಣೆಯನ್ನು ಬಿಟ್ಟು ಸ್ವಾವಲಂಬಿ ಬದುಕು ಅತ್ಯಗತ್ಯವಾಗಿದೆ ಎಂದು ನಿವೃತ್ತ ಉಪನ್ಯಾಸಕ ಹಾಗೂ ಆರ್ಯವೈಶ್ಯ ಮಹಾಸಭೆಯ ನಿರ್ದೇಶಕ ಕೈವಾರ ಅಮರ್‌ನಾಥ್ ಗುಪ್ತ ತಿಳಿಸಿದರು.

ನಗರದ ಆರ್ಯವೈಶ್ಯ ಮಂಡಳಿ, ವಾಸವಿ ಮಹಿಳಾ ಮಂಡಳಿ ಮತ್ತು ವಾಸವಿ ಯುವಜನ ಸಂಘದ ಸಂಯುಕ್ತ ಆಶ್ರಯದಲ್ಲಿ ವಾಸವಿ ಕಲ್ಯಾಣ ಮಂಟಪದಲ್ಲಿ ನಡೆದ ವಾಸವಿ ಜಯಂತಿ ಕಾರ್ಯಕ್ರಮದ ಅಂಗವಾಗಿ ನಡೆದ ಪ್ರತಿಭಾಪುರಸ್ಕಾರ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣ ಕಾರಣರಾಗಿ ಮಾತನಾಡಿದರು.

ನಮ್ಮ ಸಮಾಜದ ಮುಖ್ಯ ವೃತ್ತಿಯಾದ ವ್ಯಾ ಪಾರ ವಹಿವಾಟು ಅತ್ಯಂತ ಕಷ್ಟಕರವಾಗಿದ್ದು ಯಾರು ನಿರೀಕ್ಷೆ ಮಾಡದ ರೀತಿಯಲ್ಲಿ ಸ್ಪರ್ಧೆ ಇದ್ದು, ಇದನ್ನು ಮನಗೊಂಡ ಆರ್ಯವೈಶ್ಯ ಮಹಾಸಭೆ ಸಮಾಜದ ಯುವಕರಿಗೆ ಅನೇಕ ಅವಕಾಶಗಳನ್ನು ಕಲ್ಪಿಸಿದೆ ಶೈಕ್ಷಣಿಕವಾಗಿ ಮುಂದುವರೆಯಲು ಆರ್ಥಿಕ ಸಹಾಯ ಮಾಡುತ್ತಿದೆ, ಬಡ್ಡಿ ರಹಿತ ಸಾಲಯೋಜನೆ, ಸ್ವಯಂ ಉದ್ಯಮ ಸ್ಥಾಪಿಸಲು ಉಚಿತ ತರಬೇತಿಯನ್ನು ನೀಡುವ ಉದ್ಯೋಗ ಮಿತ್ರ, ಹಾಗೂ ಸಮಾಜದ ದೊಡ್ಡ ಉದ್ಯಮಿಗಳು ಸಹಾಯದಿಂದ ಕಾರ್ಖಾನೆಗಳನ್ನು ಸ್ಥಾಪಿಸಲು ಆರ್ಥಿಕ ವ್ಯವಸ್ಥೆ ಸಹ ಮಾಡುತಿದೆ, ವಿದೇಶಗಳಲ್ಲಿ ವ್ಯಾಸಂಗ ಮಾಡಲು ಅವಕಾಶ ಕಲ್ಪಿಸುತ್ತದೆ. ಆರ್ಥಿಕವಾಗಿ ಹಿಂದುಳಿದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್ ಟಾಪ್ ನೀಡುತ್ತದೆ, ಸಮಾಜದ ವಯೋವೃದ್ದರ ಪಿಂಚಣಿ, ವಿಧವಾವೇತನ, ಅಂಗವಿಕಲರಿಗೆ ಮಾಸಿಕ ಪಿಂಚಣಿ ನೀಡುವ ಹಾಗೂ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು ಇದರ ಸದುಪಯೋಗ ಪಡಿಸಿಕೊಳ್ಳಲು ಕರೆನೀಡಿದರು.

2023/24 ನೆಯ ಸಾಲಿನಲ್ಲಿ ನಡೆದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಆರ್ಯವೈಶ್ಯ ಮಂಡಳಿ ಅಧ್ಯಕ್ಷ ಕೃಷ್ಣಯ್ಯ ಶೆಟ್ಟಿ, ರೂಪಸಿ ರಮೇಶ್, ವಿಜಯಲಕ್ಷ್ಮಿ ಗೋಪಾಲ ಕೃಷ್ಣ, ಶೇಷಾನಂದ,ಮುರಳೀಧರನ್, ಹಾಗೂ ಮಂಜುನಾಥ್ ರವರನ್ನು ಸನ್ಮಾನಿಸಲಾಯಿತು ಕಾರ್ಯಕ್ರಮದಲ್ಲಿ ಟಿಎಸ್ ಕೆ ಬಾಬು,ಗಜಲಕ್ಷ್ಮಿ, ಸಂದೀಪ್ ರಾಜ್, ಶರತ್ ಬಾಬು, ಹಾಗೂ ಇತರರು ಪಾಲ್ಗೊಂಡರು.


ಉದಯವಾಹಿನಿ ಚಿತ್ರ

> ಸಮಾಜ ಅಭಿವೃದ್ಧಿಯಾಗಬೇಕಾದರೆ ಅವರಲ್ಲಿ ಸ್ವಾವಲಂಬನೆ ಅತಿ ಮುಖ್ಯವಾಗಿದ್ದು ಇಂದಿನ ದಿನಗಳಲ್ಲಿ ಅಭಿವೃದ್ಧಿ ಹೊಂದಲು ಅನೇಕ ಅವಕಾಶಗಳನ್ನು ಆರ್ಯವೈಶ್ಯ ಮಹಾಸಭೆ ಒದಗಿಸುತ್ತದೆ. ಆರ್ಥಿಕವಾಗಿ ಸಾಮಾಜಿಕವಾಗಿ ಹಾಗೂ ಸ್ವಯಂ ಉದ್ಯೋಗ ತರಬೇತಿಯನ್ನು ನೀಡಿ ಸ್ವದೇಶಿ ಮತ್ತು ವಿದೇಶಗಳಲ್ಲೂ ಸಹ ಪ್ರತಿಭಾನ್ವಿತ ಯುವಕರಿಗೆ ಅವಕಾಶಗಳನ್ನು ಒದಗಿಸುತ್ತದೆ. ಇದರ ಸದುಪಯೋಗ ಪಡೆದು ಸಮಾಜದ ಪ್ರಗತಿಗೆ ಕಾರಣಕರ್ತರಾಗಬೇಕು -ಕೈವಾರ ಅಮರ್ ನಾಥ್ ಗುಪ್ತ

## ಕಂಗೊಳಿಸುತ್ತಿದೆ 3 ನದಿಗಳ ತ್ರಿವೇಣಿ ಸಂಗಮ

• ಉದಯವಾಹಿನಿ, ನಾಪೋಕ್ಲು

ಮಡಿಕೇರಿಯಿಂದ ಪಶ್ಚಿಮಕ್ಕೆ 40 ಕಿ.ಮೀ ದೂರದಲ್ಲಿರುವ ಭಾಗಮಂಡಲ ಕೊಡಗಿನ ಪ್ರಮುಖ ಪ್ರೇಕ್ಷಣೀಯ ಯಾತ್ರಾಸ್ಥಳ. ಕಾವೇರಿಯ ಉಗಮ ಸ್ಥಾನ ತಲಕಾವೇರಿಯ ಸನಿಹದ ಭಾಗಮಂಡಲವು ಭಗಂಡೇಶ್ವರ, ಸುಬ್ರಹ್ಮಣ್ಯ ಹಾಗೂ ಮಹಾವಿಷ್ಣು ದೇಗುಲ ಸಂಕೀರ್ಣಗಳಿಂದ ಪ್ರಸಿದ್ಧವಾಗಿದೆ.

ಕೇರಳದ ಕಲಾಶೈಲಿ ಮಾದರಿಯನ್ನು ಹೋಲುವ ಈ ದೇವಾಲಯಕ್ಕೆ ತಲಕಾವೇರಿ ದರ್ಶನಕ್ಕೆ ಬರುವವರೆಲ್ಲರೂ ಭೇಟಿ ನೀಡುತ್ತಾರೆ. ಹಸಿರು ಹೊದ್ದು ನಿಂತ ಬೆಟ್ಟಗುಡ್ಡಗಳ ಸುಂದರ ಪರಿಸರದ ನಡುವೆ ಇರುವ ಭಾಗಮಂಡಲಕ್ಕೆ ಕಾಲಿಡುವಾಗಲೇ ಕಾವೇರಿ, ಕನ್ನಿಕೆಯರ ಸಂಗಮ ಕಾಣುತ್ತದೆ.

ಕಾವೇರಿ ನದಿಯು ತಲಕಾವೇರಿಯಿಂದ ಮೂರು ಮೈಲು ಕೂಡಾ ಹರಿದಿಲ್ಲ ಎನ್ನುವಾಗಲೇ ಕನ್ನಿಕೆ ಜೊತೆಗೂಡುತ್ತಾಳೆ. ಇಲ್ಲಿ ಇನ್ನೊಂದು ನದಿ ಸುಜ್ಯೋತಿ ಗುಪ್ತಗಾಮಿನಿಯಾಗಿ ಬಂದು ಸೇರುತ್ತದೆ. ಸ್ಕಂದ ಪುರಾಣ ಪ್ರಸಿದ್ಧ ಭಗಂಡೇಶ್ವರ ದೇವಾಲಯದ ಮುಂಭಾಗದಲ್ಲಿಯೇ ಈ ಮೂರು ನದಿಗಳ ತ್ರಿವೇಣಿ ಸಂಗಮವಿದೆ. ಈ ಸಂಗಮದಿಂದಾಗಿಯೇ ಭಾಗಮಂಡಲ ದಕ್ಷಿಣದ ಪ್ರಯಾಗ ಎಂದು ಪ್ರಖ್ಯಾತಿ.

ಈಗ ತ್ರಿವೇಣಿ ಸಂಗಮ ಪ್ರೇಕ್ಷಣೀಯ ತಾಣವಾಗುವತ್ತ ಹೆಜ್ಜೆ ಇಟ್ಟಿದೆ. ಸಂಗಮದ ಬಳಿ ಉದ್ಯಾನ ನಿರ್ಮಾಣಗೊಂಡಿದ್ದು, ಜನಾಕರ್ಷಣೀಯ ತಾಣವಾಗಿ ರೂಪುಗೊಳ್ಳುತ್ತಿದೆ. ಭಗಂಡೇಶ್ವರ ದೇವಾಲಯದ ಎದುರಿನ ತ್ರಿವೇಣಿ ಸಂಗಮದ ಆವರಣ ಸುಂದರ ಉದ್ಯಾನದಂತೆ ಕಂಗೊಳಿಸುತ್ತಿದೆ. ತ್ರಿವೇಣಿ ಸಂಗಮವನ್ನು ಜನ ಆಕರ್ಷಣೀಯ ಸ್ಥಳವಾಗುವಂತೆ ಮಾಡಲು 2 ಕೋಟಿ ಅನುದಾನದಲ್ಲಿ ಅಭಿವೃದ್ಧಿ ಕಾರ್ಯಗಳು ಭರದಿಂದ ನಡೆಯುತ್ತಿವೆ.


ಉದಯವಾಹಿನಿ ಚಿತ್ರ

## ನಾಮಫಲಕಗಳಲ್ಲಿ ಕಾಣೆಯಾದ 'ಕನ್ನಡ'

• ಉದಯವಾಹಿನಿ, ಗುಂಡ್ಲುಪೇಟೆ

ನಾಮಫಲಕಗಳಲ್ಲಿ ಶೇ 60ರಷ್ಟು ಕನ್ನಡ ಭಾಷೆ ಇರಬೇಕು ಎಂಬ ನಿಯಮವಿದ್ದರೂ ಪಟ್ಟಣ ಮತ್ತು ತಾಲ್ಲೂಕಿನಲ್ಲಿ ಹೊರ ರಾಜ್ಯದವರು ನಡೆಸುತ್ತಿರುವ ಉದ್ಯಮಗಳ ಫಲಕಗಳಲ್ಲಿ ಕನ್ನಡ ಭಾಷೆ ಕಾಣಿಸುತ್ತಿಲ್ಲ. ಗುಂಡ್ಲುಪೇಟೆ ತಾಲ್ಲೂಕು ಎರಡು ರಾಜ್ಯದೊಂದಿಗೆ ಗಡಿ ಹಂಚಿಕೊಂಡಿದ್ದು, ಎರಡು ರಾಜ್ಯಗಳ ಜನರು ಇಲ್ಲಿ ವ್ಯವಹಾರ ನಡೆಸುತ್ತಾರೆ.

**ಕನ್ನಡ ಪರ ಸಂಘಟನೆಗಳ ಕೆಂಗಣ್ಣಿಗೆ ಗುರಿ**

ಆದರೆ, ಉದ್ಯಮಗಳಲ್ಲಿ ಇಂಗ್ಲಿಷ್ ಭಾಷೆಯ ಬೋರ್ಡ್‌ಗಳೇ ಅಧಿಕ ಸಂಖ್ಯೆಯಲ್ಲಿ ರಾರಾಜಿಸುತ್ತಿದೆ. ಇದು ವಿವಿಧ ಕನ್ನಡ ಪರ ಸಂಘಟನೆಗಳ ಕೆಂಗಣ್ಣಿಗೆ ಗುರಿಯಾಗಿದೆ. ಪುರಸಭೆ ಆಡಳಿತ ಮಂಡಳಿಯವರು ಕನ್ನಡ ನಾಮಫಲಕ ಅಳವಡಿಸಿ ಎಂದು ತಿಳಿಸಿದ್ದಾರೆ. ಆದರೂ ಮಾಲೀಕರು ಫಲಕದಲ್ಲಿ ಕನ್ನಡ ಭಾಷೆಯಲ್ಲಿ ಬರೆಯಲು ಮುಂದಾಗಿಲ್ಲ. ಪಟ್ಟಣ ಸೇರಿದಂತೆ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ ಬದಿಯಲ್ಲಿ ಇರುವ ಅಂಗಡಿ, ಹೋಟೆಲ್, ಮಳಿಗೆ, ವ್ಯಾಪಾರಿ ಸಂಸ್ಥೆಗಳ ನಾಮಫಲಕಗಳಲ್ಲಿ ಕನ್ನಡ ಭಾಷೆ ಮಾಯವಾಗಿದ್ದು, ಮಲೆಯಾಳ, ಇಂಗ್ಲಿಷ್ ಹಾಗೂ ಹಿಂದಿಮಯವಾಗಿದೆ.

ಪಟ್ಟಣದ ಎಂಆರ್‌ಎಫ್ ಟಯರ್ಸ್, ಟೀಚರ್ಸ್ ಬಡಾವಣೆ, ಬಿಎಸ್‌ಎಸ್ ಬಡಾವಣೆ, ಖಾನ್ ಗುಫಾ ಹೋಟೆಲ್, ಮಿಸ್ಟಿ ರಾಕ್, ಹಂಗಳ ಗ್ರಾಮದ ಶ್ರೀವಿನಾಯಕ ಲಾಡ್ಜ್ ಅಂಡ್ ರೆಸ್ಟೋರೆಂಟ್, ಫುಡ್ ಕ್ಯಾಪಿಟಲ್ ಸೇರಿದಂತೆ ಅನೇಕ ವಾಣಿಜ್ಯ ಕಟ್ಟಡಗಳಲ್ಲಿ ಕನ್ನಡ ಬಳಸದೆ ಇಂಗ್ಲಿಷ್ ಭಾಷೆಯ ನಾಮಫಲಕಗಳನ್ನು ಅಳವಡಿಸಲಾಗಿದೆ' ಎಂದು ಕನ್ನಡ ಪರ ಸಂಘಟನೆಗಳ ಪ್ರತಿನಿಧಿಗಳು ದೂರಿದ್ದಾರೆ.



ಉದಯವಾಹಿನಿ ಚಿತ್ರ

## ಗೊರವನಹಳ್ಳಿ ಲಕ್ಷ್ಮಿ ದೇವಾಲಯಕ್ಕೆ ಸುಧಾಮೂರ್ತಿ ಭೇಟಿ

• ಉದಯವಾಹಿನಿ, ತುಮಕೂರು

ಇನ್ಫೋಸಿಸ್ ಮುಖ್ಯಸ್ಥೆ ಸುಧಾ ಮೂರ್ತಿಯವರು ಇಂದು ಮುಂಜಾನೆ ಗೊರವನಹಳ್ಳಿ ಮಹಾಲಕ್ಷ್ಮಿ ದೇವಾಲಯಕ್ಕೆ ಭೇಟಿ ನೀಡಿದ್ದಾರೆ. ತುಮಕೂರಿನ ಕೊರಟಗೆರೆಯ ಗೊರವನಹಳ್ಳಿಯಲ್ಲಿರುವ ಮಹಾಲಕ್ಷ್ಮಿ ದೇವಸ್ಥಾನಕ್ಕೆ ಸಂಬಂಧಿಕರೊಂದಿಗೆ ಆಗಮಿಸಿದ ದೇವಿಯ ದರ್ಶನ ಪಡೆದಿದ್ದಾರೆ. ಬಳಿಕ ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ದೇವಸ್ಥಾನದ ಆಡಳಿತ ಮಂಡಳಿಯ ಜೊತೆ ಕೆಲಕಾಲ ಚರ್ಚೆ ನಡೆಸಿದ್ದಾರೆ. ದೇವಾಲಯದ ಆಡಳಿತ ಮಂಡಳಿಯಿಂದ ಸುಧಾಮೂರ್ತಿಯವರಿಗೆ ವಿಶೇಷ ಗೌರವ ಸಲ್ಲಿಸಿತು.


ಉದಯವಾಹಿನಿ ಚಿತ್ರ

## ಸ್ಟೇಡಿಯಂ ಬಸ್‌ಸ್ಟಾಂಡ್, ತಂಗುದಾಣ ನಿರ್ಮಿಸಿ

• ಚಮುಂಡ್ಯ

ಖಾಸಗಿ ಬಸ್‌ಗಳಲ್ಲಿ ನಿತ್ಯ ನೂರಾರು ಪ್ರಯಾಣಿಕರು ಹಲವು ವರ್ಷಗಳಿಂದ ಬೇಸಗರಹಳ್ಳಿ, ನಾಗಮಂಗಲಕ್ಕೆ ನಗರದ ಸ್ಟೇಡಿಯಂ ಖಾಸಗಿ ಬಸ್‌ಸ್ಟಾಂಡ್‌ನಿಂದಲೇ ಪ್ರಯಾಣಿಸುತ್ತಿದ್ದು, ಪ್ರಯಾಣಿಕರಿಗೆ ಅನುಕೂಲವಾಗಲು ತಂಗುದಾಣ ನಿರ್ಮಿಸುವಂತೆ ಜನರಿಂದ ಒತ್ತಾಯ ಕೇಳಿ ಬಂದಿದೆ.

ಹೌದು, ನಗರದ ಹೃದಯ ಭಾಗದಲ್ಲಿರುವ ಸರ್‌ಎಂ.ವಿ. ಕ್ರೀಡಾಂಗಣ ಹಾಗೂ ಹೆದ್ದಾರಿಯ ಕೂಗಳತೆಯ ದೂರದಲ್ಲಿರುವ ಸ್ಟೇಡಿಯಂ ಬಲಭಾಗದ ಖಾಸಗಿ ಬಸ್‌ಸ್ಟಾಂಡ್‌ನಂತೆ ಕಂಗೊಳಿಸುವ ಸ್ಥಳದಲ್ಲಿ ಪ್ರತಿನಿತ್ಯ ಪುರುಷರು, ಮಹಿಳೆಯರು, ವಿದ್ಯಾರ್ಥಿಗಳು ಹಾಗೂ ವೃದ್ಧರು ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಬೆಸಗರಹಳ್ಳಿ ಮಾರ್ಗವಾಗಿ ಮದ್ದೂರು ಹಾಗೂ ನಾಗಮಂಗಲಕ್ಕೆ ಹೋಗಲು ಪ್ರಯಾಣಿಕರು ಅವಲಂಬಿತವಾಗಿರುವುದು ಸಾಮಾನ್ಯವಾಗಿದೆ. ಬೆಸಗರಹಳ್ಳಿ ಕಡೆಗೆ ಹೋಗಲು ನಗರದಿಂದ ಶ್ರೀನಿವಾಸಪುರ, ಉಮ್ಮಡಹಳ್ಳಿ, ಬೆಳ್ಳೂಂಡಗೆರೆ, ಬಸವನಪುರ, ಕೀಲಾರ, ಆಲಕೆರೆ, ಮುದ್ದಂಗೆರೆ, ಡಣಾಯಕನಕಪುರ, ವಿದ್ಯಾಪೀಠ, ಕೆರೆಮೇಗಲದೊಡ್ಡಿ, ಬೆಸಗರಹಳ್ಳಿ ತಲುಪುತ್ತದೆ. ನಂತರ ಇದೇ ಮಾರ್ಗ ಬದಲಾವಣೆಯಲ್ಲಿ ಕೀಲಾರ, ಈಚಗೆರೆ, ಹೊಡಾಘಟ್ಟ, ಬೆಸಗರಹಳ್ಳಿ ಕಡೆ ಖಾಸಗಿ ಬಸ್‌ಗಳು ಸಂಚರಿಸುತ್ತವೆ. ನಂತರ ಬೆಸಗರಹಳ್ಳಿಯಿಂದ ಚುಂಚೇಗೌಡನದೊಡ್ಡಿ, ಬೆಸಗರಹಳ್ಳಿ ಅಡ್ಡ ರಸ್ತೆ, ಶಂಕರಪುರ, ದೇಶಹಳ್ಳಿ, ಚಾಮನಹಳ್ಳಿ, ಶಿವಪುರ, ಮದ್ದೂರು ಪಟ್ಟಣದಲ್ಲಿ ಕೊನೆ ಸ್ಟಾಪ್ ಆಗಿದ್ದು ಸುಮಾರು ಎಂಟಕ್ಕೂ ಅಧಿಕ ಖಾಸಗಿ ಬಸ್‌ಗಳು ಸಂಚರಿಸುತ್ತವೆ.



ಉದಯವಾಹಿನಿ ಚಿತ್ರ

## ದ್ರಾಕ್ಷಿ ಬೆಲೆ ಕುಸಿತ: ಬೆಳೆಗಾರರಿಗೆ ಹುಳಿಯಾದ 'ದ್ರಾಕ್ಷಿ', ಕೆ.ಜಿಗೆ 10ರೂ.

• ಉದಯವಾಹಿನಿ, ಚಿಕ್ಕಬಳ್ಳಾಪುರ

ದ್ರಾಕ್ಷಿ ಬೆಲೆ ಕುಸಿದಿದೆ. ಚಿಕ್ಕಬಳ್ಳಾಪುರ ಮತ್ತು ಶಿಡ್ಲಘಟ್ಟ ತಾಲ್ಲೂಕಿನ ಬೆಳೆಗಾರರು ಕಂಗಾಲಾಗಿದ್ದಾರೆ.

ಜಿಲ್ಲೆಯಲ್ಲಿ ದಿಲ್ ಖುಷ್, ಕಪ್ಪುದ್ರಾಕ್ಷಿ, ಕೃಷ್ಣಾಶರತ್, ರೆಡ್‌ಗ್ಲೋಬ್ ತಳಿಯ ದ್ರಾಕ್ಷಿಯನ್ನು ಹೆಚ್ಚಾಗಿ ಬೆಳೆಯುತ್ತಾರೆ. ಈಗ ರೈತರ ತೋಟಗಳಲ್ಲಿ ದಿಲ್‌ಖುಷ್ ದ್ರಾಕ್ಷಿ ಬೆಳೆ ಕಟಾವಿಗೆ ಬಂದಿದೆ.

ಸಗಟು ದರದಲ್ಲಿ ಸದ್ಯ, ಒಂದು ಕೆ.ಜಿ ದಿಲ್ ಖುಷ್ ದ್ರಾಕ್ಷಿಗೆ 20ರಿಂದ 25 ಬೆಲೆ ಇದೆ. ಹದಿನೈದು ದಿನಗಳ ಹಿಂದೆ ದರವು ಕೆ.ಜಿಗೆ 30ರಿಂದ 35ರ ಆಸುಪಾಸಿನಲ್ಲಿ ಇತ್ತು. ಇದಕ್ಕೂ ಹಿಂದೆ 50ರ ದರವಿತ್ತು. ಮಳೆ, ಬೇಡಿಕೆ ಇಲ್ಲದಿರುವುದು ಮತ್ತು ಉತ್ತರದ ರಾಜ್ಯಗಳಲ್ಲಿ ಚುನಾವಣೆಯೇ ಬೆಲೆ ಕುಸಿತಕ್ಕೆ ಪ್ರಮುಖ ಕಾರಣ ಎನ್ನುವುದು ರೈತರ ಪ್ರತಿಪಾದನೆ. ಬೆಲೆ ಹೆಚ್ಚಳವಾಗುವ ಸಾಧ್ಯತೆಯ ಬಗ್ಗೆಯೂ ರೈತರಿಗೆ ಖಚಿತ ಮಾಹಿತಿ ಇಲ್ಲ.

ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿಯೇ ಅಂದಾಜು ಎರಡರಿಂದ ಮೂರು ಸಾವಿರ ಎಕರೆಯಲ್ಲಿ ದ್ರಾಕ್ಷಿ ಬೆಳೆಯಲಾಗುತ್ತಿದೆ.

ಶಿಡ್ಲಘಟ್ಟ ತಾಲ್ಲೂಕಿನಲ್ಲಿ 600 ಹೆಕ್ಟೇರ್ ಪ್ರದೇಶದಲ್ಲಿ ದ್ರಾಕ್ಷಿ ಬೆಳೆಯಲಾಗುತ್ತಿದೆ. ಜಿಲ್ಲೆಯು ಮೊದಲಿನಿಂದಲೂ ದ್ರಾಕ್ಷಿಗೆ ಹೆಚ್ಚು ಹೆಸರುವಾಸಿ.

ಚಿಕ್ಕಬಳ್ಳಾಪುರ ತಾಲ್ಲೂಕಿನಲ್ಲಿ ಬಹಳಷ್ಟು ಬೆಳೆ ಈಗಾಗಲೇ ಕಟಾವು ಆಗಿದೆ. ಮತ್ತಷ್ಟು ರೈತರ ಬೆಳೆ ಈಗ ಕಟಾವಿಗೆ ಬಂದಿದೆ. ಮಳೆಯು ಅಬ್ಬರಿಸಿದರೆ ಮೈದುಂಬಿ ನಿಂತಿರುವ ದ್ರಾಕ್ಷಿ ತೋಟಗಳಿಗೆ ಹಾನಿ ಎಂದು ಬಹಳಷ್ಟು ರೈತರು ಬೆಲೆ ಕಡಿಮೆ ಇದ್ದರೂ ದ್ರಾಕ್ಷಿ ಕಟಾವು ಮಾಡಿಸುತ್ತಿದ್ದಾರೆ.


ಉದಯವಾಹಿನಿ ಚಿತ್ರ

**ಉತ್ತರದ ರಾಜ್ಯಗಳಲ್ಲಿ ಮಳೆ**

ಮಹಾರಾಷ್ಟ್ರದ ಸಾಂಗ್ಲಿಯ ದ್ರಾಕ್ಷಿ ಇನ್ನೂ ಮಾರುಕಟ್ಟೆಗೆ ಬರುತ್ತಿದೆ. ಅಲ್ಲದೆ ಉತ್ತರದ ರಾಜ್ಯಗಳಲ್ಲಿ ಮಳೆ ಬರುತ್ತಿರುವುದು ಸಹ ಬೆಲೆ ಕುಸಿತಕ್ಕೆ ಪ್ರಮುಖ ಕಾರಣ ಎನ್ನುತ್ತಾರೆ ರೈತರು.

## ಮಳಿಗೆ ನೋಂದಣಿಗೆ '12 ಟೇಬಲ್‌ಗೆ' ಲಂಚ ಕೊಡ್ಬೇಕು ಎಂಪಿಎಂಸಿ ಕಾರ್ಯದರ್ಶಿ' ವೀಡಿಯೋ ವೈರಲ್

• ಎಂಪಿಎಂಸಿ ಕೋಲಾರ

ಮಳಿಗೆ ಬಾಡಿಗೆ ನೀಡೋ ಸಂಬಂಧ ಲಂಚಕ್ಕೆ ಬೇಡಿಕೆಯಿಟ್ಟಿರುವಂತ ಎಪಿಎಂಸಿ ಕಾರ್ಯದರ್ಶಿ ಎನ್ ವಿಜಯಲಕ್ಷ್ಮೀ ಅವರ ಲಂಚಾವತಾರದ ವೀಡಿಯೋ ಸಖತ್ ವೈರಲ್ ಆಗಿದೆ.

ತರಕಾರಿ ದಲ್ಲಾಳಿಗಳ ಸಂಘದ ಮುಖಂಡರ ಬಳಿಯಲ್ಲಿ ಮಾತನಾಡಿರುವಂತ ವೀಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ವೈರಲ್ ಆಗಿರುವಂತ ವೀಡಿಯೋದಲ್ಲಿ ಎಪಿಎಂಸಿ ಮಹಿಳೆಯೊಂದನ್ನು ವರ್ತಕರ ಹೆಸರಿಗೆ ನೋಂದಾಯಿಸೋದಕ್ಕಾಗಿ ಸುಮಾರು 5 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ.ಇದಷ್ಟೇ ಅಲ್ಲದೇ ಎಂಪಿಎಂಸಿ ಮಳಿಗೆಗಳನ್ನು ನೋಂದಾಯಿಸೋದಕ್ಕಾಗಿ 12 ಟೇಬಲ್ ಬದಲಾಯಿಸಬೇಕು. 12 ಟೇಬಲ್ ಅಧಿಕಾರಿ, ಸಿಬ್ಬಂದಿಗಳಿಗೆ ಹಣ ನೀಡಬೇಕು. ಇದರಲ್ಲಿ ನನಗೆ 100 ರೂ ಕೂಡ ಸಿಗೋದಿಲ್ಲ ಎಂದಿದ್ದಾರೆ.

ಎಪಿಎಂಸಿ ಕಾರ್ಯದರ್ಶಿ ಕಚೇರಿಯಲ್ಲೇ ಎನ್ ವಿಜಯಲಕ್ಷ್ಮಿ ವರ್ತಕ ಸತೀಶ್ ಎಂಬುವರಿಂದ ಲಂಚಕ್ಕೆ ಬೇಡಿಕೆ ಇಟ್ಟಿರುವಂತ ವೀಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವಂತ ಎಪಿಎಂಸಿ ಕಾರ್ಯದರ್ಶಿ ಎನ್ ವಿಜಯಲಕ್ಷ್ಮೀ, ಈ ವೀಡಿಯೋ ಒಂದೂವರೆ ವರ್ಷದ ಹಿಂದಿನದ್ದು ಆಗಿದೆ. ಈಗ ವೈರಲ್ ಆಗಿದೆ. ಅಂದು ಸತೀಶ್ ಅಕ್ರಮವಾಗಿ ಮಳಿಗೆ ನೀಡುವಂತೆ ಕೇಳಿದ್ದರು. ಇದಕ್ಕೆ ಒಪ್ಪಿರಲಿಲ್ಲ ಎಂಬುದಾಗಿ ಸ್ಪಷ್ಟಪಡಿಸಿದ್ದಾರೆ.


ಉದಯವಾಹಿನಿ ಚಿತ್ರ

# ಹೇಮಾವತಿ ಲಿಂಕ್ ಕೆನಾಲ್ ನಿಲ್ಲಿಸುವ ಪ್ರಯತ್ನ: ಜಿ. ಪರಮೇಶ್ವರ

●1 ಸಾವಿರ ಕೋಟಿ ಹಣ ಕೊಟ್ಟಿದ್ದಾರೆ ● ಇದು ಸರ್ಕಾರದ ನಿರ್ಧಾರ, ನಮ್ಮ ನಿರ್ಧಾರವಲ್ಲ ಎಂದು ಅಸಹಾಯಕತೆ

• ಉದಯವಾಹಿನಿ ತುಮಕೂರು

ಮಾಗಡಿ ತಾಲ್ಲೂಕಿಗೆ ನೀರು ತೆಗೆದುಕೊಂಡು ಹೋಗುವ 'ಹೇಮಾವತಿ ಲಿಂಕ್ ಕೆನಾಲ್' ನಿರ್ಮಾಣ ಕಾಮಗಾರಿ ಮುಂದುವರಿಸುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ಜತೆ ಚರ್ಚಿಸಿದ ನಂತರ ಒಂದು ತೀರ್ಮಾನಕ್ಕೆ ಬರಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಜಿ.ಪರಮೇಶ್ವರ ಹೇಳಿದರು.

**ತಾಲ್ಲೂಕಿಗೆ 3 ಟಿಎಂಸಿ ನೀರು ಹಂಚಿಕೆ**

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, 'ಸಚಿವ ಸಂಪುಟ ಸಭೆಯಲ್ಲಿ ನಾನು, ಸಚಿವ ರಾಜಣ್ಣ ಈ ವಿಚಾರ ಪ್ರಸ್ತಾಪಿಸಿದ್ದೇವೆ. ನಾಲೆ ನಿರ್ಮಿಸಿದರೆ ಜಿಲ್ಲೆಯ ಜನರಿಗೆ ತೊಂದರೆಯಾಗುತ್ತದೆ ಎಂಬ ಸಂಗತಿಯನ್ನು ಗಮನಕ್ಕೆ ತಂದಿದ್ದೇವೆ. ಆದರೂ ನಿರ್ಧಾರ ಕೈಗೊಂಡು ಕೆಲಸ ಮಾಡಿಸುತ್ತಿದ್ದಾರೆ. 1 ಸಾವಿರ ಕೋಟಿ ಹಣ ಕೊಟ್ಟಿದ್ದಾರೆ. ಇದು ಸರ್ಕಾರದ ನಿರ್ಧಾರ. ನಮ್ಮ ನಿರ್ಧಾರವಲ್ಲ' ಎಂದು ಅಸಹಾಯಕತೆ ವ್ಯಕ್ತಪಡಿಸಿದರು. ಈ ಮಧ್ಯೆ ರೈತರು ಈ ಎಕ್ಸ್‌ಪ್ರೆಸ್ ಕೆನಾಲ್ ಕಾಮಗಾರಿ ತಡೆದು ನಿಲ್ಲಿಸಿದ್ದಾರೆ. ತಹಶೀಲ್ದಾರ್, ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗೆ ರೈತರು ಮನವಿ ಸಲ್ಲಿಸಿದ್ದಾರೆ. ಈ ಎಲ್ಲಾ ವಿಚಾರಗಳ ಬಗ್ಗೆ ಚರ್ಚೆಯಾಗಬೇಕಿದೆ. ಜಿಲ್ಲೆಗೆ 25 ಟಿಎಂಸಿ ಅಡಿಗಳಷ್ಟು ಹೇಮಾವತಿ ನೀರು ಹಂಚಿಕೆಯಾಗಿದ್ದು, ಈವರೆಗೂ 18ರಿಂದ 19 ಟಿಎಂಸಿಯಷ್ಟೂ ಹರಿದು ಬಂದಿಲ್ಲ. ಹೆಚ್ಚೆಂದರೆ 14ರಿಂದ 15 ಟಿಎಂಸಿ ನೀರು ಬಂದಿರಬಹುದು ಅಷ್ಟೇ. ಇಂತಹ ಸ್ಥಿತಿಯಲ್ಲಿ ಪಕ್ಕದ ಜಿಲ್ಲೆಗೂ ಕೊಡಬೇಕಾಗಿದೆ ಎಂದರು.

ಕಾಂಗ್ರೆಸ್ ಕಚೇರಿಯಲ್ಲಿ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣಾ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ಪರಮೇಶ್ವರ, ಎಸ್.ಪಿ.ಮುದ್ದಹನುಮೇಗೌಡ ಅವರು ಲೋಕಸಭೆ ಸದಸ್ಯರಾಗಿ ಆಯ್ಕೆಯಾಗುವುದು ಖಚಿತ. ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ' ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಪ್ರಧಾನಿ ನರೇಂದ್ರ ಮೋದಿ ಅಲೆಯೂ ಇಲ್ಲ, ಏನೂ ಇಲ್ಲ. ದೇಶದೆಲ್ಲೆಡೆ ಬದಲಾವಣೆ ಗಾಳಿ ಬೀಸುತ್ತಿದ್ದು, ಈ ಬಾರಿ ಅಚ್ಚರಿಯ ಫಲಿತಾಂಶ ಬರಲಿದೆ. ಅದೇ ರೀತಿ ಆಗ್ನೇಯ ಶಿಕ್ಷಕರ ಕ್ಷೇತ್ರದಲ್ಲೂ ಪಕ್ಷದ ಅಭ್ಯರ್ಥಿ ಗೆಲ್ಲಿಸುವಂತೆ ಮನವಿ ಮಾಡಿದರು.

ಎಐಸಿಸಿ ಕಾರ್ಯದರ್ಶಿ ಮಯೂರ ಜಯಕುಮಾರ್, ದೆಹಲಿ ವಿಶೇಷ ಪ್ರತಿನಿಧಿ, ಟಿ.ಬಿ.ಜಯಚಂದ್ರ, ಕೆಎಸ್ ಆರ್‌ಟಿಸಿ ನಿಗಮದ ಅಧ್ಯಕ್ಷ ಎಸ್.ಆರ್.ಶ್ರೀನಿವಾಸ್, ಎಚ್.ವಿ.ವೆಂಕಟೇಶ್, ಆಗ್ನೇಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಚಂದ್ರಶೇಖರ್‌ಗೌಡ, ಎಸ್.ಪಿ.ಮುದ್ದಹನುಮೇಗೌಡ ಮೊದಲಾದವರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

> ಕೃಷ್ಣಪ್ಪ ಮಾಡುವ ಹೋರಾಟಕ್ಕೆ ನನ್ನ ಬೆಂಬಲ ಇಲ್ಲ. ಕುಣಿಗಲ್ ತಾಲ್ಲೂಕಿಗೆ 3 ಟಿಎಂಸಿ ನೀರು ಹಂಚಿಕೆಯಾಗಿದೆ. ಅಷ್ಟು ನೀರು ತೆಗೆದುಕೊಂಡು ಹೋಗುತ್ತಿದ್ದೇವೆ ಎಂದು ಹೇಳಿದ್ದಾರೆ. ಗುಬ್ಬಿ ತಾಲ್ಲೂಕಿನ ಜನರ ಹಿತ ಕಾಯುವುದು ನನಗೆ ಗೊತ್ತಿದೆ' ಎಂದರು. ಕೃಷ್ಣಪ್ಪ ಗಂಡಸೇ -ಎಸ್.ಆರ್.ಶ್ರೀನಿವಾಸ್

**ಎಲ್ಲೋ ಮೈಕ್ ಹಿಡಿದುಕೊಂಡು ಕೃಷ್ಣಪ್ಪ ಮಾತನಾಡುವುದಲ್ಲ ಗುಬ್ಬಿಗೆ ಬಂದು ಮಾತನಾಡಲಿ: ಎಸ್.ಆರ್.ಶ್ರೀನಿವಾಸ್**

ಶಾಸಕ ಎಂ.ಟಿ.ಕೃಷ್ಣಪ್ಪ ಗಂಡಸಾದರೆ ಅವರಪ್ಪನಿಗೆ ಹುಟ್ಟಿದ್ದರೆ ನನ್ನ ಮುಂದೆ ಬಂದು ಮಾತನಾಡಲಿ. ಕೊರಳ ಪಟ್ಟಿ ಹಿಡಿದು ಕೇಳುತ್ತೇನೆ' ಎಂದು ಗುಬ್ಬಿ ಶಾಸಕ ಎಸ್.ಆರ್.ಶ್ರೀನಿವಾಸ್ ಗುಡುಗಿದರು. 'ಹೇಮಾವತಿ ಲಿಂಕ್ ಕೆನಾಲ್' ವಿರೋಧಿ ಹೋರಾಟ ಸಭೆಯಲ್ಲಿ 'ಶಾಸಕ ಶ್ರೀನಿವಾಸ್ ಕಳ್ಳ ಕಾಸಣ್ಣ ಗುಳ್ಳೇನರಿ' ಎಂದು ಎಂ.ಟಿ.ಕೃಷ್ಣಪ್ಪ ಜರಿದಿದ್ದರು. ಅದಕ್ಕೆ ಈ ರೀತಿ ಪ್ರತಿಕ್ರಿಯೆ ನೀಡಿದ್ದಾರೆ. ನಗರದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿ 'ಎಲ್ಲೋ ಮೈಕ್ ಹಿಡಿದುಕೊಂಡು ಕೃಷ್ಣಪ್ಪ ಮಾತನಾಡುವುದಲ್ಲ. ಗುಬ್ಬಿಗೆ ಬಂದು ಮಾತನಾಡಲಿ. ಆಗ ತೋರಿಸುತ್ತೇನೆ ಪರಿಣಾಮ ಎದುರಿಸಬೇಕಾಗುತ್ತದೆ' ಎಂದು ಎಚ್ಚರಿಸಿದರು. '

## ಮಿನಿ ನ್ಯೂಸ್

### ಕುಡಿಯುವ ನೀರಿನ ಸಮಸ್ಯೆ: ಕಲುಷಿತ ನೀರು ಸೇವಿಸಿ 114 ಮಂದಿಗೆ ಕಾಲರಾ

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿಧಾನಸಭೆ ಕ್ಷೇತ್ರವಾದ ವರುಣದ ತಗಡೂರು ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದೆ ಅಲ್ಲಿನ ಜನ ತೀರಾ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಕಲುಷಿತ ನೀರು ಸೇವಿಸಿದ ಕಾರಣ 25 ಗ್ರಾಮಸ್ಥರು ಸೇರಿ 114 ಮಂದಿ ಕಾಲರಾ ಕಾಯಿಲೆಯಿಂದ ಬಳಲುತ್ತಿದ್ದಾರೆ.


ವಾಂತಿ–ಭೇದಿಯಿಂದ ಜನ ತತ್ತರಿಸಿ ಹೋಗಿದ್ದು, ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ವಿರುದ್ಧ ಜನಾಕ್ರೋಶ ವ್ಯಕ್ತವಾಗಿದೆ.

114 ರೋಗಿಗಳಲ್ಲಿ ಐವರ ಸ್ಥಿತಿ ಗಂಭೀರವಾದ ಕಾರಣ ಅವರನ್ನು ಮೈಸೂರು ಆಸ್ಪತ್ರೆಗೆ ರವಾನಿಸಲಾಗಿದೆ. ಉಳಿದವರಿಗೆ ತಗಡೂರು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಇದರ ಮಧ್ಯೆಯೇ, ಕಾಲರಾ ಹರಡಲು ಅಧಿಕಾರಿಗಳ ನಿರ್ಲಕ್ಷ್ಯವೇ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ರಾಮದಲ್ಲಿ 12 ಕೈ ಪಂಪ್‌ಗಳಿದ್ದು, ನಾಲ್ಕು ಕೈಪಂಪ್‌ಗಳ ನೀರು ಕುಡಿಯಲು ಯೋಗ್ಯವಿಲ್ಲ. ಗ್ರಾಮ ಪಂಚಾಯಿತಿ ಅಧಿಕಾರಿಗಳು ಎಚ್ಚೆತ್ತುಕೊಂಡು, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಿಲ್ಲ. ಹಾಗಾಗಿ, ಕಲುಷಿತ ನೀರು ಸೇವಿಸಿ ನೂರಾರು ಜನ ಅಸ್ವಸ್ಥರಾಗಿದ್ದಾರೆ.

### ಹಂದಿ ನುಗ್ಗಿ ಮೆಕ್ಕೆಜೋಳ ನಾಶ

• ಉದಯವಾಹಿನಿ ಯಳಂದೂರು


ಉದಯವಾಹಿನಿ ಚಿತ್ರ

ತಾಲ್ಲೂಕಿನ ಆಮೆಕೆರೆ ರಸ್ತೆ ಸುತ್ತಮುತ್ತಲ ಕೃಷಿ ಭೂಮಿಗಳಿಗೆ ಪ್ರತಿದಿನ ವನ್ಯ ಜೀವಿಗಳು ಲಗ್ಗೆ ಇಡುತ್ತಿದ್ದು, ಕೃಷಿಕರಿಗೆ ಈ ಭಾಗದಲ್ಲಿ ಬೆಳೆ ಉಳಿಸಿಕೊಳ್ಳುವ ಸವಾಲು ಎದುರಾಗಿದೆ. ತಡರಾತ್ರಿ ಮುಳ್ಳುಹಂದಿ, ಕಾಡುಹಂದಿ ಮತ್ತಿತರ ಪ್ರಾಣಿಗಳು ಮೆಕ್ಕೆಜೋಳದ ತಾಕಿಗೆ ನುಗ್ಗಿ ಬೆಳೆ ನಾಶ ಮಾಡಿವೆ.ಇದರಿಂದ ಲಕ್ಷಾಂತರ ಹಣ ನಷ್ಟಮಾಡಿದೆ ಎಂದು ರೈತರು ದೂರುತ್ತಾರೆ.

ಸಾವಿರಾರು ರೂಪಾಯಿ ಸಾಲ ಮಾಡಿ ಮುಸುಕಿನ ಜೋಳ ಬಿತ್ತನೆ ಮಾಡಿದ್ದೆ. ಗೊಬ್ಬರ, ನೀರು ಹರಿಸಿ ರಾತ್ರಿ ಫಸಲು ಕಾಯುತ್ತಿದ್ದೆ. ಉತ್ತಮ ಇಳುವರಿ ಕೈ ಸೇರುವ ನಿರೀಕ್ಷೆ ಇತ್ತು. ಹಸಿ ಮೇವು ಪಡೆಯಲು ಮುಂಗಡ ನೀಡಿದ್ದರು. ಈ ಹಂತದಲ್ಲಿ ಐವತ್ತಕ್ಕೂ ಹೆಚ್ಚಿನ ಕೋರೆ ಹಂದಿ ಮತ್ತಿತರ ಪ್ರಾಣಿಗಳು ಬೆಳೆಯೊಳಗೆ ನುಗ್ಗಿ ಹಾಳು ಮಾಡಿದ್ದು, ಆರ್ಥಿಕ ನಷ್ಟ ಉಂಟಾಗಿದೆ. ಅರಣ್ಯ ಇಲಾಖೆ ಫಸಲು ನಷ್ಟ ಭರಿಸಿಕೊಡಬೇಕು' ಎಂದು ಬೆಳೆಗಾರ ಪ್ರದೀಪ್ ನಾಯಕ್ ಅಳಲು ತೋಡಿಕೊಂಡರು. ಕಾಡಂಚಿನ ಪ್ರದೇಶದಲ್ಲಿ ಗಸ್ತು ತಿರುಗುವುದು ನಿಂತಿದೆ. ರೈತರೆ ಅಟ್ಟಣೆ ಕಟ್ಟಿಕೊಂಡು ಬೆಳೆ ಕಾಯಬೇಕಿದೆ. ಅರಣ್ಯ ಇಲಾಖೆ ಬೆಳೆಗಾರರಿಗೆ ಪಟಾಕಿ ವಿತರಿಸುತ್ತಿಲ್ಲ. ಸೋಲಾರ್ ಬೇಲಿಯೂ ಪರಿಣಾಮಕಾರಿ ಆಗುತ್ತಿಲ್ಲ. ಹಾಗಾಗಿ, ಸೋಲಾರ್ ತಂತಿ ಪರದೆ ಬೇಲಿ ಬದಲಾಗಿ, ಚೈನ್ ಲಿಂಕ್ ತಂತಿ ಪರದೆ ಬೇಲಿ ವ್ಯವಸ್ಥೆ ಮಾಡಿಕೊಡಬೇಕು' ಎಂದು ಮಲಾರಪಾಳ್ಯ ಗ್ರಾಮದ ಕೃಷಿಕ ರಂಗಸ್ವಾಮಿ ಒತ್ತಾಯಿಸಿದರು.

### ರಾಮನಗರ ಸೇರಿ ವಿವಿಧೆಡೆ ಸಾಧಾರಣ ಮಳೆ

• ಉದಯವಾಹಿನಿ ರಾಮನಗರ

ತಾಲ್ಲೂಕಿನಲ್ಲಿ ಶನಿವಾರ ಮಧ್ಯಾಹ್ನ ರಾಮನಗರ ಸೇರಿದಂತೆ ವಿವಿಧೆಡೆ ಸಾಧಾರಣ ಮಳೆ ಸುರಿಯಿತು. ಬಿಸಿಲ ಬೇಗೆಯ ಜೊತೆಗೆ ಆಗಾಗ ಮೋಡ ಕವಿದ ವಾತಾವರಣವು ಕಡೆಗೂ ಮಳೆ ತಂದಿತು. ಭೂಮಿಗೆ ತಂಪೆರೆದ ಮಳೆರಾಯ, ರೈತರ ಮೊಗದಲ್ಲಿ ಸಂತಸ ಮೂಡಿಸಿದ. ಬೆಳಿಗ್ಗೆ ಕೆಲ ಹೊತ್ತು ಇದ್ದ ಮೋಡ ಕವಿದ ವಾತಾವರಣವು ಮಳೆ ನಿರೀಕ್ಷೆಯನ್ನು ಹುಟ್ಟಿಸಿತ್ತು.

ಕಡೆಗೂ ಮಧ್ಯಾಹ್ನ 3ರ ಸುಮಾರಿಗೆ ಶುರುವಾದ ಮಳೆಯು ಸುಮಾರು 30 ನಿಮಿಷ ಸಾಧಾರಣವಾಗಿ ಸುರಿದು ನಿಂತು ಹೋಯಿತು. ಕರಿಮೋಡ ಕಣ್ಮರೆಯಾಗಿ ಸೂರ್ಯನ ಕಿರಣಗಳು ಮಳೆ ಮೋಡವನ್ನು ಮರೆಗೆ ಸರಿಸಿದವು. ಮಳೆಯಿಂದಾಗಿ ಪಾದಚಾರಿಗಳು ಹಾಗೂ ದ್ವಿಚಕ್ರ ವಾಹನ ಸವಾರರು ತೊಂದರೆ ಅನುಭವಿಸಿದರು. ಕೆಲವರು ರಸ್ತೆ ಬದಿಯ ಕಟ್ಟಡಗಳ ಬಳಿ ನಿಂತು ಆಶ್ರಯ ಪಡೆದರೆ, ಉಳಿದವರು ನೆನೆದುಕೊಂಡೇ ಮಳೆಯನ್ನು ಆನಂದಿಸಿಕೊಂಡು ನಡೆದುಕೊಂಡು ಹೋದರು.

ಮಳೆ ಇಲ್ಲದೆ ಮೂಲೆ ಸೇರಿದ್ದ ಛತ್ರಿಗಳ ಸಹ ಅಲ್ಲಲ್ಲಿ ಕಣ್ಣಿಗೆ ಕಂಡವು. ಕೆಲ ದಿನಗಳಿಂದ ಸುರಿಯುತ್ತಿರುವ ಮಳೆಯಿಂದ ಮುಂಗಾರು ಪೂರ್ವ ಬಿತ್ತನೆಗೆ ಸ್ವಲ್ಪ ಅನುಕೂಲವಾಗಲಿದೆ. ನಿತ್ಯ ಕನಿಷ್ಠ ಒಂದು ತಾಸು ಸುರಿದರೆ ನೆಲ ಚನ್ನಾಗಿ ಹದಗೊಳ್ಳಲಿದ್ದು, ಉಳುಮೆ ಮತ್ತು ಬಿತ್ತನೆ ಕಾರ್ಯಗಳಿಗೆ ಪುಷ್ಟಿ ಸಿಗಲಿದೆ. ಕಳೆದ ವರ್ಷ ಮಳೆ ಇಲ್ಲದೆ ಭೀಕರ ಬರ ಎದುರಿಸಿದ ಜಿಲ್ಲೆಗೆ ಈ ಸಲವಾದರೂ ಮಳೆರಾಯ ಕರುಣೆ ತೋರಲಿ' ಎಂದು ಹಳ್ಳಿಮಾಳದ ರೈತ ನಿಂಗೇಗೌಡ ಹೇಳಿದರು.

### ಬಿಸಿಲಿಗೆ ಸಿಲುಕಿ ಕೆಂಪಾಗಿದ್ದ ಚಾಮುಂಡಿ ಬೆಟ್ಟಕ್ಕೀಗ ಬಂದಿದೆ ಹಸಿರು ಕಳೆ

• ಉದಯವಾಹಿನಿ ಮೈಸೂರು

ಬೇಸಿಗೆಯ ಬಿಸಿಲಿಗೆ ಸಿಲುಕಿ ಕೆಂಪಾಗಿದ್ದ ಚಾಮುಂಡಿ ಬೆಟ್ಟಕ್ಕೀಗ ವರುಣನ ಕೃಪೆಯಿಂದ ಹಸಿರು ಕಳೆ ಬಂದಿದೆ. ಜನವರಿಯಿಂದ ಏಪ್ರಿಲ್ ತನಕವೂ ಮಳೆ ಸುರಿಯದ ಕಾರಣದಿಂದ ಗಿಡಮರಗಳು ಬಿಸಿಲಿನ ತಾಪಕ್ಕೆ ಬೋರಲಾಗಿದ್ದವು. ಆದರೀಗ ಕಳೆದ ಕೆಲವು ದಿನಗಳಿಂದ ಪ್ರತಿದಿನವೂ ಮಳೆ ಸುರಿಯುತ್ತಿರುವುದರಿಂದ ಇಡೀ ಬೆಟ್ಟ ಹಸಿರಿಗೆ ಮರಳಿದ್ದು ಸುಂದರ ಹಸಿರಲೋಕ ಸೃಷ್ಟಿಯಾಗಿದ್ದು, ನೋಡಲು ಖುಷಿ ನೀಡುತ್ತಿದೆ.

ಇದೀಗ ಮಳೆಮೋಡದ ಜತೆಗೆ ಬೆಳಿಗ್ಗೆ ಮಂಜು ಆವರಿಸಿಕೊಳ್ಳುತ್ತಿರುವುದರಿಂದ ಮುಂಜಾನೆಯ ಸುಂದರ ಕ್ಷಣಗಳು ಮೈಮನಕ್ಕೆ ಮುದನೀಡುತ್ತಿದೆ. ಈಗ ಚಾಮುಂಡಿಬೆಟ್ಟ ಹಸಿರು ಹಚ್ಚಡದೊಂದಿಗೆ ಕಂಗೊಳಿಸುತ್ತಿದ್ದು, ನಿಸರ್ಗ ಪ್ರಿಯರನ್ನು ತನ್ನಡೆಗೆ ಸೆಳೆಯುತ್ತಿದೆ. ಚುಮುಚುಮು ಬೆಳಕಿನಲ್ಲಿ ತಣ್ಣಗೆ ಬೀಸುವ ತಂಗಾಳಿಯಲಿ ಮುತ್ತಿಕ್ಕುವ ಮಂಜಿ ಹೆಜ್ಜೆಯಿಡುತ್ತಾ ಖುಷಿಪಡುವುದು ಎಲ್ಲಿಲ್ಲದ ಮಜಾ.. ಅದರಲ್ಲೂ ಚಿಲಿಪಿಲಿ ಗುಟ್ಟುವ ಹಕ್ಕಿಗಳು. ಕಣ್ಣು ಹಾಯಿಸಿದುದ್ದಕ್ಕೂ ಹಸಿರ ನೋಟ.. ಹೊಸದೊಂದು ಅನುಭವ ನೀಡುತ್ತಿದೆ.

ಕಾಡಿನ ನಡುವೆ ನಿರ್ಮಿಸಿದ ಮೆಟ್ಟಿಲಲ್ಲಿ ಸಾಗುತ್ತಾ ಅಲ್ಲಲ್ಲಿ ಇರುವ ನಿಸರ್ಗ ನಿರ್ಮಿತ ವೀಕ್ಷಣಾ ತಾಣ(ವ್ಯೂಪಾಯಿಂಟ್)ಗಳಿಂದ ನಿಂತು ಒಮ್ಮೆ ಕಣ್ಣು ಹಾಯಿಸಿದರೆ ಕಾಣಸಿಗುವ ಮೈಸೂರು ನಗರದ ನೋಟ ಮುದನೀಡುತ್ತದೆ. ಜತೆಗೆ ನಿಸರ್ಗದ ನಡುವೆ ಪ್ರಶಾಂತ ವಾತಾವರಣದಲ್ಲಿ ಒಂದಷ್ಟು ಹೊತ್ತು ಕಳೆದು ಹೋದರೆ ನಿತ್ಯದ ಜಂಜಾಟಗಳ ನಡುವೆಯೂ ಮನಸ್ಸು ಹಗುರವಾಗುತ್ತದೆ.


ಉದಯವಾಹಿನಿ ಚಿತ್ರ

# ರಿಮ್ಸ್‌ನಲ್ಲಿ 'ಬಿ' ಬ್ಲಾಕ್‌ಗೆ ಚಾಲನೆ: ಸೌಲಭ್ಯ ವಿಸ್ತರಣೆ

## ಹೊರ ರೋಗಿಗಳ ಸಂಖ್ಯೆ ಗಣನೀಯವಾಗಿ ಹೆಚ್ಚಳವಾಗಿರುವ ಕಾರಣ ರಿಮ್ಸ್ ಆವರಣದ ಪಕ್ಕದಲ್ಲಿ ಕಟ್ಟಡ 'ಬಿ' ಬ್ಲಾಕ್ ನಿರ್ಮಿಸಿ ಚಿಕಿತ್ಸೆ

• **ಉದಯವಾಹಿನಿ, ರಾಯಚೂರು**

ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ರಿಮ್ಸ್)ಯ ಆಸ್ಪತ್ರೆಗೆ ದಾಖಲಾಗುವ ಒಳ ರೋಗಿಗಳ ಹಾಗೂ ಚಿಕಿತ್ಸೆಗೆ ಬರುವ ಹೊರ ರೋಗಿಗಳ ಸಂಖ್ಯೆಯಲ್ಲಿ ಗಣನೀಯವಾಗಿ ಹೆಚ್ಚಳವಾಗಿರುವ ಕಾರಣ ರಿಮ್ಸ್ ಆವರಣದ ಪಕ್ಕದಲ್ಲಿ ಮತ್ತೊಂದು ಕಟ್ಟಡ 'ಬಿ' ಬ್ಲಾಕ್ ನಿರ್ಮಿಸಿ ಚಿಕಿತ್ಸೆ ನೀಡಲಾಗುತ್ತಿದೆ.


ಉದಯವಾಹಿನಿ ಚಿತ್ರ

**ನೂತನ ಕಟ್ಟಡದಲ್ಲಿ ರೋಗಿಗಳಿಗೆ ಚಿಕಿತ್ಸೆ**

ಕಳೆದ ವಿಧಾನಸಭಾ ಚುನಾವಣೆಗೂ ಮುಂಚೆ ಮಾರ್ಚ್ 24ರಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಗಬ್ಬೂರು ಹೋಬಳಿಯ ಸಿರವಾರ ಕ್ರಾಸ್ ಬಳಿ 4,100 ಕೋಟಿ ವೆಚ್ಚದ ವಿವಿಧ ಕಾಮಗಾರಿಗಳಿಗೆ ವರ್ಚ್ಯುವಲ್ ಮೂಲಕ ಶಂಕು ಸ್ಥಾಪನೆ ನೆರವೇರಿಸಿದ್ದರು. ಇದೇ ವೇಳೆ ರಿಮ್ಸ್‌ನ 'ಬಿ ಬ್ಲಾಕ್' ಅನ್ನೂ ಉದ್ಘಾಟನೆ ಮಾಡಿದ್ದರು. ಆದರೆ ಇಲ್ಲಿ ಸಿ.ಸಿ ಟಿವಿ ಕ್ಯಾಮೆರಾ ಅಳವಡಿಕೆ ಹಾಗೂ ಸಣ್ಣಪುಟ್ಟ ಕಾರ್ಯ ಬಾಕಿ ಇದ್ದ ಕಾರಣ ಕೆಲಸ ಆರಂಭಿಸಿ ರಲಿಲ್ಲ. ಈಗ ಎಲ್ಲಾ ಕಾಮಗಾರಿ ಮುಗಿದಿರುವುದರಿಂದ ರಿಮ್ಸ್ ಆಡಳಿತ ಮಂಡಳಿ ನೂತನ ಕಟ್ಟಡದಲ್ಲಿ ರೋಗಿಗಳಿಗೆ ಚಿಕಿತ್ಸೆ ನೀಡಲಾರಂಭಿಸಿದೆ.

**'ಬಿ' ಬ್ಲಾಕ್ ಏಕೆ:** ರಿಮ್ಸ್ ಆರಂಭವಾದಾಗ ಅಂದರೆ 2014ರಲ್ಲಿ ಆಸ್ಪತ್ರೆಯಲ್ಲಿ ಮೊದಲು ದಿನಕ್ಕೆ ಸರಾಸರಿ 700 ರೋಗಿಗಳ ನೋಂದಣಿ ಆಗುತ್ತಿತ್ತು. ಪ್ರಸ್ತುತ 1,000 ಜನರು ನೋಂದಣಿ ಮಾಡಿಕೊಳ್ಳುತ್ತಿದ್ದಾರೆ.

> **ಸ್ಟಾಫ್ ನರ್ಸ್ ತಂತ್ರಜ್ಞರ ನೇಮಕ ನೂತನ ಕಟ್ಟಡದಲ್ಲಿ ವೈದ್ಯರ ಕೊರತೆಯಿಲ್ಲ. 56 ಸ್ಟಾಫ್ ನರ್ಸ್ ಹಾಗೂ 40 ತಂತ್ರಜ್ಞರ ಅವಶ್ಯಕತೆ ಇದೆ. ನೇಮಕ ಮಾಡಿಕೊಳ್ಳಲು ಸರ್ಕಾರ ಅವಕಾಶ ನೀಡಿದೆ. ಆದರೆ ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ ಜೂನ್ 4ರ ನಂತರ ನೇಮಕಾತಿ ಅಧಿಸೂಚನೆ ಪ್ರಕಟಿಸಲಾಗುವುದು. ಒಂದು ವಾರದೊಳಗೆ ರಕ್ತ ಪ್ರಯೋಗಾಲಯ ಎಕ್ಸ್ ರೇ ವಿಭಾಗದ ಅನುಕೂಲ ಮಾಡಿ ಕೊಡಲಾಗುವುದು**
>
> -ಡಾ.ರಮೇಶ ಬಿ

ಆರಂಭದಲ್ಲಿ ಕೇವಲ 520 ಹಾಸಿಗೆಗಳ ವ್ಯವಸ್ಥೆ ಇತ್ತು. ಆನಂತರ ಅದನ್ನು 650ಕ್ಕೆ ಹೆಚ್ಚಿಸಲಾಯಿತು.

**ನೆಲ ಮಹಡಿ ಹಾಗೂ ಮೊದಲ ಮಹಡಿ ಹೊಂದಿರುವ ನೂತನ ಕಟ್ಟಡದಲ್ಲಿ ಆಮ್ಲಜನಕ ಸೌಲಭ್ಯ ಹೊಂದಿದ 120 ಹಾಸಿಗೆಗಳ ವ್ಯವಸ್ಥೆ ಐಸಿಯು ಪುರುಷ ಹಾಗೂ ಮಹಿಳೆಯರ ಪ್ರತ್ಯೇಕ ಮನೋರೋಗಿಗಳ ಕೊಠಡಿ ಚರ್ಮ ರೋಗ ವೈದ್ಯಕೀಯ ವಿಭಾಗ (ವೈದ್ಯಶಾಸ್ತ್ರ) ಎಚ್ಐವಿ ಟಿ.ಬಿ ರೋಗಿಗಳ ನೋಂದಣಿ ಆಪ್ತ ಸಮಾಲೋಚಕರ ವಿಭಾಗ ಔಷಧಾಲಯ ನಾಲ್ಕು ದಿಕ್ಕುಗಳಿಗೆ ಬಾಗಿಲು ಶೌಚಾಲಯ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಅಂಗವಿಕಲರಿಗೆ ರ್‍ಯಾಂಪ್ ನಿರ್ಮಾಣ ಲಿಫ್ಟ್ ವ್ಯವಸ್ಥೆ ಸೇರಿ ಇತರೆ ಆಧುನಿಕ ಸೌಲಭ್ಯ ಒದಗಿಸಲಾಗಿದೆ.**

ಈಗ ಇದೇ ಸ್ಥಳದಲ್ಲಿ ಹೆಚ್ಚುವರಿಯಾಗಿ ಒಟ್ಟು 800 ಹಾಸಿಗೆ ವ್ಯವಸ್ಥೆ ಮಾಡಲಾಗಿದೆ.


ನೆರೆಯ ತೆಲಂಗಾಣ, ಆಂಧ್ರಪ್ರದೇಶ ರಾಜ್ಯಗಳಿಂದ ಬರುವ ರೋಗಿಗಳ ಸಂಖ್ಯೆ ಹೆಚ್ಚಾಗುತ್ತಿರುವ ಕಾರಣ 1000 ಹಾಸಿಗೆ ವ್ಯವಸ್ಥೆ ಮಾಡುವ ಅನಿವಾರ್ಯತೆ ಎದುರಾಗಿದೆ. ಹೀಗಾಗಿ 'ಬಿ' ಬ್ಲಾಕ್ ಲೋಕಾರ್ಪಣೆ ಮಾಡಲಾಗಿದೆ ಎನ್ನುತ್ತಾರೆ ಆಸ್ಪತ್ರೆಯ ಅಧಿಕಾರಿಗಳು.

ರಿಮ್ಸ್ ಆಸ್ಪತ್ರೆಯ ಪಕ್ಕದಲ್ಲಿಯೇ ನಿರ್ಮಿಸಿದ ಬಿ ಬ್ಲಾಕ್ ಥೇಟ್ ಹಳೆ ಕಟ್ಟಡದ ವಿನ್ಯಾಸ ಹೊಂದಿದೆ. ಆದರೆ ಒಳಗೆ ಕೆಲವು ಬದಲಾವಣೆ ಮಾಡಲಾಗಿದೆ. ರೋಗಿಗಳಿಗೆ ಎಲ್ಲಾ ರೀತಿಯ ಸೌಲಭ್ಯ ದೊರಕುವಂತೆ ಮಾಡಲಾಗಿದೆ' ಎಂದು ರಿಮ್ಸ್ ನಿರ್ದೇಶಕ ಡಾ.ರಮೇಶ ಬಿ ತಿಳಿಸುತ್ತಾರೆ. ನೂತನ ಕಟ್ಟಡದಲ್ಲಿ ಯಾವ ವಿಭಾಗ ಎಲ್ಲಿದೆ ಎಂಬುದರ ಬಗ್ಗೆ ಮಾಹಿತಿ ಫಲಕ ಹಾಕಬೇಕು. ಆಸ್ಪತ್ರೆಯ ಸುತ್ತಮುತ್ತ ಸಸಿ ಮರಗಳನ್ನು ಬೆಳೆಸಿ ತಂಪಿನ ವಾತಾವರಣ ನಿರ್ಮಿಸಬೇಕು. ಒಳ ರೋಗಿಗಳ ಸಂಬಂಧಿಕರಿಗೆ ರಾತ್ರಿ ವೇಳೆ ಉಳಿದುಕೊಳ್ಳಲು ಕೊಠಡಿಗಳ ವ್ಯವಸ್ಥೆ ಮಾಡಬೇಕು' ಎಂದು ಒಳರೋಗಿಯ ಸಂಬಂಧಿ ವೀರೇಶ ಮನವಿ ಮಾಡಿದರು.

---

# ಕಲ್ಮಂಗಿ ಜೀವಂತ ವ್ಯಕ್ತಿ ಮರಣ ಪ್ರಮಾಣ ಪತ್ರ ಸೃಷ್ಟಿಸಿ ಆಸ್ತಿ ಕಬಳಿಸುವ ಹುನ್ನಾರ

• **ಉದಯವಾಹಿನಿ, ಸಿಂಧನೂರು**



ತಾಲ್ಲೂಕಿನ ತುರ್ವಿಹಾಳ ಹೋಬಳಿಯ ಕಲ್ಮಂಗಿ ಸೀಮಾ ಸರ್ವೆ ನಂ 318/1 ಕ್ಷೇತ್ರ 2 ಎಕರೆ 6 ಗುಂಟೆ ಜಮೀನು ಒಟ್ಟು ಕ್ಷೇತ್ರ 4 ಎಕರೆ 12 ಗುಂಟೆ ಜಮೀನು ವಾರಸುದಾರನಾದ ಪಾಮಯ್ಯ ತಂದೆ ಹನುಮಂತ ನಂದಿಹಳ್ಳಿ ಜಾತಿ ನಾಯಕ್ ಸಾಕೀನ ಕಲಮಂಗಿ ತಾ.ಸಿಂಧನೂರು ಇವರು ಪಿತ್ರಾಜಿತ ಆಸ್ತಿಯಾಗಿದ್ದು ಆಸ್ತಿಯ ಜಮೀನನ್ನು ನೇರವಾರಸುದಾರನಾದ ಮಾಲೀಕ ಪಾಮಯ್ಯ ತಂದೆ ಹನುಮಂತಪ್ಪ ಅವರು ತಮ್ಮ ಜಮೀನು ಮೇಲೆ ಬ್ಯಾಂಕ್ ನಲ್ಲಿ ವ್ಯವಹಾರ ಮಾಡಿದ್ದು. ಸರ್ಕಾರ ಸೌಲಭ್ಯ ಪಡೆದಿದ್ದಾರೆ. ಪಾಮಯ್ಯ ಅವರದ್ದು ಆಸ್ತಿ ಪಿತ್ರಾರ್ಜಿತ ಆಸ್ತಿಯಾಗಿದ್ದು.

ಆದರೆ ಈ ಮೇಲೆ ತಿಳಿಸಿದ ಜಮೀನು ಮಾಲಿಕನಾದ ಪಾಮಯ್ಯ ನಂದಳ್ಳಿ ತಂದೆ ಹನುಮಂತ ಜೀವಂತವಿದ್ದರೂ ಸಹ ಕಲ್ಮಂಗಿ ಗ್ರಾಮ ಲೆಕ್ಕಾಧಿ ಕಾಯಾದ ಸುಚಿತಾ ಇವರು ಗಂಗಾವತಿ ತಾಲ್ಲೂಕಿನ ಒಡ್ಡರಟ್ಟಿಯಲ್ಲಿರುವ ಪಾಮಯ್ಯ ಎಂಬ ಹೆಸರಿನ ವ್ಯಕ್ತಿಯ ಮರಣ ಪ್ರಮಾಣ ಪತ್ರ ತಂದು ಕೊಟ್ಟಿ ಅರ್ಜಿದಾರರನ್ನು ಸೃಷ್ಟಿಸಿ ನಿಜವಾದ ಪಾಮಯ್ಯ ನಂದಳ್ಳಿ ಇವರ ಆಸ್ತಿಯನ್ನು ಕಬಳಿಸಲು ಸುಳ್ಳು ವಂಶಾವಳಿಯನ್ನು ಸೃಷ್ಟಿಸಿ ಸರ್ವೆ ನಂ 318/1 ಕ್ಷೇತ್ರ 2 ಎಕರೆ 6 ಗುಂಟೆ ಮತ್ತು 318/2 ಕ್ಷೇತ್ರ 2 ಎಕರೆ 6 ಗುಂಟೆ ಜಮೀನಿಗೆ ಅನಧಿಕೃತ ಸುಳ್ಳು ಅರ್ಜಿದಾರ ಹನುಮನಗೌಡ ತಂದೆ ರಾಮನಗೌಡ ಈತನಿಗಿ ಸರ್ವೆ ನಂ 318/1 ಈ ಜಮೀನಿಗೆ ಸುಳ್ಳು ಅರ್ಜಿದಾರ ಮತ್ತು ಸರ್ವೆ ನಂ 318/2 ಈ ಜಮೀನಿಗೆ ಅನಧಿಕೃತ ಸುಳ್ಳು ಅರ್ಜಿದಾರ ಶ್ರೀಮತಿ ದುರುಗಮ್ಮ ಗಂಡ ರಾಜುಗೌಡ ಇವರು ಕಲ್ಮಂಗಿ ಯಾವುದೇ ಸಂಬಂಧವಿಲ್ಲ.

> **ತಹಶೀಲ್ದಾರರ ಆದೇಶದ ಮೇಲೆ ಹಕ್ಕು ಬದಲಾವಣೆ**
>
> **ಇವರನ್ನು ಗ್ರಾಮದ ನಿವಾಸಿಗಳು ಎಂದು ಗ್ರಾಮ ಲೆಕ್ಕಾಧಿಕಾರಿ ಸುಚಿತಾ ಇವರು ಸುಳ್ಳು ಅರ್ಜಿದಾರರನ್ನು ಸೃಷ್ಟಿಸಿ ಆಸ್ತಿಗೆ ಹಕ್ಕುದಾರರೆಂದು ಕೊಟ್ಟ (ಸುಳ್ಳು) ಪೋತಿ ವಿರಾಸ್ತದ ಆಧಾರದ ಮೇಲೆ ವರ್ಗಾವಣೆ ಮಾಡಲು ನಿಜವಾದ ಮಾಲಿಕನ ಆಸ್ತಿಯನ್ನು ಕಬಳಿಸಲು ಈ ಸುಳ್ಳು ಅರ್ಜಿದಾರರಿಗೆ ಸುಚಿತಾ ಇವರು ಸಹಕರಿಸಿದ್ದು, ಯಾವುದೇ ಒಂ ದು ಆಸ್ತಿ ವರ್ಗಾವಣೆ ಮಾಡಬೇಕಾದರೆ ಸ್ಥಳೀಯ ಗ್ರಾಮ ಸಹಾಯಕರ ಗಮನಕ್ಕೆ ತಂದು ಅವರ ಹೇಳಿಕೆಯ ಮೇರೆಗೆ ಮತ್ತು ಸ್ಥಾನಿಕ ಪಂಚನಾಮೆ ಮಾಡಿ ಆಸ್ತಿಯನ್ನು ವರ್ಗಾವಣೆ ಮಾಡಲು ಸೂಕ್ತವೆನಿಸಿದಾಗ ತಹಶೀಲ್ದಾರರ ಆದೇಶದ ಮೇಲೆ ಹಕ್ಕು ಬದಲಾವಣೆ ಅವಕಾಶವಿದೆ.**

ಆದರೆ ಗ್ರಾಮ ಲೆಕ್ಕಾಧಿಕಾರಿ ಶ್ರೀಮತಿ ಸುಚಿತಾ ಇವರು ಇದು ಯಾವುದನ್ನು ಗಣನೆಗೆ ತೆಗೆದುಕೊಳ್ಳದೇ ಸರಕಾರದ ಕೆಲಸ ದೇವರ ಕೆಲಸ ಎಂಬುದನ್ನು ಮರೆತು ಸರಕಾರದ ನೀತಿ, ನಿಯಮ, ನಿರ್ದೇಶನ ಉಲ್ಲಂಘನೆ ಮಾಡಿ ಸರಕಾರಿ ಕೆಲಸವನ್ನು ದುರುಪಯೋಗಪಡಿಸಿಕೊಂಡ ಕಾರಣ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸಬೇಕೆಂದು ತಾಲ್ಲೂಕು ಸಮಿತಿಯ ಒತ್ತಾಯ ಮಾಡಲಾಗಿದೆ.

ರಮೇಶ್ ಪಾಟೀಲ್ ಬೇರಿಗೆ. ಬಿಎನ್ ಯರದಿಹಾಳ ಚಿಟ್ಟೆ ಬಾಬು ಇನ್ನಿತರರಿದ್ದರು.

---

# ಆರೋಪಿಗಳ ಎನ್‌ಕೌಂಟರ್‌ಗೆ ಆಗ್ರಹ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಹುಬ್ಬಳ್ಳಿ**

ಅಂಜಲಿ ಅಂಬಿಗೇರ, ನೇಹಾ ಹಿರೇಮಠ ಕೊಲೆ ಖಂಡಿಸಿ ಹಾವೇರಿ ಜಿಲ್ಲೆಯ ನರಸಿಪುರ ನಿಜಶರಣ ಅಂಬಿಗರ ಚೌಡಯ್ಯ ಗುರು ಪೀಠದ ಶಾಂತಭೀಷ್ಮ ಚೌಡಯ್ಯ ಸ್ವಾಮಿಜಿ ನೇತೃತ್ವದಲ್ಲಿ ವಿವಿಧ ಸಮುದಾಯದವರು ಇಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.ಚನ್ನಮ್ಮ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ವಾಹನ ಸಂಚಾರ ತಡೆದರು.

ಸ್ಥಳಕ್ಕೆ ಬಂದ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರಿಗೆ ಮನವಿಪತ್ರ ಸಲ್ಲಿಸಿದ ಪ್ರತಿಭಟನಾಕಾರರು, ಆರೋಪಿಗೆ ಗಲ್ಲು ಶಿಕ್ಷೆ ವಿಧಿಸಬೇಕು. ಕುಟುಂಬಕ್ಕೆ ಗರಿಷ್ಠ ಮೊತ್ತದ ಪರಿಹಾರ ಕೊಡುವುದರ ಜೊತೆಗೆ ಒಬ್ಬರಿಗೆ ಸರ್ಕಾರಿ ನೌಕರಿ ನೀಡಬೇಕು. ಮನೆ ಮಂಜೂರು ಮಾಡಿ, ಕುಟುಂಬಕ್ಕೆ ರಕ್ಷಣೆ ಒದಗಿಸಬೇಕು' ಎಂದು ಒತ್ತಾಯಿಸಿದರು. ಧಾರವಾಡ ಜಿಲ್ಲೆಯ ಮನಸೂರ ರೇವಣಸಿದ್ದೇಶ್ವರ ಮಠದ ಬಸವರಾಜ ದೇವರು ಅವರು, 'ಆರೋಪಿಗಳಿಗೆ ಉತ್ತರ ಪ್ರದೇಶದ ಮಾದರಿಯಲ್ಲಿ ಅವರನ್ನು ಎನ್‌ಕೌಂಟರ್ ಮಾಡಬೇಕು. ಯಾವುದೇ ಕಾರಣಕ್ಕೂ ರಕ್ಷಣೆ ಮಾಡಬಾರದು' ಎಂದರು.

---

# ಬಿಜೆಪಿ ನಾಯಕನ ಬಂಧನ, ಪೊಲೀಸ್ ಠಾಣೆಯಲ್ಲೇ ಧರಣಿ ನಡೆಸಲೆತ್ನಿಸಿದ ಶಾಸಕ ಹರೀಶ್ ಪೂಂಜಾ

• **ಉದಯವಾಹಿನಿ, ಮಂಗಳೂರು**

ಅಕ್ರಮ ಕಲ್ಲು ಕ್ವಾರಿಗೆ ಸಂಬಂಧಪಟ್ಟಂತೆ ಬಿಜೆಪಿ ನಾಯಕನನ್ನು ಬಂಧಿಸಿದ ಪೊಲೀಸರ ವಿರುದ್ಧ ಶಾಸಕ ಹರೀಶ್ ಪೂಂಜಾ ವಾಗ್ದಾಳಿ ನಡೆಸಿದ್ದು, ನಡುರಾತ್ರಿಯಲ್ಲಿ ಪೊಲೀಸ್ ಠಾಣೆಯಲ್ಲೇ ಧರಣಿ ನಡೆಸುವ ಪ್ರಯತ್ನ ಮಾಡಿದ್ದಾರೆ.ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಮೇಲಂತಬೆಟ್ಟು ಗ್ರಾಮದ ಮೂಡಲ ನಿವಾಸಿ ಸೂರಪ್ಪ ಪೂಜಾರಿ ಎಂಬುವರ ಜಾಗದಲ್ಲಿ ಕಲ್ಲು ಕ್ವಾರಿ ನಡೆಯುತ್ತಿದ್ದು, ತಹಶೀಲ್ದಾರ್ ದಾಳಿ ನಡೆಸಿ ಪರಿಶೀಲನೆ ನಡೆಸಿದರು.

ಈ ವೇಳೆ ಕ್ವಾರಿಗೆ ಸಂಬಂಧಪಟ್ಟಂತೆ ಸಮರ್ಪಕ ದಾಖಲೆಗಳು ಇರಲಿಲ್ಲ ಎಂದು ಪತ್ತೆಯಾಗಿದೆ. ಜೊತೆಗೆ ಅಕ್ರಮವಾಗಿ ಸ್ಫೋಟಕಗಳನ್ನು ಸಂಗ್ರಹಿಸಿಡಲಾಗಿತ್ತು. ಹಿಟಾಚಿ, ಕಂಪ್ರಸರ್ ಮಿಷನ್ ಸೇರಿದಂತೆ ಇತರ ವಸ್ತುಗಳನ್ನು ಪೊಲೀಸರು ಜಪ್ತಿ ಮಾಡಿದರು.

ಬಿಜೆಪಿ ಮುಖಂಡ ಪ್ರಮೋದ್ ದಿಡುಪೆ ಹಾಗೂ ಬಿಜೆಪಿ ಯುವಮೋರ್ಚಾ ತಾಲ್ಲೂಕು ಅಧ್ಯಕ್ಷ ಶಶಿರಾಜ್ ಶೆಟ್ಟಿ ಕ್ವಾರಿ ನಡೆಸುತ್ತಿದ್ದರು ಎಂದು ತಿಳಿದುಬಂದಿದೆ. ಈ ಹಿನ್ನೆಲೆಯಲ್ಲಿ ಪೊಲೀಸರು ಶಶಿರಾಜ ಶೆಟ್ಟಿಯನ್ನು ಬಂಧಿಸಿದ್ದಾರೆ. ತಕ್ಷಣವೇ ಬಿಜೆಪಿ ಕಾರ್ಯಕರ್ತರು ಠಾಣೆಯ ಎದುರು ಜಮಾಯಿಸಿ ಪ್ರತಿಭಟನೆ ನಡೆಸಿದರು. ಶಾಸಕ ಹರೀಶ್ ಪೂಂಜಾ ಸ್ಥಳಕ್ಕೆ ಆಗಮಿಸಿ ಮಧ್ಯರಾತ್ರಿ ನಮ್ಮ ಕಾರ್ಯಕರ್ತರನ್ನು ಬಂಧಿಸುವ ಅಗತ್ಯವೇನಿತ್ತು ಎಂದು ತರಾಟೆಗೆ ತೆಗೆದುಕೊಂಡರು.


ಉದಯವಾಹಿನಿ ಚಿತ್ರ

ಪೊಲೀಸರು ಕಾಂಗ್ರೆಸ್‌ನ ಏಜೆಂಟರಂತೆ ವರ್ತಿಸುತ್ತಿದ್ದಾರೆ. ನಮ್ಮ ಕಾರ್ಯಕರ್ತರಿಗೆ ಅನ್ಯಾಯವಾಗಲು ನಾನು ಬಿಡುವುದಿಲ್ಲ. ಅವರೊಂದಿಗೆ ನಾನೂ ಪೊಲೀಸ್ ಠಾಣೆಯಲ್ಲಿ ಮಲಗುತ್ತೇನೆ ಎಂದು ಪಟ್ಟು ಹಿಡಿದರು. ಪೊಲೀಸರು ಅವರ ಮನವೊಲಿಸಲು ಹರಸಾಹಸ ಪಡಬೇಕಾಯಿತು. ಬಿಜೆಪಿ ನಾಯಕರು ಬೆಳಗಿನ ಜಾವದವರೆಗೂ ಠಾಣೆಯ ಮುಂದೆ ಪ್ರತಿಭಟನೆ ನಡೆಸಿದರು.

---

# ಸಾಧಾರಣ ಮಳೆ, ಚುರುಕು ಪಡೆದ ಕೃಷಿ ಚಟುವಟಿಕೆ

• **ಉದಯವಾಹಿನಿ, ಕವಿತಾಳ**

ಪಟ್ಟಣ, ಸುತ್ತಲಿನ ಪ್ರದೇಶದಲ್ಲಿ ಕಳೆದ ನಾಲ್ಕು ದಿನಗಳಿಂದ ಆಗಾಗ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಕೃಷಿ ಚಟುವಟಿಕೆಗಳು ಚುರುಕು ಪಡೆದಿವೆ. ಹತ್ತಿ, ತೊಗರಿ ಬಿತ್ತನೆ ಮಾಡಿದ ರೈತರು ಕಳೆ ತೆಗೆಯುವುದು ಮತ್ತು ಮಳೆ ವಿಳಂಬದಿಂದ ಸರಿಯಾಗಿ ನಾಟಿಯಾಗದ ಕಡೆ ಮರು ಬಿತ್ತನೆಯಲ್ಲಿ ತೊಡಗಿದ್ದಾರೆ.

ಕಳೆದ 20 ದಿನಗಳ ಹಿಂದೆ ಬಿತ್ತನೆ ಮಾಡಿದ್ದ ಹತ್ತಿ ಇದೀಗ ಒಂದು ಅಡಿ ಎತ್ತರಕ್ಕೆ ಬೆಳೆದಿದೆ. ಜಿಟಿಜಿಟಿ ಮಳೆ ಸುರಿಯುತ್ತಿರುವ ಕಾರಣ ಕಳೆ ಬೆಳೆಯುತ್ತಿದ್ದು, ರೈತರು ಕಿರು ಕುಂಟೆ ಹೊಡೆದು ಕಳೆ ತೆಗೆಯುತ್ತಿದ್ದ ದೃಶ್ಯ ಕಂಡುಬರುತ್ತಿದೆ. ಮಳೆ ವಿಳಂಬವಾಗಿದ್ದರೂ ಹತ್ತಿ ನಾಟಿಯಾಗಿದೆ. ಇದೀಗ ಮಳೆಯಿಂದ ಜಮೀನು ಹಸಿಯಾಗಿ ಕಸ ಕಾಣಿಸಿಕೊಂಡಿದೆ. ಕಳೆ ತೆಗೆದು ರಸಗೊಬ್ಬರ ಹಾಕಬೇಕಿದೆ' ಎಂದು ಗೊಲ್ದಿನ್ನಿ ಗ್ರಾಮದ ರೈತ ಹನುಮೇಶ ಹೇಳಿದರು. ಹತ್ತು ದಿನಗಳ ಹಿಂದೆ ತೊಗರಿ ಬಿತ್ತನೆ ಮಾಡಲಾಗಿತ್ತು. ಮಳೆ ಬಾರದ ಕಾರಣ ಬಹುತೇಕ ಐದು ಎಕರೆ ಜಮೀನಿನಲ್ಲಿ ತೊಗರಿ ಮೊಳಕೆ ಒಡೆದಿಲ್ಲ. ಈಗ ಭೂಮಿ ಹಸಿಯಾಗಿದ್ದು ಮರು ನಾಟಿ ಮಾಡುತ್ತಿದ್ದೇವೆ ಎಂದರು.

---

# ಹಿಂದೂಗಳನ್ನು ರಕ್ಷಿಸುವ ಪಕ್ಷಗಳನ್ನು ಆಯ್ಕೆ ಮಾಡಿ

• **ಉದಯವಾಹಿನಿ, ಬೆಳಗಾವಿ**

ಕರ್ನಾಟಕ, ಪಶ್ಚಿಮ ಬಂಗಾಳ ಸೇರಿದಂತೆ ದೇಶದ ವಿವಿಧೆಡೆ ಅಧಿಕಾರದಲ್ಲಿರುವ ಬಿಜೆಪಿ ಹೊರತಾದ ಪಕ್ಷಗಳು, ಮುಸ್ಲಿಂ ತುಷ್ಟೀಕರಣ ಮಾಡುತ್ತಿವೆ.



ಹಾಗಾಗಿ ಎಲ್ಲಾ ರಾಜ್ಯಗಳಲ್ಲೂ ಹಿಂದೂಗಳ ರಕ್ಷಣೆ ಮಾಡುವ ಮತ್ತು ಹಿಂದುತ್ವ ಪ್ರತಿಪಾದಿಸುವ ಪಕ್ಷಗಳನ್ನು ಆಯ್ಕೆ ಮಾಡಬೇಕು ಎಂದು ವಿಶ್ವ ಹಿಂದೂ ಪರಿಷತ್ ಅಖಿಲ ಭಾರತೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ದಿಲೀಪ ಪರಾಂಡೆ ಹೇಳಿದರು.

ಇಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ನವರು ಮಾಡುತ್ತಿರುವ ಮುಸ್ಲಿಂ ತುಷ್ಟೀಕರಣದಿಂದ ಹಿಂದೂಗಳಿಗೆ ಅಪಾಯವಿದೆ. ಹಾಗಾಗಿ ಎಲ್ಲಾ ರಾಜ್ಯಗಳಲ್ಲೂ ಹಿಂದೂ ಪರವಾದ ಸರ್ಕಾರಗಳು ಅಧಿಕಾರಕ್ಕೆ ಬರುವಂತೆ ನೋಡಿಕೊಳ್ಳಬೇಕಿದೆ. ಹಿಂದೂಗಳ ಹಿತವೇ ದೇಶದ ಹಿತವಾಗಿದೆ' ಎಂದರು.

ಈಗ ಕರ್ನಾಟಕದಲ್ಲಿ ಲೋಕಸಭೆ ಚುನಾವಣೆ ಮತದಾನ ಮುಗಿದಿದೆ. ಆದರೆ, ಇನ್ನೂ ಹಲವು ರಾಜ್ಯಗಳಲ್ಲಿ ಚುನಾವಣೆ ಮತದಾನ ಪ್ರಕ್ರಿಯೆ ನಡೆಯಬೇಕಿದೆ. ಅಂಥ ಕಡೆಗಳಲ್ಲಿ ಹಿಂದೂ ಪರವಾಗಿರುವವರಿಗೆ ಮತ ಹಾಕಬೇಕು.

ಹಿಂದೂ ವಿರೋಧಿಗಳು ಸಂಸತ್ತಿಗೆ ಹೋಗಬಾರದು' ಎಂದು ತಿಳಿಸಿದರು.

> **ಇಂದು ಕರ್ನಾಟಕದಲ್ಲಿ ಹಿಂದೂ ಮಹಿಳೆಯರ ಮೇಲೆ ಅತ್ಯಾಚಾರ, ಕೊಲೆ ನಡೆಯುತ್ತಿವೆ. ಗೋವುಗಳ ರಕ್ಷಣೆ ಮಾಡುವವರನ್ನು ಜೈಲಿಗೆ ಕಳುಹಿಸಲಾಗುತ್ತಿದೆ. ಸಾಧು-ಸಂತರು ಅಸುರಕ್ಷಿತವಾಗಿದ್ದಾರೆ. ಈ ಬಗ್ಗೆ ಹಿಂದೂ ಸಮುದಾಯದವರು ಯೋಚಿಸಬೇಕು. ಹಿಂದೂ ವಿರೋಧಿಗಳು ಅಧಿಕಾರ ಹಿಡಿದರೆ, ತಮ್ಮ ಪರಿಸ್ಥಿತಿ ಏನಾಗುತ್ತದೆ ಎಂದು ಗಂಭೀರವಾಗಿ ಚಿಂತಿಸಬೇಕು. ಹಿಂದೂ ಹಿತ ಗಮನದಲ್ಲಿಟ್ಟುಕೊಂಡೇ ಮತ ಚಲಾಯಿಸಬೇಕು**
>
> -ದಿಲೀಪ ಪರಾಂಡೆ, ಕಾರ್ಯದರ್ಶಿ

---

# ಕಂಪನಿ ವಿರುದ್ಧ ಕ್ರಮಕ್ಕೆ ಪೂಜಾರ ಒತ್ತಾಯ

• **ಉದಯವಾಹಿನಿ, ರಾಣೆಬೆನ್ನೂರು**

ತಾಲ್ಲೂಕಿನ ಹನುಮನಹಳ್ಳಿ ಹಾಗೂ ತೆರದಹಳ್ಳಿ ಬಳಿಯಿರುವ ಗೋಲ್ಡನ್ ಹ್ಯಾಚರೀಸ್‌ನ ಗ್ರೀನ್ ಎನರ್ಜಿ ಬಯೋ ರಿಫೈನ್‌ರೈಜ್ ಕಂಪನಿಯ ಪೆಟ್ರೋಲಿಯಂ ಉತ್ಪನ್ನಗಳು ಹೊರಸೂಸುವ ರಾಸಾಯನಿಕ ಕಲ್ಮಶಯುಕ್ತ ನೀರು ಸಮೀಪದ ಹಳ್ಳದಿಂದ ಕುಮದ್ವತಿ ನದಿಗೆ ಹರಿದು ಸುತ್ತಮುತ್ತಲಿನ ರೈತರಿಗೆ ತೊಂದರೆಯಾಗುತ್ತಿದೆ.

ಹನುಮನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿದ ಮಾಜಿ ಶಾಸಕ ಅರುಣಕುಮಾರ ಪೂಜಾರ ಅವರು ಸಮಸ್ಯೆ ಪರಿಶೀಲಿಸಿದರು. ನಂತರ ರೈತರ ಜೊತೆಗೆ ಕೆಲಕಾಲ ಚರ್ಚಿಸಿ ರೈತರಿಗೆ ಆಗುವ ತೊಂದರೆಗಳನ್ನು ಆಲಿಸಿದರು. ನಂತರ ಹಾವೇರಿ ಜಿಲ್ಲಾಧಿಕಾರಿ, ಅಪರ ಜಿಲ್ಲಾಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ, ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಿದರು.

ಕಂಪನಿಯ ಕಾಲುವೆ ಮುಖಾಂತರ ಕುಮದ್ವತಿ ನದಿಗೆ ವಿಷಪೂರಿತ ನೀರನ್ನು ಹರಿಸಿದ್ದು, ಅದು ಮುಂದೆ ಕುಮದ್ವತಿ ನದಿ ಮೂಲಕ ತಾಲ್ಲೂಕಿನ ಜೀವನದಿ ತುಂಗಭದ್ರಾ ನದಿಗೆ ಸೇರುತ್ತದೆ. ಮುಂದೆ ರಾಣೆಬೆನ್ನೂರ ಹಾಗೂ ಬ್ಯಾಡಗಿ ಪಟ್ಟಣಗಳಿಗೆ ಕುಡಿಯುವ ನೀರು ಪೂರೈಕೆ ಮಾಡುವ ಜಾಗದಲ್ಲಿ ತಲುಪಲಿದೆ. ಇದರಿಂದ ಪಟ್ಟಣದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಕಂಪನಿಯವರು ಜನರ ಜೀವನ ಜೊತೆಗೆ ಚೆಲ್ಲಾಟವಾಡುತ್ತಿದ್ದಾರೆ ಎಂದು ಈ ಭಾಗದ ರೈತರು ಆರೋಪಿಸಿದ್ದಾರೆ. ಕೂಡಲೇ ಕಂಪನಿ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.


ಉದಯವಾಹಿನಿ ಚಿತ್ರ

---

# ರಥೋತ್ಸವದ ವೇಳೆ ಚಕ್ರದಡಿ ಸಿಲುಕಿ ಇಬ್ಬರು ಭಕ್ತರ ದಾರುಣ ಸಾವು

• **ಉದಯವಾಹಿನಿ, ಗದಗ**

ರಥೋತ್ಸವದ ವೇಳೆ ಚಕ್ರದಡಿ ಸಿಲುಕಿ ಇಬ್ಬರು ಭಕ್ತರು ಸ್ಥಳದಲ್ಲೇ ದಾರುಣವಾಗಿ ಮೃತಪಟ್ಟ ಘಟನೆ ಗದಗ ಜಿಲ್ಲೆಯ ರೋಣ ಪಟ್ಟಣದಲ್ಲಿ ವರದಿಯಾಗಿದೆ. ಗದಗ ಜಿಲ್ಲೆಯ ರೋಣ ಪಟ್ಟಣದಲ್ಲಿ ನಡೆದ ವೀರಭದ್ರೇಶ್ವರ ಜಾತ್ರೆಯ ರಥೋತ್ಸವದ ವೇಳೆ ಈ ಘಟನೆ ನಡೆದಿದೆ.ಮೃತರನ್ನು ರೋಣದ ಕೆವಿಜಿ ಬ್ಯಾಂಕ್‌ನಲ್ಲಿ ಪಿಗ್ಮಿ ಕಲೆಕ್ಟರ್ ಆಗಿದ್ದ ಮಲ್ಲನಗೌಡ ಲಿಂಗನಗೌಡರ (52) ಎಂದು ಗುರ್ತಿಸಲಾಗಿದೆ.

ಚಕ್ರದ ಮುಂದೆ ಬಿದ್ದು ಮುಖ ನಜ್ಜುಗುಜ್ಜಾಗಿದ್ದರಿಂದ ಮತ್ತೊಬ್ಬನ ಗುರುತು ಇನ್ನೂ ಪತ್ತೆಯಾಗಿಲ್ಲ. ಘಟನೆಯ ಬಳಿಕ ರಥೋತ್ಸವ ಸ್ಥಗಿತಗೊಂಡಿದ್ದು, ಜನರನ್ನು ನಿಯಂತ್ರಿಸಲು ಪೊಲೀಸರು ಹರಸಾಹಸ ಪಡಬೇಕಾಯಿತು. ಶನಿವಾರ ಸಂಜೆ ರಥೋತ್ಸವ ಆರಂಭವಾದಾಗ ಭಕ್ತರು ರಥದ ಮೇಲೆ ಒಣಗಿದ ಖರ್ಜೂರ, ಬಾಳೆಹಣ್ಣು ಎಸೆದರು. ರಥದ ಮೇಲೆ ಎಸೆದ ನಂತರ ಇವುಗಳನ್ನು ಪ್ರಸಾದವೆಂದು ಪರಿಗಣಿಸಲಾಗುತ್ತದೆ, ಆದ್ದರಿಂದ


ಉದಯವಾಹಿನಿ ಚಿತ್ರ

ಅವುಗಳನ್ನು ಜನರು ಸಂಗ್ರಹಿಸುತ್ತಿದ್ದರು. ಆದರೆ, ಜನದಟ್ಟಣೆ ಹೆಚ್ಚಾಗಿ ಇದ್ದರಿಂದ ಮೂವರು ರಥದ ಚಕ್ರಕ್ಕೆ ಸಿಲುಕಿದ್ದಾರೆ. ಈ ವೇಳೆ ಓರ್ವ ವ್ಯಕ್ತಿಯನ್ನು ಸ್ಥಳದಲ್ಲಿದ್ದವರು ಎಳೆದು ರಕ್ಷಿಸಿದ್ದಾರೆ. ಆದರೆ, ಇಬ್ಬರು ಚಕ್ರಕ್ಕೆ ಸಿಲುಕಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಮೃತರೊಬ್ಬರ ಬಲಗೈಯಲ್ಲಿ ಕಪ್ಪು ದಾರವಿದ್ದು, ಎಡಗೈಯಲ್ಲಿ ಹಚ್ಚೆ ಹಾಕಿಕೊಂಡಿರುವ ಕೆಲವು ಇಂಗ್ಲಿಷ್ ಅಕ್ಷರಗಳು ಕಂಡು ಬಂದಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಪೊಲೀಸರು ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದು, ಈ ಸಂಬಂಧ ರೋಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

> **ರಥೋತ್ಸವದ ವೇಳೆ ಇಂತಹ ಘಟನೆಯನ್ನು ನೋಡುತ್ತಿರುವುದು ಇದೇ ಮೊದಲು. ಪ್ರತಿ ಬಾರಿಯೂ ನಾವು ಒಣಗಿದ ಖರ್ಜೂರ ಮತ್ತು ಬಾಳೆಹಣ್ಣುಗಳನ್ನು ಸಂಗ್ರಹಿಸಲು ಮುಂದೆ ಬರುತ್ತೇವೆ. ಯಾರಿಗೂ ಹಾನಿಯಾಗಿರಲಿಲ್ಲ. ಆದರೆ, ಈ ಬಾರಿ ನೂಕುನುಗ್ಗಲು ಆಗಿ, ತಳ್ಳಾಟವಾಗಿತ್ತು. ಇದರಿಂದ ಮೂವರು ಚಕ್ರದಡಿ ಸಿಲುಕಿದ್ದರು. ಅದೃಷ್ಟವಶಾತ್ ಓರ್ವ ಪಾರಾದ. ಆದರೆ ಇಬ್ಬರು ಸಾವನ್ನಪ್ಪಿದ್ದಾರೆಂದು ಕೆಲ ಭಕ್ತರು ಹೇಳಿದ್ದಾರೆ.**

---

# ಮುಗಿಯದ ಮಾಶಾಳ ಗ್ರಾಮಸ್ಥರ ನೀರಿನ ಬವಣೆ

## ತಾಲ್ಲೂಕು ಆಡಳಿತ ನೀರು ಪೂರೈಕೆಗೆ ಒಂದು ಟ್ಯಾಂಕ್ ನೀಡಿದೆ, ಆದರೆ ಗ್ರಾಮಸ್ಥರಿಗೆ ನೀರು ಮಾತ್ರ ಸಾಕಾಗುತ್ತಿಲ್ಲ

• **ಉದಯವಾಹಿನಿ, ಅಫಜಲಪುರ**

ಮಾಶಾಳ ಗ್ರಾ.ಪಂನಲ್ಲಿ 10 ಸಾವಿರ ಜನಸಂಖ್ಯೆಯಿದೆ. ಮಳೆ ಕೊರತೆಯಿಂದಾಗಿ ಗ್ರಾಮದಲ್ಲಿರುವ ಕೊಳವೆ ಬಾವಿಗಳು ಬತ್ತಿವೆ. ತಾಲ್ಲೂಕು ಆಡಳಿತ ನೀರು ಪೂರೈಕೆಗೆ ಒಂದು ಟ್ಯಾಂಕ್ ನೀಡಿದೆ. ಆದರೆ ಗ್ರಾಮಸ್ಥರಿಗೆ ನೀರು ಮಾತ್ರ ಸಾಕಾಗುತ್ತಿಲ್ಲ. ಗ್ರಾಮದಲ್ಲಿ 12 ವಾರ್ಡ್‌ಗಳಿದ್ದು, ಜನರು ಕುಡಿಯುವ ನೀರಿಗಾಗಿ ಪರದಾಡುವಂತಾಗಿದೆ.

ಮೇ 27ರಂದು ಗ್ರಾಮದಲ್ಲಿ ಚೌಡೇಶ್ವರಿ ಜಾತ್ರೆ ಆರಂಭವಾಗುತ್ತದೆ. ಸುತ್ತಲಿನ ಮೂರು ರಾಜ್ಯಗಳ ಭಕ್ತರು ಬರುತ್ತಾರೆ. ಹೀಗಾಗಿ ಕುಡಿಯುವ ನೀರಿನ ಸಮಸ್ಯೆ ಮತ್ತಷ್ಟು ಉಲ್ಬಣಗೊಳ್ಳುವ ಸಾಧ್ಯತೆಯಿದೆ. ಗ್ರಾಮದಲ್ಲಿ ನಾಲ್ಕು ತಿಂಗಳಿಂದ ಕುಡಿಯುವ ನೀರಿನ ಸಮಸ್ಯೆಯಿದೆ. ಸರ್ಕಾರ ಮತ್ತು ಗ್ರಾ.ಪಂನವರು ಕೊರೆದಿರುವ ಕೊಳವೆ ಬಾವಿಗಳು ಬತ್ತಿವೆ. ಹೀಗಾಗಿ ಶಾಸಕ ಎಂ.ವೈ. ಪಾಟೀಲ ಹಾಗೂ ಜಿ.ಪಂ ಮಾಜಿ ಸದಸ್ಯ ಅರುಣಕುಮಾರ ಎಂ. ಪಾಟೀಲ ಅವರಿಗೆ ಗ್ರಾಮದ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ತಿಳಿಸಲಾಯಿತು. ಅವರು ತಕ್ಷಣವೇ ತಹಶೀಲ್ದಾರ್‌ಗೆ ಮಾಹಿತಿ ನೀಡಿ, ನೀರು ಪೂರೈಕೆಗಾಗಿ ಮತ್ತೊಂದು ಟ್ಯಾಂಕರ್ ವ್ಯವಸ್ಥೆ ಮಾಡಿದ್ದಾರೆ. ಆದರೆ ಇದು ಸಾಕಾಗುವುದಿಲ್ಲ. ನಮಗೆ ಇನ್ನೂ ಎರಡು ಟ್ಯಾಂಕರ್ ವ್ಯವಸ್ಥೆ ಮಾಡಬೇಕು. ಗ್ರಾಮದ ಸುತ್ತ


ಉದಯವಾಹಿನಿ ಚಿತ್ರ

**ಟ್ಯಾಂಕರ್ ಮೂಲಕ ನೀರು ಪೂರೈಕೆ**

**ಜಾತ್ರೆ ಇರುವುದರಿಂದ ಪ್ರತಿ ಮನೆಗೂ ನೆಂಟರು ಬರುತ್ತಾರೆ. ದಿನಾಲು ದರ್ಶನಕ್ಕಾಗಿ ಬೇರೆ ರಾಜ್ಯಗಳಿಂದ ಭಕ್ತರು ಬರುತ್ತಾರೆ. ಅದಕ್ಕಾಗಿ ತಾಲ್ಲೂಕು ಆಡಳಿತ ಕುಡಿಯುವ ನೀರಿಗಾಗಿ ಹೆಚ್ಚಿನ ಗಮನ ಹರಿಸಬೇಕು. ಗ್ರಾ.ಪಂಗೆ ಕುಡಿಯುವ ನೀರಿಗಾಗಿ ಜಿಲ್ಲಾಧಿಕಾರಿಗಳು ವಿಶೇಷ ಅನುದಾನ ನೀಡಬೇಕು ಎಂದು ಮುಖಂಡರಾದ ಶಿವರುದ್ರಪ್ಪ ಅವಟಿ, ಶಿವಣ್ಣ ಪತಾಟೆ, ಧೂಳಪ್ಪ ರಾಜ, ಶಾತಪ್ಪ ಹಡಲಗಿ ಒತ್ತಾಯಿಸಿದರು.**

ಎಲ್ಲಿಯೂ ನೀರು ದೊರೆಯುತ್ತಿಲ್ಲ. ಕೆಲವು ರೈತರು ಹಣ ನೀಡಿದರೆ, ನೀರು ಕೊಡುವುದಾಗಿ ತಿಳಿಸಿದ್ದಾರೆ. ನಾವು ಈ ವಿಷಯವನ್ನು ತಹಶೀಲ್ದಾರ್‌ಗೆ ತಿಳಿಸಿದ್ದೇವೆ. ಅವರು ಈ ಕುರಿತು ರೈತರ ಜತೆ ಮಾತನಾಡುತ್ತೇನೆ ಎಂದು ಮಾಶಾಳ ಗ್ರಾಮದ ಮುಖಂಡರಾದ ಶಿವು ಪ್ಯಾಟಿ, ಬಾಳಸಾಬ ಪಾರಗೊಂಡ ಹಾಗೂ ಮರೆಪ್ಪ ಮುಗಳಿ ತಿಳಿಸಿದರು. ಗ್ರಾಮಕ್ಕೆ ಭೀಮಾ ನದಿಯಿಂದ ಕುಡಿಯುವ ನೀರಿನ ಯೋಜನೆ ಮಾಡಲಾಗಿದೆ. ಕಳಪೆ ಕಾಮಗಾರಿಯಿಂದಾಗಿ ನಮಗೆ ನೀರು ಬರುತ್ತಿಲ್ಲ ಎಂದು ಅವರು ತಿಳಿಸಿದರು.

**ಜಾತ್ರೆ:** ಚೌಡೇಶ್ವರಿ ಜಾತ್ರೆ ಮೇ 27ರಿಂದ ಜೂನ್ 27ರವರೆಗೆ ನಡೆಯುತ್ತದೆ. ಸುತ್ತಲಿನ ರಾಜ್ಯಗಳಿಂದ ಸಾವಿರಾರು ಭಕ್ತರು ಬರುವುದರಿಂದ ಕುಡಿಯುವ ನೀರಿನ ಸಮಸ್ಯೆ ಉಂಟಾಗುತ್ತದೆ. ಅದಕ್ಕಾಗಿ ತಿಂಗಳವರೆಗೆ ನಿರಂತರವಾಗಿ ಟ್ಯಾಂಕರ್ ಮೂಲಕ ಸರ್ಕಾರ ಕುಡಿಯುವ ನೀರು ಪೂರೈಕೆ ಮಾಡಬೇಕು. ಈಗಾಗಲೇ ಗ್ರಾಮದಲ್ಲಿ ಬೆಂಗಳೂರಿನ ಅಮ್ಮ ಭಗವಾನ ಸಂಸ್ಥೆಯವರು ಎರಡು ಟ್ಯಾಂಕರ್ ಮೂಲಕ ದಿನಕ್ಕೆ 10 ಟ್ಯಾಂಕ್ ನೀರು ಪೂರೈಕೆ ಮಾಡುತ್ತಿದ್ದಾರೆ. ಆದರೂ ಸಹ ಕುಡಿಯುವ ನೀರು ಸಾಕಾಗುತ್ತಿಲ್ಲ.

> **ಈಗಾಗಲೇ ಮಾಶಾಳದಲ್ಲಿ ಒಂದು ಟ್ಯಾಂಕರ್ ಮುಖಾಂತರ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಬೆಂಗಳೂರಿನ ಅಮ್ಮ ಭಗವಾನ ಸಂಸ್ಥೆಯವರು ದಿನಕ್ಕೆ 10 ಟ್ರಿಪ್ ಕುಡಿಯುವ ನೀರು ಪೂರೈಸುತ್ತಿದ್ದಾರೆ. ಗ್ರಾಮದಲ್ಲಿರುವ ಕೊಳವೆಬಾವಿಗಳನ್ನು ದುರಸ್ತಿ ಮಾಡಲಾಗಿದೆ. ಈ ಸಂಬಂಧ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳಿಂದ ಮಾಹಿತಿ ಪಡೆಯುತ್ತೇನೆ. ನಾನು ಸಹ ಗ್ರಾಮಕ್ಕೆ ಭೇಟಿ ನೀಡಿ, ಅಲ್ಲಿಯ ಪರಿಸ್ಥಿತಿ ತಿಳಿದುಕೊಂಡು ಹೆಚ್ಚುವರಿ ಟ್ರಿಪ್ ಮೂಲಕ ನೀರಿನ ವ್ಯವಸ್ಥೆ ಮಾಡಲಾಗುವುದು**
>
> - ಸಂಜೀವಕುಮಾರ ದಾಸರ
> ತಹಶೀಲ್ದಾರ್

---

# ಮಿನಿ ನ್ಯೂಸ್

## ಸಂಚಾರ ಅವ್ಯವಸ್ಥೆ: ಗೋಳು ಕೇಳುವವರಿಲ್ಲ

• **ಉದಯವಾಹಿನಿ, ನ್ಯಾಮತಿ**

ಪಟ್ಟಣದಲ್ಲಿ ಸಂಚಾರ ವ್ಯವಸ್ಥೆ ಅವ್ಯವಸ್ಥೆಯಾಗಿದ್ದು, ಪಾದಚಾರಿಗಳು, ಮಹಿಳೆಯರು ಪರದಾಡುವಂತಾಗಿದೆ. ಪ್ರತಿದಿನ ನೂರಾರು ಬಸ್‌ಗಳು ಇಲ್ಲಿ ಸಂಚರಿಸುತ್ತವೆ. ಇಲ್ಲಿನ ಗಾಂಧಿ ರಸ್ತೆ, ನೆಹರು ರಸ್ತೆ, ಮಹಾಂತೇಶ್ವರ ರಸ್ತೆಯಲ್ಲಿ ಸಂಚರಿಸುವ ವಾಹನಗಳು ಕಿತ್ತೂರು ರಾಣಿ ಚನ್ನಮ್ಮ ಸರ್ಕಲ್ ಹಾದು ಹೋಗಬೇಕು. ಸರ್ಕಲ್ ಕಿರಿದಾಗಿದ್ದು ವಾಹನ ದಟ್ಟಣೆ ಹೆಚ್ಚಾಗಿದೆ. ಸರ್ಕಲ್‌ನಲ್ಲಿ ಬೀದಿ ಬದಿ ವ್ಯಾಪಾರಸ್ಥರು ಅಂಗಡಿ ಇಟ್ಟುಕೊಂಡಿದ್ದಾರೆ. ವ್ಯಾಪಾರಿಗಳು ತಳ್ಳುವ ಗಾಡಿಯನ್ನು ಪಾದಚಾರಿ ರಸ್ತೆಯಲ್ಲಿಯೇ ನಿಲ್ಲಿಸುವುದು ಸಾಮಾನ್ಯವಾಗಿದೆ. ಇದರಿಂದ ಪಾದಚಾರಿಗಳಿಗೆ ಕಿರಿಕಿರಿ ಉಂಟಾಗುತ್ತಿದೆ. ಈ ಬಗ್ಗೆ ಪಟ್ಟಣ ಪಂಚಾಯಿತಿ, ಪೊಲೀಸ್ ಇಲಾಖೆಗೆ ಸಾಕಷ್ಟು ಬಾರಿ ಗಮನಕ್ಕೆ ತಂದರೂ ಉಪಯೋಗವಾಗಿಲ್ಲ ಎಂದು ಮಹಿಳೆಯರು ದೂರುತ್ತಾರೆ.

ಈ ಹಿಂದೆ ಪೊಲೀಸ್ ಇಲಾಖೆಯಿಂದ ಮಹಾಂತೇಶ್ವರ ರಸ್ತೆಯಿಂದ ಹೋಗುವ ವಾಹನಗಳು ಕಿತ್ತೂರು ರಾಣಿ ಚನ್ನಮ್ಮ ಸರ್ಕಲ್ ಮೂಲಕ ಹಾಗೂ ಸುರಹೊನ್ನೆ ಕಡೆಯಿಂದ ಬರುವ ವಾಹನಗಳು ಮಾಜಿ ಶಾಸಕ ಗಂಗಪ್ಪನವರ ಮನೆಯ ತಿರುವಿನ ಮೂಲಕ ಸಂಚರಿಸುವ ನಿಯಮ ಜಾರಿಗೆ ತಂದಿದ್ದರು. ಬಳಿಕ ಅದು ಪಾಲನೆಯಾಗಲಿಲ್ಲ. ಈಗ ಅದೇ ನಿಯಮ ಪಾಲಿಸಿದರೆ ಸಂಚಾರ ನಿಯಂತ್ರಣ ಸಾಧ್ಯ ಎಂದು ಕಸಾಪ ಸದಸ್ಯರಾದ ಜಿ. ನಿಜಲಿಂಗಪ್ಪ, ಚಂದ್ರೇಗೌಡ, ಎಂ.ಎಸ್. ಜಗದೀಶ, ಬಂಡಿ ಈಶ್ವರಪ್ಪ ಅವರ ಅಭಿಪ್ರಾಯ.

## ವಾಯುಭಾರ ಕುಸಿತ: 5 ದಿನ ಸಮುದ್ರಕ್ಕೆ ಇಳಿಯದಂತೆ ಮೀನುಗಾರರಿಗೆ ಸೂಚನೆ

• **ಉದಯವಾಹಿನಿ, ಕಾರವಾರ**

ಬಂಗಾಳಕೊಲ್ಲಿಯಲ್ಲಿ ವಾಯುಬಾರ ಕುಸಿತವಾಗಿದೆ. ಈ ಹಿನ್ನೆಲೆಯಲ್ಲಿ ಅರಬ್ಬಿ ಸಮುದ್ರದಲ್ಲಿ ಮೀನುಗಾರರಿಗೆ 5 ದಿನ ಸಮುದ್ರಕ್ಕೆ ಇಳಿಯದಂತೆ ಉತ್ತರ ಕನ್ನಡ ಜಿಲ್ಲಾಡಳಿತ ಸೂಚನೆ ನೀಡಿದೆ. ಬಂಗಾಳಕೊಲ್ಲಿಯಲ್ಲಿ ವಾಯುಬಾರ ಕುಸಿತವಾಗಿದ್ದು, ಈ ಹಿನ್ನೆಲೆಯಲ್ಲಿ ಕರಾವಳಿಯಲ್ಲಿ ಮೀನುಗಾರಿಕೆಗೆ ನಿರ್ಬಂಧ ವಿಧಿಸಲಾಗಿದೆ. ಈ ಹಿನ್ನೆಲೆಯಲ್ಲಿ ಮೀನುಗಾರಿಕೆಗೆ ತೆರಳದಂತೆ ಉತ್ತರ ಕನ್ನಡ ಜಿಲ್ಲಾಡಳಿತ ಸೂಚನೆ ನೀಡಿದೆ. ಅರಬ್ಬಿ ಸಮುದ್ರದಲ್ಲಿ 40 ಕಿ.ಮೀಯಿಂದ 50 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಯಾರೂ ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದೆ.

## ಕಾರ್ ಅಡ್ಡಗಟ್ಟಿ ಚಾಲಕ, ಮಹಿಳೆಯರ ಮೇಲೆ ಹಲ್ಲೆ

• **ಉದಯವಾಹಿನಿ, ಬೆಳ್ತಂಗಡಿ**

ಕಾರ್ ಅಡ್ಡಗಟ್ಟಿ ಚಾಲಕ ಹಾಗೂ ಕಾರ್ ನಲ್ಲಿದ್ದ ಮಹಿಳೆಯರ ಮೇಲೆ ಹಲ್ಲೆ ನಡೆಸಿದ ಘಟನೆ ಧರ್ಮಸ್ಥಳ ಕನ್ಯಾಡಿ ರಸ್ತೆಯಲ್ಲಿ ನಡೆದಿದೆ. ಧರ್ಮಸ್ಥಳದ ನಿವಾಸಿಗಳಾದ ಅಬ್ದುಲ್ ಫಾರೂಕ್, ಮೈಮುನಾ, ಸಿದ್ದಿಕ್ ಮತ್ತು ಮಕ್ಕಳು ಉಜಿರೆಯಲ್ಲಿರುವ ಸಂಬಂಧಿಕರ ಮನೆಗೆ ಹೋಗಿ ರಾತ್ರಿ 11:30 ಸುಮಾರಿಗೆ ಧರ್ಮಸ್ಥಳಕ್ಕೆ ವಾಪಸ್ ಆಗುವಾಗ ಕನ್ಯಾಡಿ ಶಾಲೆ ಸಮೀಪ ಎರಡು ಬೈಕ್ ಗಳಲ್ಲಿ ಬಂದ ಮೂವರು ಕಾರ್ ತಡೆದಿದ್ದಾರೆ. ಕಾರ್ ಚಾಲಕನ ಮೇಲೆ ಹಲ್ಲೆ ನಡೆಸಿ ಕಾರ್ ಕೀ ಕಸಿದುಕೊಂಡಿದ್ದಾರೆ. ಬಲವಂತವಾಗಿ ಕಾರ್ ಡೋರ್ ತೆರೆದ ಆರೋಪಿಗಳು ಮಹಿಳೆಯರ ಮೇಲೆ ಹಲ್ಲೆ ಮಾಡಿದ್ದಲ್ಲದೆ, ಮೊಬೈಲ್ ಕಸಿದು ಎಸೆದಿದ್ದಾರೆ. ಕಾರ್ ನಲ್ಲಿದ್ದವರು ಕೂಗಾಡಿದಾಗ ಪರಿಚಯದವರು ವಾಹನ ನಿಲ್ಲಿಸಿ ಜಗಳ ಬಿಡಿಸಿದ್ದಾರೆ. ಈ ವೇಳೆ ಆರೋಪಿಗಳು ಬೈದು ಬೆದರಿಕೆ ಹಾಕಿ ಪರಾರಿಯಾಗಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಧರ್ಮಸ್ಥಳ ಪೊಲೀಸ್ ಠಾಣೆಗೆ ದೂರು ನೀಡಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.

## ಸಾರ್ವಜನಿಕ ಆಸ್ಪತ್ರೆ: ಮೇಣದ ಬತ್ತಿ ಬೆಳಕಲ್ಲಿ ಚಿಕಿತ್ಸೆ

• **ಉದಯವಾಹಿನಿ, ಮೊಳಕಾಲ್ಮುರು**

ವಿದ್ಯುತ್ ಕಡಿತದ ಸಮಸ್ಯೆಯಿಂದಾಗಿ ಇಲ್ಲಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ವಾರದಿಂದ ಮೇಣದ ಬತ್ತಿ ಬೆಳಕಿನಲ್ಲೇ ರೋಗಿಗಳಿಗೆ ಚಿಕಿತ್ಸೆ ನೀಡುವ ಪರಿಸ್ಥಿತಿ ಎದುರಾಗಿದೆ. ಮೇಣದ ಬತ್ತಿ ಬೆಳಕಿನಡಿ ವೈದ್ಯರು ಚಿಕಿತ್ಸೆ ನೀಡುತ್ತಿರುವುದು, ರೋಗಿಗಳು ಮೊಬೈಲ್ ಟಾರ್ಚ್ ಆನ್ ಮಾಡಿಕೊಂಡು ಚಿಕಿತ್ಸೆ ಪಡೆಯುತ್ತಿರುವ ಚಿತ್ರಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ. 4-5 ದಿನಗಳಿಂದ ಮಳೆ ಬರುತ್ತಿದ್ದು, ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುತ್ತಿದೆ. ಇದರಿಂದಾಗಿ ವಾರ್ಡ್‌ಗಳಲ್ಲಿ ದಾಖಲಾಗಿರುವ ರೋಗಿಗಳು ಹಾಗೂ ತುರ್ತು ಚಿಕಿತ್ಸಾ ವಿಭಾಗಕ್ಕೆ ದಾಖಲಾಗಿರುವವರ ಆರೈಕೆಗೆ ತೊಂದರೆಯಾಗುತ್ತಿದೆ. ಎಕ್ಸ್‌ರೇ ವಿಭಾಗದಲ್ಲೂ ಸಮಸ್ಯೆ ಎದುರಾಗಿದೆ' ಎಂದು ಹೆಸರು ಬಹಿರಂಗಪಡಿಸಲು ಇಚ್ಛಿಸದ ವೈದ್ಯರೊಬ್ಬರು ತಿಳಿಸಿದ್ದಾರೆ. ವಿದ್ಯುತ್ ಕಡಿತದ ಕಾರಣ ಫ್ಯಾನ್ ಕಾರ್ಯನಿರ್ವಹಿಸುತ್ತಿಲ್ಲ. ಶೆಕೆ ಹೆಚ್ಚಾಗಿದ್ದು, ಅದರ ನಡುವೆಯೇ ಹೊರರೋಗಿಗಳಿಗೆ ಚಿಕಿತ್ಸೆ ನೀಡಬೇಕಿದೆ. ಸಂಜೆ, ರಾತ್ರಿ ವಿದ್ಯುತ್ ಕಡಿತವಾದಲ್ಲಿ ಮೇಣದ ಬತ್ತಿ ಬೆಳಕಿನಲ್ಲಿ ಚಿಕಿತ್ಸೆ ನೀಡುವುದು ಅನಿವಾರ್ಯ. ಈ ಕುರಿತು ಹಿರಿಯ ಅಧಿಕಾರಿಗಳಿಗೆ ತಿಳಿಸಿದರೂ ಕ್ರಮ ಕೈಗೊಂಡಿಲ್ಲ, ಕೆಲಸ ಮಾಡಲು ಕಷ್ಟವಾಗುತ್ತಿದೆ' ಎಂದು ಹೇಳಿದರು. ಆಸ್ಪತ್ರೆಯಲ್ಲಿ ಅಳವಡಿಸಲಾಗಿರುವ ವೈರ್‌ಗಳು ಕೆಲವೆಡೆ ಹಾಳಾಗಿವೆ. ಹೀಗಾಗಿ ಒಂದೊಂದು ಕಡೆ ಸರಿಯಾಗಿ ವಿದ್ಯುತ್ ಸರಬರಾಜಾಗುತ್ತಿಲ್ಲ. ಜನರೇಟರ್ ಕೆಟ್ಟ ನಂತರ ಸಮಸ್ಯೆ ಬಿಗಡಾಯಿಸಿದೆ' ಎಂದು ಶುಶ್ರೂಷಕಿಯೊಬ್ಬರು ತಿಳಿಸಿದರು.

## ಹಂಪಿ ಭಾಗದಲ್ಲಿ ಗುಡುಗು ಸಹಿತ ಬಿರುಸಿನ ಮಳೆ

• **ಉದಯವಾಹಿನಿ, ಹೊಸಪೇಟೆ**



ಹೊಸಪೇಟೆ ನಗರ, ಕಮಲಾಪುರ, ಹಂಪಿ ಸಹಿತ ತಾಲ್ಲೂಕಿನ ವಿವಿಧೆಡೆ ಭಾನುವಾರ ಮಧ್ಯಾಹ್ನ ಗುಡುಗಿನಿಂದ ಕೂಡಿದ ಬಿರುಸಿನ ಮಳೆ ಸುರಿಯಿತು.ಮಧ್ಯಾಹ್ನ 1.30ರ ಸುಮಾರಿಗೆ ಆರಂಭವಾದ ಮಳೆ 20 ನಿಮಿಷ ಬಿರುಸಿನಿಂದ ಸುರಿಯಿತು. ಇದರಿಂದಾಗಿ ಬಿಸಿಲಿನಿಂದ ಕಂಗೆಟ್ಟಿದ್ದ ಜನರು ನೆಮ್ಮದಿಯ ನಿಟ್ಟುಸಿರು ಬಿಟ್ಟರು. ಕಳೆದ ವಾರದಿಂದೀಚೆಗೆ ಜಿಲ್ಲೆಯಲ್ಲಿ ಮಳೆ ಸುರಿಯುತ್ತಿದ್ದರೂ ಅದು ಬಿರುಸು ಪಡೆದಿರಲಿಲ್ಲ. ಮಳೆಗಿಂತ ಹೆಚ್ಚಾಗಿ ಗಾಳಿಯ ರಭಸ ಜಾಸ್ತಿ ಇದ್ದ ಕಾರಣ ಹೊಸಪೇಟೆ ತಾಲ್ಲೂಕಿನ ಹಲವೆಡೆ ನೂರಾರು ಹೆಕ್ಟೇರ್ ಬಾಳೆ ತೋಟ ನಾಶವಾಗಿದೆ.

ಉದಯ ವಾಹಿನಿ

www.udayavahini.in
epaper.udayavahini.in
Udaya vahini news
Udaya vahini news
Udayavahini news youtube
udayavahininews@gmail. com






# ಇತಿಹಾಸ ಬದಲಿಸಿದ ಸಿಎಸ್‌ಕೆ ಸೋಲು!

ಕಳೆದ ಸೀಸನ್‌ನಲ್ಲಿ ಸಿಎಸ್‌ಕೆ ಹೊರತುಪಡಿಸಿ, ಗುಜರಾತ್ ಟೈಟಾನ್ಸ್, ಲಕ್ನೋ ಸೂಪರ್ ಜೈಂಟ್ಸ್ ಮತ್ತು ಮುಂಬೈ ಇಂಡಿಯನ್ಸ್ ಪ್ಲೇಆಫ್‌ನಲ್ಲಿ ಸ್ಥಾನ ಪಡೆದಿದ್ದವು. ಈ ನಾಲ್ಕರಲ್ಲಿ ಸಿಎಸ್‌ಕೆ ಹಾಗೂ ಗುಜರಾತ್ ಫೈನಲ್‌ಗೇರಿದ್ದವು. ಆ ಫೈನಲ್‌ನಲ್ಲಿ ಸಿಎಸ್‌ಕೆ ಚಾಂಪಿಯನ್ ಆಗಿ ಹೊರಹೊಮ್ಮಿತ್ತು. ಆದರೆ ಈ ಬಾರಿ ಈ 4 ತಂಡಗಳಿಗೂ ತಂಡಗಳು ಪ್ಲೇ ಆಫ್‌ನಲ್ಲಿ ಸ್ಥಾನ ಪಡೆಯಲು ಸಾಧ್ಯವಾಗಿಲ್ಲ.

ಐಪಿಎಲ್ 2024ರ 68ನೇ ರೋಚಕ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಚೆನ್ನೈ ಸೂಪರ್ ಕಿಂಗ್ಸ್ ಅನ್ನು ಸೋಲಿಸುವ ಮೂಲಕ ಪ್ಲೇಆಫ್‌ನಲ್ಲಿ ತಮ್ಮ ಸ್ಥಾನವನ್ನು ಖಚಿತಪಡಿಸಿತು. ಇದರೊಂದಿಗೆ ಪ್ಲೇ ಆಫ್ ತಲುಪಿದ ನಾಲ್ಕನೇ ತಂಡ



ಎನಿಸಿಕೊಂಡಿತು. ಆರ್‌ಸಿಬಿಯ ಆಗಮನದೊಂದಿಗೆ ಪ್ಲೇಆಫ್‌ನಲ್ಲಿ ಸ್ಥಾನ ಪಡೆದ ಎಲ್ಲಾ ನಾಲ್ಕು ತಂಡಗಳು ಯಾವುವು ಎಂಬುದು ಖಚಿತವಾಗಿದೆ. ಇದರಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್, ಸನ್‌ರೈಸರ್ಸ್ ಹೈದರಾಬಾದ್ ಮತ್ತು ರಾಜಸ್ಥಾನ್ ರಾಯಲ್ಸ್ ಈಗಾಗಲೇ ಸ್ಥಾನ ಪಡೆದಿವೆ. ಈ ಸೋಲಿನೊಂದಿಗೆ ಹಾಲಿ ಚಾಂಪಿಯನ್ ಚೆನ್ನೈ ಸೂಪರ್ ಕಿಂಗ್ಸ್ ಪ್ಲೇಆಫ್‌ನಿಂದ ಹೊರಬಿದ್ದಿದೆ. ಈ ಸೋಲಿನೊಂದಿಗೆ ಐಪಿಎಲ್ ಇತಿಹಾಸದಲ್ಲಿ ಹಿಂದೆಂದು ನಡೆಯದ ಘಟನೆಯೊಂದು ಈ ಐಪಿಎಲ್ ಆವೃತ್ತಿಯಲ್ಲಿ ನಡೆದಿದೆ. ವಾಸ್ತವವಾಗಿ ಕಳೆದ ಸೀಸನ್‌ನಲ್ಲಿ ಸಿಎಸ್‌ಕೆ ಹೊರತುಪಡಿಸಿ, ಗುಜರಾತ್ ಟೈಟಾನ್ಸ್, ಲಕ್ನೋ ಸೂಪರ್ ಜೈಂಟ್ಸ್ ಮತ್ತು ಮುಂಬೈ ಇಂಡಿಯನ್ಸ್ ಪ್ಲೇಆಫ್‌ನಲ್ಲಿ ಸ್ಥಾನ ಪಡೆದಿದ್ದವು. ಈ ನಾಲ್ಕರಲ್ಲಿ ಸಿಎಸ್‌ಕೆ ಹಾಗೂ ಗುಜರಾತ್ ಫೈನಲ್‌ಗೇರಿದ್ದವು. ಆ ಫೈನಲ್‌ನಲ್ಲಿ ಸಿಎಸ್‌ಕೆ ಚಾಂಪಿಯನ್ ಆಗಿ ಹೊರಹೊಮ್ಮಿತ್ತು.

ಆದರೆ ಈ ಬಾರಿ ಈ 4 ತಂಡಗಳಿಗೂ ತಂಡಗಳು ಪ್ಲೇ ಆಫ್‌ನಲ್ಲಿ ಸ್ಥಾನ ಪಡೆಯಲು ಸಾಧ್ಯವಾಗಿಲ್ಲ. ಇದರೊಂದಿಗೆ ಐಪಿಎಲ್ ಇತಿಹಾಸದಲ್ಲಿ ಕಳೆದ ಸೀಸನ್‌ನ ಅಗ್ರ 4 ತಂಡಗಳ ಪೈಕಿ ಯಾವ ತಂಡವೂ ಪ್ಲೇಆಫ್ ತಲುಪದೆ ಇರುವುದು ಇದೇ ಮೊದಲ ಬಾರಿಗೆ ಸಂಭಾವಿಸಿದೆ. ಇನ್ನು ಐಪಿಎಲ್ ಇತಿಹಾಸದಲ್ಲಿ ಇದು ಮೂರನೇ ಬಾರಿಗೆ ಚೆನ್ನೈ ಸೂಪರ್ ಕಿಂಗ್ಸ್ ತಂಡವು ಪ್ಲೇ ಆಫ್ ತಲುಪಲು ಸಾಧ್ಯವಾಗಲಿಲ್ಲ. ಈ ಹಿಂದೆ 2020 ಮತ್ತು 2022ರಲ್ಲೂ ಚೆನ್ನೈ ಸೂಪರ್ ಕಿಂಗ್ಸ್ ಪ್ಲೇಆಫ್‌ನಲ್ಲಿ ಸ್ಥಾನ ಪಡೆಯಲು ಸಾಧ್ಯವಾಗಿರಲಿಲ್ಲ. ಈ ಹಿಂದೆ ಕೋಲ್ಕತ್ತಾ ನೈಟ್ ರೈಡರ್ಸ್, ಸನ್ ರೈಸರ್ಸ್ ಹೈದರಾಬಾದ್ ಮತ್ತು ರಾಜಸ್ಥಾನ್ ರಾಯಲ್ಸ್ ತಂಡಗಳು ಐಪಿಎಲ್ ಪ್ರಶಸ್ತಿ ಗೆದ್ದಿದ್ದವು. ಆದರೆ ಈ ಬಾರಿ ಪ್ಲೇಆಫ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮಾತ್ರ ಇನ್ನೂ ಐಪಿಎಲ್ ಟ್ರೋಫಿಯನ್ನು ಗೆದ್ದಿಲ್ಲ.


# ಸನ್ 2ನೇ ಸ್ಥಾನಕ್ಕೆ ಜಿಗಿತ, ಪಂಜಾಬ್ ಕುಸಿತ

## ಸೋಲಿನ ಮೂಲಕ ಅಭಿಯಾನ ಮುಗಿಸಿದ ಪಂಜಾಬ್; ಹೈದರಾಬಾದ್‌ಗೆ 4 ವಿಕೆಟ್ ಜಯ, ಕೊಹ್ಲಿಯ ಸಿಕ್ಸರ್ ದಾಖಲೆ ಮುರಿದ ಅಭಿಷೇಕ್

ಎಡಗೈ ಬ್ಯಾಟರ್ ಅಭಿಷೇಕ್ ಶರ್ಮ(66) ಬಾರಿಸಿದ ಸೊಗಸಾದ ಅರ್ಧಶತಕದ ನೆರವಿನಿಂದ ಸನ್‌ರೈಸರ್ಸ್ ಹೈದರಾಬಾದ್ ತಂಡ ತವರಿನಲ್ಲೇ ನಡೆದ ತನ್ನ ಕೊನೆಯ ಲೀಗ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ 4 ವಿಕೆಟ್ ಅಂತರದ ಗೆಲುವು ಸಾಧಿಸಿದೆ. ಪ್ಲೇ ಆಫ್ ಪ್ರವೇಶಿಸಿರುವ ಹೈದರಾಬಾದ್ ಗೆಲುವಿನೊಂದಿಗೆ 17 ಅಂಕ ಸಂಪಾದಿಸಿ ಅಂಕಪಟ್ಟಿಯಲ್ಲಿ 2ನೇ ಸ್ಥಾನಕ್ಕೇರಿದೆ. ರಾತ್ರಿ ನಡೆಯುವ ಪಂದ್ಯದಲ್ಲಿ ರಾಜಸ್ಥಾನ್ ತಂಡ ಕೆಕೆಆರ್ ವಿರುದ್ಧ ಗೆದ್ದರೆ ಹೈದರಾಬಾದ್ ಮೂರನೇ ಸ್ಥಾನಕ್ಕೆ ಕುಸಿದು ಎಲಿಮಿನೇಟರ್ ಪಂದ್ಯದಲ್ಲಿ ಆರ್‌ಸಿಬಿ ವಿರುದ್ಧ ಆಡಲಿದೆ. ಎಲಿಮಿನೇಟರ್ ಪಂದ್ಯ ಬುಧವಾರ ನರೇಂದ್ರ ಮೋದಿ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆಯಲಿದೆ.

ಬ್ಯಾಟಿಂಗ್ ಸ್ನೇಹಿಯಾದ ಉಪ್ಪಳದ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ಪಂಜಾಬ್ 5 ವಿಕೆಟ್‌ಗೆ 214 ರನ್ ಬಾರಿಸಿ ತನ್ನ ಆಯ್ಕೆಯನ್ನು ಸಮರ್ಥಿಸಿಕೊಂಡಿತು. ಆದರೆ ಈ ಮೊತ್ತ ಹೈದರಾಬಾದ್ ತಂಡವನ್ನು ಕಟ್ಟಿಹಾಕಲು ಸಾಕಾಗಲಿಲ್ಲ. ಗುರಿ ಬೆನ್ನಟ್ಟಿದ ಸನ್‌ರೈಸರ್ಸ್ ಹೈದರಾಬಾದ್ 19.1 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 215 ಬಾರಿಸಿ ತವರಿನಲ್ಲಿ ವಿಜಯ ಪತಾಕೆ ಹಾರಿಸಿತು. ಉಭಯ ತಂಡಗಳ ಜಿದ್ದಾಜಿದ್ದಿನ ಬ್ಯಾಟಿಂಗ್ ಪರಾಕ್ರಮದಿಂದಾಗಿ ಈ ಪಂದ್ಯದಲ್ಲಿ ಒಟ್ಟು 429 ರನ್ ದಾಖಲಾಯಿತು.

**ಹೆಡ್ ಕ್ಲೀನ್ ಬೌಲ್ಡ್ :** ಗುರಿ ಬೆನ್ನಟ್ಟಿದ ಹೈದರಾಬಾದ್ ತಂಡ ಸ್ಫೋಟಕ ಬ್ಯಾಟಿಂಗ್‌ಗೆ ಹೆಸರುವಾಸಿಯಾದ ಟ್ರಾವಿಸ್ ಹೆಡ್ ಅವರನ್ನು ಮೊದಲ ಎಸೆತದಲ್ಲೇ ಕಳೆದುಕೊಂಡು ಆರಂಭಿಕ ಆಘಾತಕ್ಕೆ ಒಳಗಾಯಿತು. ಹೆಡ್ ಅವರು ಅರ್ಶದೀಪ್ ಸಿಂಗ್ ಅವರ ಮೊದಲ ಎಸೆತಲ್ಲೇ ಕ್ಲೀನ್ ಬೌಲ್ಡ್ ಆದರು. ಹೆಡ್ ವಿಕೆಟ್ ಬಿದ್ದರೂ ಕೂಡ ವಿಚಲಿತರಾಗದ ಅಭಿಷೇಕ್ ಶರ್ಮ ಬಿರುಸಿನ ಬ್ಯಾಟಿಂಗ್ ಮೂಲಕ ಪಂಜಾಬ್ ಬೌಲರ್‌ಗಳ ಮೇಲೆರಗಿ ಸತತ ಸಿಕ್ಸರ್ ಮತ್ತು ಬೌಂಡರಿ ಬಾರಿಸಿ ತಮ್ಮ ಹಾಗೂ ತಂಡದ ಮೊತ್ತವನ್ನು ಹಿಗ್ಗಿಸಿದರು.



### ಮತ್ತೆ ಸಿಡಿದ ಅಭಿಷೇಕ್ ಶರ್ಮ

**ಮೂರನೇ ವಿಕೆಟ್‌ಗೂ ಅಭಿಷೇಕ್, ನಿತೀಶ್ ರೆಡ್ಡಿ ಜತೆಗೂಡಿ ಮತ್ತೊಂದು ಅರ್ಧಶತಕದ ಜತೆಯಾಟ ನಡೆಸಿ ಗಮನಸೆಳೆದರು. ಸಿಕ್ಸರ್‌ಗಳ ಸುರಿಮಳೆ ಸುರಿಸಿದ ಅಭಿಷೇಕ್ ಈ ಬಾರಿಯ ಟೂರ್ನಿಯಲ್ಲಿ ಅತ್ಯಧಿಕ ಸಿಕ್ಸರ್ ಬಾರಿಸಿದ ಆಟಗಾರನಾಗಿ ಹೊರಮೊಮ್ಮಿದರು. ಇದೇ ವೇಳೆ 37 ಸಿಕ್ಸರ್ ಬಾರಿಸಿರುವ ವಿರಾಟ್ ಕೊಹ್ಲಿಯ ದಾಖಲೆ ಪತನಗೊಂಡಿತು. ಒಟ್ಟು 28 ಎಸೆತ ಎದುರಿಸಿದ ಅಭಿಷೇಕ್ ಬರೋಬ್ಬರಿ 6 ಸಿಕ್ಸರ್ ಮತ್ತು 5 ಬೌಂಡರಿ ಸಿಡಿಸಿ 66 ರನ್ ಬಾರಿಸಿದರು. 51 ಎಸೆತಗಳಲ್ಲಿ ಅರ್ಧಶತಕ ಪೂರ್ತಿಗೊಳಿಸಿದರು. ಇದು ಈ ಆವೃತ್ತಿಯ 3ನೇ ಅರ್ಧಶತಕವಾಗಿದೆ.**

ಅಭಿಷೇಕ್ ಶರ್ಮ ಅವರಿಗೆ ಮತ್ತೊಂದು ತುದಿಯಲ್ಲಿ ರಾಹುಲ್ ತ್ರಿಪಾಠಿ ಕೂಡ ಉತ್ತಮ ಸಾಥ್ ನೀಡಿದರು. ಉಭಯ ಆಟಗಾರರು ಸೇರಿಕೊಂಡು ದ್ವಿತೀಯ ವಿಕೆಟ್‌ಗೆ 72 ರನ್ ಬಾರಿಸಿ ತಂಡವನ್ನು ಆರಂಭಿಕ ಆಘಾತದಿಂದ ಪಾರು ಮಾಡಿದರು. ಈ ಮೊತ್ತವನ್ನು ಈ ಜೋಡಿ ಕೇವಲ 4.6 ಓವರ್‌ನಲ್ಲಿ ಬಾರಿಸಿದರು. ತಿಪಾಠಿ 18 ಎಸೆತ ಎದುರಿಸಿ 33(4 ಬೌಂಡರಿ, 2 ಸಿಕ್ಸರ್) ಬಾರಿಸಿದರು.

ಅಭಿಷೇಕ್ ವಿಕೆಟ್ ಪತನದ ಬಳಿಕ ಉತ್ತಮವಾಗಿ ಆಡುತ್ತಿದ್ದ ನಿತೀಶ್ ರೆಡ್ಡಿ 37 ರನ್‌ಗೆ ವಿಕೆಟ್ ಕಳೆದುಕೊಂಡರು. ಬಳಿಕ ಬಂದ ಶಾಬಾಜ್ ಅಹ್ಮದ್ 3 ರನ್‌ಗೆ ವಿಕೆಟ್ ಕೈಚೆಲ್ಲಿದರು. ಈ ವೇಳೆ ಹೈದರಾಬಾದ್ ಕೊಂಚ ಆತಂಕಕ್ಕೆ ಸಿಲುಕಿತು. ಇದೇ ವೇಳೆ ಹೆನ್ರಿಚ್ ಕ್ಲಾಸೆನ್ ಜವಾಬ್ದಾರಿಯುತ ಬ್ಯಾಟಿಂಗ್ ನಡೆಸಿ 42 ರನ್ ಬಾರಿಸಿದರು. ಅಂತಿಮವಾಗಿ ಅಬ್ದುಲ್ ಸಮದ್(11★) ಮತ್ತು ಸನ್ವೀರ್ ಸಿಂಗ್(6★) ಅಜೇಯ ರನ್ ಬಾರಿಸುವ ಮೂಲಕ ತಂಡವನ್ನು ಗೆಲುವಿನ ದಡ ಸೇರಿಸಿದರು. ಪಂಜಾಬ್ ಬ್ಯಾಟರ್‌ಗಳು ಬೃಹತ್ ಮೊತ್ತ ಪೇರಿಸಿದರೂ ಬೌಲರ್‌ಗಳಿಂದ ನಿರೀಕ್ಷಿತ ಪ್ರದರ್ಶನ ಕಂಡು ಬಾರದ ಕಾರಣ ಸೋಲಿಗೆ ತುತ್ತಾದರು.

# ಆರ್‌ಸಿಬಿ ಅಭಿಮಾನಿಗಳ ವಿರುದ್ಧ ಆರೋಪಗಳ ಸುರಿಮಳೆಗೈದ ಸಿಎಸ್‌ಕೆ ಫ್ಯಾನ್ಸ್

ತಂಡ ಗೆದ್ದ ಬಳಿಕ ಆರ್‌ಸಿಬಿ ಅಭಿಮಾನಿಗಳು ರಾತ್ರಿ ಇಡೀ ಸಂಭ್ರಮಾಚರಣೆ ನಡೆಸಿದ್ದರು. ಇತ್ತ ಪ್ಲೇಆಫ್ ರೇಸ್‌ನಿಂದ ಹೊರಬಿದ್ದ ಸಿಎಸ್‌ಕೆ ನಿರಾಸೆಯೊಂದಿಗೆ ಲೀಗ್‌ಗೆ ವಿದಾಯ ಹೇಳಿದರೆ, ಈ ತಂಡದ ಅಭಿಮಾನಿಗಳು ಇದೀಗ ಆರ್‌ಸಿಬಿ ಅಭಿಮಾನಿಗಳ ವಿರುದ್ಧ ಆರೋಪಗಳ ಸುರಿಮಳೆಗೈದಿದ್ದಾರೆ.

ಎಲ್ಲಾ ಲೆಕ್ಕಾಚಾರಗಳನ್ನು ಬುಡಮೇಲು ಮಾಡಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ 17ನೇ ಆವೃತ್ತಿಯ ಐಪಿಎಲ್‌ನ ಪ್ಲೇಆಫ್‌ಗೆ ಅರ್ಹತೆ ಪಡೆಯುವಲ್ಲಿ ಯಶಸ್ವಿಯಾಗಿದೆ. ಸುಮಾರು 3 ವಾರಗಳ ಹಿಂದೆ ಆರ್‌ಸಿಬಿ, 8 ಪಂದ್ಯಗಳಲ್ಲಿ ಕೇವಲ ಒಂದು ಗೆಲುವಿನೊಂದಿಗೆ 10 ತಂಡಗಳ ಪೈಕಿ ಕೊನೆಯ ಸ್ಥಾನದಲ್ಲಿತ್ತು. ಅಲ್ಲದೆ ಸತತ 6 ಸೋಲು ಕಂಡಿದ್ದ ಆರ್‌ಸಿಬಿ ಲೀಗ್ ಹಂತದಲ್ಲೇ ಟೂರ್ನಿಯಿಂದ ಹೊರಬೀಳುತ್ತದೆ ಎಂದು ಹೇಳಲಾಗುತ್ತಿತ್ತು. ಆದರೆ ಆ ನಂತರ ಆರ್‌ಸಿಬಿ ಸತತ 6 ಪಂದ್ಯಗಳನ್ನು ಗೆದ್ದು ಪ್ಲೇ ಆಫ್‌ಗೆ ಲಗ್ಗೆ ಇಡುವ ಮೂಲಕ ಎಲ್ಲಾರಲ್ಲೂ ಅಚ್ಚರಿ ಮೂಡಿಸಿದೆ. ಇದು ತಂಡಕ್ಕೆ ಮಾತ್ರವಲ್ಲ, ಆರ್‌ಸಿಬಿಯ ಕೋಟ್ಯಾಂತರ ಅಭಿಮಾನಿಗಳಿಗೂ ಮರೆಯದ ಕ್ಷಣವಾಗಿದೆ. ಹೀಗಾಗಿ ತಂಡ ಗೆದ್ದ ಬಳಿಕ ಆರ್‌ಸಿಬಿ ಅಭಿಮಾನಿಗಳು ರಾತ್ರಿ ಇಡೀ ಸಂಭ್ರಮಾಚರಣೆ ನಡೆಸಿದ್ದರು. ಇತ್ತ ಪ್ಲೇಆಫ್ ರೇಸ್‌ನಿಂದ ಹೊರಬಿದ್ದ ಸಿಎಸ್‌ಕೆ ನಿರಾಸೆಯೊಂದಿಗೆ ಲೀಗ್‌ಗೆ ವಿದಾಯ ಹೇಳಿದರೆ, ಈ ತಂಡದ ಅಭಿಮಾನಿಗಳು



ಸಿಎಸ್‌ಕೆ ನಿರಾಸೆ ಲೀಗ್‌ಗೆ ವಿದಾಯ

ಇದೀಗ ಆರ್‌ಸಿಬಿ ಅಭಿಮಾನಿಗಳ ವಿರುದ್ಧ ಆರೋಪಗಳ ಸುರಿಮಳೆಗೈದಿದ್ದಾರೆ.

**ಫ್ಯಾನ್ಸ್ ವಾರ್:** ವಾಸ್ತವವಾಗಿ ಕಳೆದ ಪಂದ್ಯ ಬೆಂಗಳೂರಿನಲ್ಲೇ ನಡೆದರೂ ಎರಡು ತಂಡಗಳ ಆಟಗಾರರು ಭಾರಿ ಪ್ರಮಾಣದಲ್ಲಿ ಪಂದ್ಯವನ್ನು ವೀಕ್ಷಿಸಲು ಬಂದಿದ್ದರು. ಈ ಇಬ್ಬರ ಮುಖಾಮುಖಿಯಾದಾಗಲೆಲ್ಲ ಉಭಯ ತಂಡಗಳ ಅಭಿಮಾನಿಗಳ ನಡುವೆ ಮಾತಿನ ಚಕಮಕಿ, ಪರಸ್ಪರ ಹೀಯಾಳಿಸುವ ಘಟನೆಗಳು ನಡೆಯುವುದು ಸಹಜ. ಅದು ಬೆಂಗಳೂರೇ ಆಗಿರಲಿ, ಚೆನ್ನೈ ಆಗಿರಲಿ, ಎರಡೂ ತಂಡಗಳ ಅಭಿಮಾನಿಗಳ ನಡುವೆ ಈ ರೀತಿಯ ಘಟನೆಗಳು ನಡೆಯುತ್ತಲೇ ಇರುತ್ತವೆ. ಈ ಅಭಿಮಾನಿಗಳ ಕಾಳಗದಿಂದ ತೊಂದರೆಗೊಳಗಾದವರು ಪಂದ್ಯ ಮುಗಿದ ಬಳಿಕ ಸೋಶಿಯಲ್ ಮೀಡಿಯಾ ಖಾತೆಯಲ್ಲಿ

### ಆರ್‌ಸಿಬಿ ಫ್ಯಾನ್ಸ್ ವಿರುದ್ಧ ಗಂಭೀರ ಆರೋಪ

**ಇದೀಗ ನಿನ್ನೆಯ ಪಂದ್ಯದಲ್ಲೂ ಈ ರೀತಿಯ ಘಟನೆ ನಡೆದಿರುವುದಾಗಿ ಸಿಎಸ್‌ಕೆ ಅಭಿಮಾನಿಗಳು, ಆರ್‌ಸಿಬಿ ಅಭಿಮಾನಿಗಳ ವಿರುದ್ಧ ಸಾಕಷ್ಟು ಆರೋಪಗಳನ್ನು ಹೊರಿಸಿದ್ದಾರೆ. ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಹಾಗೂ ಸುತ್ತಮುತ್ತ ಸಿಎಸ್‌ಕೆ ಜೆರ್ಸಿ ತೊಟ್ಟವರಿಗೆ ಸಾಕಷ್ಟು ತೊಂದರೆ ನೀಡಲಾಗುತ್ತಿದೆ. ಆರ್‌ಸಿಬಿ ಅಭಿಮಾನಿಗಳು, ಸಿಎಸ್‌ಕೆ ಅಭಿಮಾನಿಗಳನ್ನು ನಿಂದಿಸುತ್ತಿದ್ದಾರೆ. ಕಂಠಪೂರ್ತಿ ಕುಡಿದು ದಾರಿಯಲ್ಲಿ ವೇಗವಾಗಿ ವಾಹನಗಳನ್ನು ಓಡಿಸುತ್ತಾ ದಾರಿಯಲ್ಲಿ ಹೊಗುತ್ತಿದ್ದ ಸಿಎಸ್‌ಕೆ ಅಭಿಮಾನಿಗಳನ್ನು ಹೆದರಿಸುತ್ತಿದ್ದಾರೆ ಎಂದು ಅನ್ನಿ ಸ್ಟೀವ್ ಎಂಬ ಬಳಕೆದಾರರು ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಇನ್ನು ಕೆಲವರು, ಆರ್‌ಸಿಬಿ ಅಭಿಮಾನಿಗಳು ನಮ್ಮನ್ನು ರಸ್ತೆಯಲ್ಲೇ ಸಿಎಸ್‌ಕೆ ಜೆರ್ಸಿ ತೆಗೆಯುವಂತೆ ಬೆದರಿಸಿದರು. ಇವರು ಮನುಷ್ಯರೇ ಅಲ್ಲ, ಗೂಂಡಾಗಳಂತೆ ವರ್ತಿಸುತ್ತಿದ್ದಾರೆ. ನಾವು ಕ್ರೀಡಾಂಗಣದಿಂದ ಹೊರ ನಡೆಯುತ್ತಿರುವಾಗಿ ಆರ್‌ಸಿಬಿ ಅಭಿಮಾನಿಗಳು ನಮ್ಮನ್ನು ಕಂಡು ಜೋರಾಗಿ ಕಿರುಚುತ್ತಿದ್ದರು. ನಾವು ಭಯದಿಂದ ಕ್ಯಾಬ್ ಹತ್ತಿ ಮನೆಯತ್ತ ಹೊರಟೆವು ಎಂದು ಬರೆದುಕೊಂಡಿದ್ದಾರೆ. ಇದೆಲ್ಲದರ ನಡುವೆಯೂ ಕೆಲವು ಆರ್‌ಸಿಬಿ ಅಭಿಮಾನಿಗಳು ನಮ್ಮ ರಕ್ಷಣೆಗೆ ಬಂದರು ಮತ್ತು ಸುರಕ್ಷಿತವಾಗಿ ನಾವು ಅಲ್ಲಿಂದ ತೆರಳಲು ನಮಗೆ ಸಹಾಯ ಮಾಡಿದರು ಎಂದು ಇನ್ನೊಬ್ಬ ನೆಟ್ಟಿಗ ಬರೆದುಕೊಂಡಿದ್ದಾನೆ.**

ತಮ್ಮ ಅಳನ್ನು ತೊಡಿಕ್ಕೊಳುವುದನ್ನು ನಾವು ನೋಡಿದ್ದೇವೆ.

**ಯಾವ ದೂರ ಬಂದಿಲ್ಲ ಎಂದ ಪೊಲೀಸ್:** ಆದಾಗ್ಯೂ, ಸಿಎಸ್‌ಕೆ ಅಭಿಮಾನಿಗಳು ಸಾಮಾಜಿಕ ಜಾಲತಾಣಗಳಲ್ಲಿ ಆರ್‌ಸಿಬಿ ಅಭಿಮಾನಿಗಳ ವಿರುದ್ಧ ಆರೋಪ ಹೊರಿಸಿದ್ದರಾದರೂ, ಈ ಬಗ್ಗೆ ಯಾವುದೇ ಪ್ರಕರಣಗಳು ಅಥವಾ ದೂರುಗಳು ದಾಖಲಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಅಲ್ಲದೆ ಈ ರೀತಿಯಾಗಿ ತೊಂದರೆಗೆ ಒಳಗಾದವರು 112 ಗೆ ಕರೆ ಮಾಡುವಂತೆ ಕೇಳಿಕೊಂಡಿದ್ದಾರೆ.

**ಧನ್ಯವಾದ ತಿಳಿಸಿದ ಸಿಎಸ್‌ಕೆ:** ಏತನ್ಮಧ್ಯೆ, ಸಿಎಸ್‌ಕೆ ತಂಡವನ್ನು ಬೆಂಬಲಿಸಲು ಬಂದಿದ್ದ ತನ್ನ ಅಭಿಮಾನಿಗಳಿಗೆ ಸಿಎಸ್‌ಕೆ ಆಡಳಿತ ಮಂಡಳಿ ಕೃತಜ್ಞತೆ ಸಲ್ಲಿಸಿದ್ದು, 'ಇಂದು ಬೆಂಗಳೂರಿಗೆ ಬಂದು ನಮ್ಮನ್ನು ಬೆಂಬಲಿಸಿದ ನಮ್ಮ ಅಭಿಮಾನಿಗಳಿಗೆ, ನೀವು ಸುರಕ್ಷಿತವಾಗಿ ಮನೆಗೆ ತಲುಪಿದ್ದೀರಿ ಎಂದು ನಾನು ಭಾವಿಸುತ್ತೇನೆ. ನಿಮ್ಮ ಪ್ರೀತಿ ಮತ್ತು ಬೆಂಬಲಕ್ಕೆ ನಾನು ಎಂದೆಂದಿಗೂ ಕೃತಜ್ಞನಾಗಿದ್ದೇನೆ ಎಂದು ಬರೆದುಕೊಂಡಿದೆ.

# ಪ್ರಭಾಸ್‌ನ ಸ್ಪೆಷಲ್ ವ್ಯಕ್ತಿ ಕೀರ್ತಿ ಸುರೇಶ್?



ವಿಶೇಷ ವ್ಯಕ್ತಿಯ ಆಗಮನ

ಟಾಲಿವುಡ್ ನಟ ಪ್ರಭಾಸ್ ಅಭಿಮಾನಿಗಳ ತಲೆಗೆ ಹುಳ ಬಿಟ್ಟಿದ್ದರು. ವಿಶೇಷ ವ್ಯಕ್ತಿಯ ಆಗಮನವಾಗುತ್ತಿದೆ ಎಂದು ಇನ್ಸ್ಟಾಗ್ರಾಂ ಸ್ಟೋರಿ ಹಂಚಿಕೊಂಡಿದ್ದರು. ಎಲ್ಲಾರೂ ನಟನ ಮದುವೆ ಮ್ಯಾಟರ್ ಎಂದೇ ಭಾವಿಸಿದ್ದರು. ಈಗ ಅಸಲಿ ವಿಚಾರ ಏನು ಎಂಬುದನ್ನು ಪ್ರಭಾಸ್ ರಿವೀಲ್ ಮಾಡಿದ್ದಾರೆ. ಡಾರ್ಲಿಂಗ್ಸ್.. ಕೊನೆಗೂ ನಮ್ಮ ಜೀವನಕ್ಕೆ ವಿಶೇಷವಾದ ವ್ಯಕ್ತಿಯೊಬ್ಬರು ಪ್ರವೇಶಿಸಲಿದ್ದಾರೆ. ಕಾಯುತ್ತಾ ಇರಿ ಎಂದು ಪ್ರಭಾಸ್ ಇನ್ಸ್ಟಾಗ್ರಾಂನಲ್ಲಿ ಸ್ಟೋರಿಯಲ್ಲಿ ಬರೆದುಕೊಂಡಿದ್ದರು. ಎಲ್ಲಾರೂ ಮದುವೆ ಬಗ್ಗೆ ಸಿಹಿಸುದ್ದಿ ಕೊಡಲು ಪ್ರಭಾಸ್ ರೆಡಿಯಾಗಿದ್ದಾರೆ ಎಂದು ಭಾವಿಸಿದ್ದರು. ಆದರೆ

ಈಗ ನಟ ನೀಡಿರುವ ಮಾಹಿತಿನೇ ಬೇರೆ.. 'ಕಲ್ಕಿ 2898' ಎಡಿ ಸಿನಿಮಾ ಪ್ರಚಾರಕ್ಕಾಗಿ ಈ ರೀತಿ ಟ್ರಿಕ್ ಯೂಸ್ ಮಾಡಿದ್ದಾರೆ. ಬುಜ್ಜಿ ಕಾರನ್ನು ಪರಿಚಯಿಸಿದ್ದಾರೆ. ಶೇರ್ ಮಾಡಿರುವ ವಿಡಿಯೋದಲ್ಲಿ 'ಮಹಾನಟಿ' ಕೀರ್ತಿ ಸುರೇಶ್ ಧ್ವನಿ ಕೂಡ ಕೇಳಿ ಬಂದಿದೆ. ಅಂದಹಾಗೆ, ಇದು ಪ್ರಭಾಸ್ ಅವರ ವೈಯಕ್ತಿಕ ಜೀವನದ ವಿಷಯ ಅಲ್ಲ. ಪಕ್ಕಾ ಸಿನಿಮಾದ ವಿಚಾರ. 'ಕಲ್ಕಿ 2898 ಎಡಿ' ಸಿನಿಮಾದ ಪ್ರಚಾರಕ್ಕಾಗಿಯೇ ಪ್ರಭಾಸ್ ಅವರು ಆ ರೀತಿ ಪೋಸ್ಟ್ ಮಾಡಿದ್ದರು. ಈ ಸಿನಿಮಾದಲ್ಲಿ ಒಂದು ವಿಶೇಷ ಕಾರು ಇರಲಿದೆ. ಅದನ್ನು ವಿಶೇಷವಾಗಿ ವಿನ್ಯಾಸ ಮಾಡಲಾಗಿದೆ. ಅದಕ್ಕೆ, 'ಬುಜ್ಜಿ' ಎಂದು ಹೆಸರು ಇಡಲಾಗಿದೆ. ಆ ಕಾರು ಸಿರಿ, ಅಲೆಕ್ಸಾ ರೀತಿ ಮಾತನಾಡಲಿದೆ. ಅದಕ್ಕೆ ನಟಿ ಕೀರ್ತಿ ಸುರೇಶ್ ಧ್ವನಿ ನೀಡಿದ್ದಾರೆ.

ಪ್ರಭಾಸ್, ದೀಪಿಕಾ ಪಡುಕೋಣೆ ನಟನೆಯ 'ಕಲ್ಕಿ 2898 ಎಡಿ' ಸಿನಿಮಾ ಜೂನ್ 27ರಂದು ಬಿಡುಗಡೆ ಆಗಲಿದೆ. ಮೇ 22ರಂದು 'ಬುಜ್ಜಿ' ಕಾರಿನ ಸಂಪೂರ್ಣ ಪರಿಚಯ ಮಾಡಿಕೊಡಲಾಗುವುದು ಎಂದು ಚಿತ್ರತಂಡ ತಿಳಿಸಿದೆ.



# ಸಣ್ಣ ವಯಸ್ಸಿನಲ್ಲಿಯೇ ನನ್ನ ಫೋಟೋ ಅಶ್ಲೀಲ ವೆಬ್‌ಗೆ ಹಾಕಿದ್ರು

ನಟಿ ಜಾನ್ವಿ ಕಪೂರ್ ಬಾಲಿವುಡ್ ಮತ್ತು ಟಾಲಿವುಡ್‌ನಲ್ಲಿ ಬೇಡಿಕೆಯ ನಟಿಯರಲ್ಲಿ ಒಬ್ಬರಾಗಿದ್ದಾರೆ. ಜ್ಯೂ. ಎನ್‌ಟಿಆರ್, ರಾಮ್ ಚರಣ್, ಸೂರ್ಯ ಸೇರಿದಂತೆ ಅನೇಕ ಸಿನಿಮಾಗಳಲ್ಲಿ ನಟಿ ತೊಡಗಿಕೊಂಡಿದ್ದಾರೆ. ಸದ್ಯ 'ಮಿಸ್ಟರ್ ಆಂಡ್ ಮಿಸೆಸ್ ಮಹಿ' ಸಿನಿಮಾ ಪ್ರಚಾರವೊಂದರಲ್ಲಿ ವೈಯಕ್ತಿಕ ಬದುಕಿನ ಬಗ್ಗೆ ನಟಿ ಮಾತನಾಡಿದ್ದಾರೆ. ಚಿಕ್ಕವಯಸ್ಸಿನಲ್ಲಿ ಅಶ್ಲೀಲ ವೆಬ್‌ಸೈಟ್‌ನಲ್ಲಿ ನನ್ನ ಫೋಟೋ ಹಾಕಿದ್ದರು ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಸಿನಿಮಾ ಪ್ರಚಾರದ ಸಂದರ್ಶನ ವೇಳೆ, 12 –13 ವರ್ಷ ವಯಸ್ಸಿನಲ್ಲಿರುವಾಗ ಸೋಷಿಯಲ್ ಮೀಡಿಯಾದಿಂದಾಗಿ ಲೈಂಗಿಕವಾಗಿ ನಾನು ಸಮಸ್ಯೆ ಎದುರಿಸಿದ್ದೆ ಎಂದು ಹೇಳಿಕೊಂಡಿದ್ದಾರೆ. ಆಗ ನನಗೆ ಚಿಕ್ಕ ವಯಸ್ಸು. ಒಮ್ಮೆ ನನ್ನ ತಾಯಿ ಮತ್ತು ತಂದೆಯೊಂದಿಗೆ ಈವೆಂಟ್‌ಗೆ ಹೋಗಿದ್ದೆ. ಆ ಚಿತ್ರಗಳು ಇಂಟರ್‌ನೆಟ್‌ನಲ್ಲಿ ವೈರಲ್ ಆಗಿತ್ತು. ಮಾರ್ಫಿಂಗ್ ಮಾಡಿ ಪೋರ್ನ್ ವೆಬ್‌ಸೈಟ್‌ಗಳಲ್ಲಿ ಹಾಕಿದ್ದರು. ಆದರೆ ಇದು ಮಾರ್ಫ್ ಮಾಡಿದ ಚಿತ್ರಗಳು ಎಂದು ಹಲವರಿಗೆ ತಿಳಿದೇ ಇರಲಿಲ್ಲ. ನಿಜ ಎಂದು ನಂಬಿದ್ದರು. ಆ ಚಿಕ್ಕ ವಯಸ್ಸಿನಲ್ಲಿಯೇ ನನಗೆ ತುಂಬಾ ಆಘಾತವಾಗಿತ್ತು. ನನ್ನ ಫ್ರೆಂಡ್ಸ್ ಕೂಡ ಗೇಲಿ ಮಾಡುತ್ತಿದ್ದರು. ಆ ವಯಸ್ಸಿನಲ್ಲಿ ಏನಾಗುತ್ತಿದೆ ಎಂದು ನನಗೆ ತಿಳಿದೆ ಇರಲಿಲ್ಲ ಎಂದಿದ್ದಾರೆ.

'ಮಿಸ್ಟರ್ ಆಂಡ್ ಮಿಸೆಸ್ ಮಹಿ' ಸಿನಿಮಾದಲ್ಲಿ ಬಾಲಿವುಡ್ ನಟ ರಾಜ್‌ಕುಮಾರ್ ರಾವ್‌ಗೆ ನಾಯಕಿಯಾಗಿ ಜಾನ್ವಿ ಕಪೂರ್ ನಟಿಸಿದ್ದಾರೆ.

# ಐತಿಹಾಸಿಕ ಹಲಗಲಿದಲ್ಲಿ ಡಾಲಿ



ಕನ್ನಡ ಚಿತ್ರರಂಗದ ಬಿಗ್ ಬಜೆಟ್ 'ಹಲಗಲಿ' ಸಿನಿಮಾ ಬಗ್ಗೆ ಇದೀಗ ಹೊಸ ಅಪ್‌ಡೇಟ್‌ವೊಂದು ಸಿಕ್ಕಿದೆ. ಡೇಟ್ಸ್ ಹೊಂದಾಣಿಕೆ ಆಗದ ಕಾರಣ ಡಾರ್ಲಿಂಗ್ ಕೃಷ್ಣ ಈ ಚಿತ್ರದಿಂದ ಹೊರನಡೆದಿದ್ದರು. ಈ ಬೆನ್ನಲ್ಲೇ ಚಿತ್ರದ ಲೀಡ್ ಪಾತ್ರಕ್ಕೆ ನಟರಾಕ್ಷಸ ಡಾಲಿ ಎಂಟ್ರಿ ಕೊಡುವ ಬಗ್ಗೆ ಸುದ್ದಿ ಹಬ್ಬಿದೆ. ನಟ ಕಮ್ ನಿರ್ಮಾಪಕ ಡಾಲಿ ಧನಂಜಯ್ ಕನ್ನಡದ ಜೊತೆ ಪರಭಾಷಾ ಸಿನಿಮಾಗಳಲ್ಲೂ ಬ್ಯುಸಿಯಾಗಿದ್ದಾರೆ. ತಮ್ಮದೇ ನಿರ್ಮಾಣ ಸಂಸ್ಥೆ ಮೂಲಕ ಹೊಸ ಪ್ರತಿಭೆಗಳಿಗೆ ಡಾಲಿ ಅವಕಾಶ ನೀಡುತ್ತಿದ್ದಾರೆ.

'ಹಲಗಲಿ' ಅತೀ ದೊಡ್ಡ ಪ್ರಾಜೆಕ್ಟ್ ಆಗಿದ್ದು, ಡಾಲಿ ಎಂಟ್ರಿ ಕೊಡುವ ಬಗ್ಗೆ ಸುದ್ದಿ ಹಬ್ಬಿದೆ. ಸಿನಿಮಾ ಕಥೆ ಮತ್ತು ಪಾತ್ರದ ಬಗ್ಗೆ ಡಾಲಿ ಮಾತನಾಡಿ ಚಿತ್ರತಂಡ ಮಾತುಕತೆ ನಡೆಸಿದೆ. ಶೀಘ್ರದಲ್ಲೇ ಶೂಟಿಂಗ್‌ಗೆ ನಡೆಯಲಿದೆ ಎನ್ನಲಾಗಿದೆ. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಗೆರಿಲ್ಲಾ ವಾರ್ ಮಾಡುವ ಮೂಲಕ ಬ್ರಿಟಿಷರಿಗೆ ಸಿಂಹಸ್ವಪ್ನರಾಗಿದ್ದ ಹಲಗಲಿ ಬೇಡರ ಕಥೆಯನ್ನು ಸಿನಿಮಾ ನಿರ್ದೇಶಕ ಸುಕೇಶ್ ಡಿ.ಕೆ. ಮಾಡುತ್ತಿದ್ದಾರೆ. ಇದೊಂದು ಐತಿಹಾಸಿಕ ಸಿನಿಮಾವಾಗಿದ್ದರಿಂದ ಮತ್ತು ಆ ಕಾಲ ಘಟ್ಟವನ್ನು ಕಟ್ಟಿಕೊಡಬೇಕಾಗಿದ್ದರಿಂದ ಬರೋಬ್ಬರಿ 80 ಕೋಟಿ ರೂಪಾಯಿಯನ್ನು ಈ ಸಿನಿಮಾಗಾಗಿ ಖರ್ಚು ಮಾಡುತ್ತಿದ್ದಾರೆ

# ಶಿವಕಾರ್ತಿಕೇಯನ್‌ಗೆ ರಶ್ಮಿಕಾ ಹೀರೋಯಿನ್



ಗ್ರೀನ್ ಸಿಗ್ನಲ್ ಕೊಟ್ರಾ?

ರಶ್ಮಿಕಾ ಮಂದಣ್ಣ ಬಹುಭಾಷಾ ನಾಯಕಿಯಾಗಿ ಬೇಡಿಕೆ ಹೆಚ್ಚಿಸಿಕೊಂಡಿದ್ದಾರೆ. ಅಲ್ಲು ಅರ್ಜುನ್, ರಣ್‌ಬೀರ್ ಕಪೂರ್, ಸಲ್ಮಾನ್ ಖಾನ್ ನಂತರ ಮತ್ತೆ ತಮಿಳಿನ ಸ್ಟಾರ್ ನಟನ ಜೊತೆ ನಟಿಸುವ ಅವಕಾಶ ಗಿಟ್ಟಿಸಿಕೊಂಡಿದ್ದಾರೆ. ಇತ್ತೀಚೆಗಷ್ಟೇ ಸಲ್ಮಾನ್ ಖಾನ್‌ಗೆ ಹೀರೋಯಿನ್ ಆಗುವ ಮೂಲಕ ಸಿಕ್ಕಾಪಟ್ಟೆ ಸುದ್ದಿಯಾಗಿದ್ದರು. ಈಗ ತಮಿಳಿನ ನಟ ಶಿವಕಾರ್ತಿಕೇಯನ್ ಚಿತ್ರಕ್ಕೆ ನಟಿ ಕೈಜೋಡಿಸಿದ್ದಾರೆ ಎನ್ನಲಾಗಿದೆ. ಅವರ ಮುಂಬರುವ ಸಿನಿಮಾಗೆ ರಶ್ಮಿಕಾ ನಾಯಕಿಯಾಗಲಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ಮೊದಲ ಬಾರಿಗೆ ಶಿವಕಾರ್ತಿಕೇಯನ್ ಮತ್ತು ರಶ್ಮಿಕಾ ಮಂದಣ್ಣ ಜೋಡಿಯಾಗಿ ಕಾಣಿಸಿಕೊಳ್ಳುವ ಸಿನಿಮಾ ಬಗ್ಗೆ ಸುದ್ದಿ ಹಬ್ಬಿದೆ. ಚಿತ್ರತಂಡ ಈಗಾಗಲೇ ನಟಿಯನ್ನು ಸಂಪರ್ಕಿಸಿ ಕಥೆ ಕೂಡ ಹೇಳಿದ್ದಾರೆ. ಆದರೆ 'ಪುಷ್ಪ' ನಟಿ ಹೊಸ ಪ್ರಾಜೆಕ್ಟ್‌ಗೆ ಗ್ರೀನ್ ಸಿಗ್ನಲ್ ಕೊಟ್ರಾ? ಎಂಬುದರ ಬಗ್ಗೆ ಮಾಹಿತಿ ಹೊರಬಿದ್ದಿಲ್ಲ. ಚಿತ್ರತಂಡ ಅಧಿಕೃತ ಘೋಷಣೆ ಮಾಡುವವರೆಗೂ ಕಾಯಬೇಕಿದೆ. ಕನ್ನಡದ 'ಕಿರಿಕ್ ಪಾರ್ಟಿ' ಸಿನಿಮಾದ ಮೂಲಕ ಚಿತ್ರರಂಗಕ್ಕೆ ಕಾಲಿಟ್ಟ ನಟಿ ರಶ್ಮಿಕಾ ಮಂದಣ್ಣ ಈಗ ಪ್ಯಾನ್ ಇಂಡಿಯಾ ಸ್ಟಾರ್ ನಟಿಯಾಗಿ ಜನಪ್ರಿಯತೆ ಪಡೆದಿದ್ದಾರೆ. ಬಾಲಿವುಡ್‌ನಲ್ಲಿ ಹೆಚ್ಚೆಚ್ಚು ಅವಕಾಶಗಳು ನಟಿಗೆ ಅರಸಿ ಬರುತ್ತಿವೆ.

# ಲವ್ ಮಿ ಎನ್ನುತ್ತಾ ಮತ್ತೆ ಎಂಟ್ರಿ ಕೊಟ್ಟ 'ಬೇಬಿ' ನಟಿ



ಟಾಲಿವುಡ್ ನಟಿ ವೈಷ್ಣವಿ ಚೈತನ್ಯ 'ಬೇಬಿ' ಸಿನಿಮಾದ ಮೂಲಕ ಸೂಪರ್ ಸಕ್ಸಸ್ ಕಂಡಿದ್ದರು. ಇದೀಗ 'ಲವ್ ಮಿ' ಎನ್ನುತ್ತಾ ಮತ್ತೆ ಟಿಟೌನ್‌ನಲ್ಲಿ ಸದ್ದು ಮಾಡುತ್ತಿದ್ದಾರೆ. ತೆಲುಗಿನ ನಟ ಆಶಿಶ್‌ಗೆ ನಾಯಕಿ ಬೇಬಿ ವೈಷ್ಣವಿ ಚೈತನ್ಯ ಎಂಟ್ರಿ ಕೊಟ್ಟಿದ್ದಾರೆ.

'ಬೇಬಿ' ಸಿನಿಮಾದಲ್ಲಿ ಆನಂದ್ ದೇವರಕೊಂಡಗೆ ನಾಯಕಿಯಾಗಿ ವೈಷ್ಣವಿ ನಟಿಸಿದ್ದರು. ಈ ಚಿತ್ರದ ಸಕ್ಸಸ್ ನಂತರ ನಟಿಗೆ ಬೇಡಿಕೆ ಹೆಚ್ಚಾಗಿತ್ತು. ತೆಲುಗಿನ ಹಲವು ಸಿನಿಮಾಗಳಿಗೆ ನಾಯಕಿಯಾಗಿ ಅವಕಾಶಗಳು ಹರಿದು ಬರುತ್ತಿವೆ. ಹೀಗಿರುವಾಗ ಈ ಬಾರಿ ಹೀರೋ ಆಶಿಶ್ ಜೊತೆ ಸೇರಿ ಹಾರರ್ ಕಥೆ ಹೇಳೋಕೆ ನಟಿ ವೈಷ್ಣವಿ ಹೊರಟಿದ್ದಾರೆ. ಎಂದೂ ನಟಿಸಿರದ ಡಿಫರೆಂಟ್ ಪಾತ್ರದಲ್ಲಿ ಬೇಬಿ ನಟಿ ಕಾಣಿಸಿಕೊಂಡಿದ್ದಾರೆ. ಸದ್ಯ 'ಲವ್ ಮಿ' ಸಿನಿಮಾದ ಟ್ರೈಲರ್ ರಿಲೀಸ್ ಆಗಿ ಅಭಿಮಾನಿಗಳ ಮೆಚ್ಚುಗೆ ಪಡೆದಿದೆ. ಹಾರರ್ ಜೊತೆ ಒಂದು ಸುಂದರ ಲವ್ ಸ್ಟೋರಿ ಕೂಡ ಸಿನಿಮಾದಲ್ಲಿದೆ. ಇದೇ ಮೇ 25ಕ್ಕೆ ಸಿನಿಮಾ ರಿಲೀಸ್ ಆಗುತ್ತಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**